ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೭೪

**ಪಟ್ಟಿ – ೦೪**

# ಕರ್ನಾಟಕ ವಿಧಾನ ಪರಿಷತ್ತು

**ನೂರ ನಲವತ್ತೊಂದನೆಯ ಅಧಿವೇಶನ**

**ಗುರುವಾರ, ದಿನಾಂಕ : ೨೪ನೇ ಸೆಪ್ಟೆಂಬರ್, ೨೦೨೦**

---

## ಸಮೂಹ – IV

೧. ಮುಖ್ಯಮಂತ್ರಿಗಳು.

೨. ಗೃಹ ಸಚಿವರು.

೩. ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು.

೪. ಜಲಸಂಪನ್ಮೂಲ ಸಚಿವರು.

೫. ಅಬಕಾರಿ ಸಚಿವರು.

---

## ಬೀದರ್ ಜಿಲ್ಲೆಯ ಕಾರಂಜಾ ಯೋಜನೆಯ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು):–**

೪೧೭(೫೫೪) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

ಬೀದರ್ ಜಿಲ್ಲೆಯ ಬ್ಯಾಲಹಳ್ಳಿ ಗ್ರಾಮದ ಹತ್ತಿರವಿರುವ ಕಾರಂಜಾ ಜಲಾಶಯದ ಕೆಳಗಡೆ ಹೈಟೆಕ್ ಉದ್ಯಾನವನ ನಿರ್ಮಿಸುವ ಪ್ರಕ್ರಿಯೆ ಯಾವ ಹಂತದಲ್ಲಿದೆ; ಇಲ್ಲದಿದ್ದಲ್ಲಿ, ಅಂತಹ ಯೋಜನೆ ಸರ್ಕಾರದ ಮುಂದಿದೆಯೇ; ಇದ್ದರೆ ಯಾವಾಗ ಪ್ರಾರಂಭಿಸಲಾಗುವುದು?

## ಬೀದರ್ ಜಿಲ್ಲೆಯ ಗೋದಾವರಿ ಬೇಸನ್ ನೀರಿನ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೧೮ (೫೫೩) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ಹರಿಯುವ ಗೋದಾವರಿ ಬೇಸನ್‌ನಿಂದ ಜಿಲ್ಲೆಗೆ ೨೨.೭ ಟಿಎಂಸಿ ನೀರು ಉಪಯೋಗಿಸಲು ಕೇಂದ್ರ ಸರ್ಕಾರದ ಬಜಾವತ್ ಆಯೋಗದಿಂದ ಅವಾರ್ಡ್ ಆಗಿರುವ ವಿಷಯ ಸರ್ಕಾರದ ಗಮನದಲ್ಲಿದೆಯೇ;

(ಆ) ಗಮನದಲ್ಲಿದ್ದರೆ, ಆ ೨೨.೭ ಟಿಎಂಸಿ ನೀರನ್ನು ಉಪಯೋಗ ಮಾಡಲು ಸರ್ಕಾರ ಯಾವ ಯಾವ ಯೋಜನೆ ರೂಪಿಸಿದೆ; ರೂಪಿಸಿರುವ ಯೋಜನೆಗಳು ಯಾವುವು; ಇಲ್ಲದಿದ್ದಲ್ಲಿ ಇದಕ್ಕೆ ಕಾರಣವೇನು?

## ಬೀದರ್ ಜಿಲ್ಲೆಯ ಪೊಲೀಸ್ ವಸತಿ ಗೃಹಗಳ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು):–**

೪೧೯ (೫೫೨) ಮಾನ್ಯ ಗೃಹ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

ಬೀದರ್ ಜಿಲ್ಲೆಯಲ್ಲಿ ಪೊಲೀಸರಿಗೆ ನಿರ್ಮಿಸಲಾದ ಅನೇಕ ವಸತಿ ಗೃಹಗಳು ಶಿಥಿಲಾವಸ್ಥೆಗೆ ಬಂದಿದ್ದು, ಅವರು ಭಯದ ವಾತಾವರಣದಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅವುಗಳನ್ನು ನವೀಕರಣಗೊಳಿಸಲು ಅಥವಾ ಹೊಸ ವಸತಿಗೃಹ ಕಟ್ಟಲು ಸರ್ಕಾರದ ಯೋಜನೆ ಇದೆಯೇ; ಇದ್ದಲ್ಲಿ, ಯಾವಾಗ ಪ್ರಾರಂಭಿಸಲಾಗುವುದು; ಇಲ್ಲದಿದ್ದಲ್ಲಿ, ಇದಕ್ಕೆ ಕಾರಣವೇನು?

## ಬೆಂಗಳೂರು ನಗರಾಭಿವೃದ್ಧಿ ಆಯುಕ್ತರ ವಿರುದ್ಧ ಕ್ರಮದ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೪೨೦ (೬೧೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

ಬೆಂಗಳೂರು ನಗರಾಭಿವೃದ್ಧಿ ಪ್ರಾಧಿಕಾರದ ಆಯುಕ್ತರು ಏಪ್ರಿಲ್ ೧೪ರಂದು ಡಾ:ಬಿ.ಆರ್.ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಅವಮಾನ ಮಾಡಿದ್ದಕ್ಕೆ ಸರ್ಕಾರ ಅವರ ವಿರುದ್ಧ ಯಾವ ಕ್ರಮ ಕೈಗೊಂಡಿದೆ; ಕೈಗೊಳ್ಳದಿದ್ದಲ್ಲಿ ಕಾರಣವೇನು?

## ರಾಜ್ಯದಲ್ಲಿ ವಿದ್ಯುತ್ ಉತ್ಪಾದನೆ ಬೇಡಿಕೆ ಹಾಗೂ ಖರೀದಿ ಬಗ್ಗೆ

**ಶ್ರೀ ಅಲ್ಲಂ ವೀರಭದ್ರಪ್ಪ (ವಿಧಾನಸಭೆಯಿಂದ ಚುನಾಯಿತರಾದವರು):–**

೪೨೧ (೫೬೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ವಿದ್ಯುತ್‌ಗೆ ಒಟ್ಟು ಎಷ್ಟು ಬೇಡಿಕೆಯಿದೆ; ಪ್ರಸ್ತುತ ರಾಜ್ಯದಲ್ಲಿ ಉತ್ಪಾದಿಸುತ್ತಿರುವ ವಿದ್ಯುತ್‌ನ ಪ್ರಮಾಣವೆಷ್ಟು;

(ಆ) ಸರ್ಕಾರದ ವತಿಯಿಂದ ಹೊಸ ಇಂಧನ ಉತ್ಪಾದನೆ ಮಾಡುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ; ಇದಕ್ಕಾಗಿ ತಗಲುವ ವೆಚ್ಚವೆಷ್ಟು ;

(ಇ) ನೆರೆ ರಾಜ್ಯಗಳಿಂದ ವಿದ್ಯುತ್ ಖರೀದಿಸಲು ತಗಲುವ ವೆಚ್ಚವೆಷ್ಟು; ಪ್ರತಿ ವರ್ಷ ಎಷ್ಟು ವಿದ್ಯುತನ್ನು ಖರೀದಿಸಲಾಗುತ್ತಿದೆ; ಪ್ರತಿ ಯೂನಿಟ್‌ಗೆ ವಿಧಿಸಿದ ದರವೆಷ್ಟು ? (ವಿವರ ನೀಡುವುದು)

## ರಾಜ್ಯದಲ್ಲಿ ಸರ್ಕಾರ ಮತ್ತು ಸರ್ಕಾರೇತರ ಸಂಸ್ಥೆಗಳಿಂದ ವಿದ್ಯುತ್ ಉತ್ಪಾದನೆ ಪ್ರಮಾಣ ದರ ನಿಗಧಿ ಮತ್ತು ರಾಜ್ಯಕ್ಕೆ ಆದಾಯ ಸ್ವೀಕಾರದ ಬಗ್ಗೆ

**ಶ್ರೀ ಅಲ್ಲಂ ವೀರಭದ್ರಪ್ಪ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೪೨೨ (೫೬೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಸರ್ಕಾರ ಮತ್ತು ಸರ್ಕಾರೇತರ ಸಂಸ್ಥೆಗಳಿಂದ ಉತ್ಪಾದನೆ ಮಾಡುತ್ತಿರುವ ಒಟ್ಟು ವಿದ್ಯುತ್ ಉತ್ಪಾದನೆ ಎಷ್ಟು;

(ಆ) ನವೀಕರಿಸಬಹುದಾದ ವಿವಿಧ ಮೂಲ ಇಂಧನಗಳಾದ ಪವನ ವಿದ್ಯುತ್ ಯೋಜನೆ, ಸೌರ ವಿದ್ಯುತ್ ಯೋಜನೆ, ಜಲ ವಿದ್ಯುತ್ ಯೋಜನೆಗಳು ರಾಜ್ಯದ ಯಾವ ಯಾವ ಭಾಗಗಳಲ್ಲಿ ಪ್ರಸ್ತುತ ಚಾಲ್ತಿಯಲ್ಲಿದೆ;

(ಇ) ಈ ಯೋಜನೆಗಳಿಂದ ಎಷ್ಟು ಪ್ರಮಾಣ ವಿದ್ಯುತ್ ಉತ್ಪಾದನೆ ಮಾಡಲಾಗುತ್ತಿದೆ; (ಸಂಪೂರ್ಣ ವಿವರ ನೀಡುವುದು)

(ಈ) ಉತ್ಪಾದನೆಯಾದ ವಿದ್ಯುಚ್ಛಕ್ತಿಯನ್ನು ಯಾವ ಬೆಲೆಯಲ್ಲಿ ಮಾರಾಟ ಮಾಡಲಾಗುತ್ತಿದೆ; ಕಳೆದ ೩ ವರ್ಷಗಳಿಂದ ಈ ಉತ್ಪಾದನೆಯಿಂದ ಸರ್ಕಾರಕ್ಕೆ ಎಷ್ಟು ಪ್ರಮಾಣದ ಆದಾಯ ಬಂದಿದೆ ? (ಸಂಪೂರ್ಣ ವಿವರ ನೀಡುವುದು)

## ಬೆಂಗಳೂರಿನಲ್ಲಿ ಸುರಿಯುವ ಮಳೆಯ ನೀರನ್ನು ಸಂಗ್ರಹಿಸಲು ಯೋಜನೆ ರೂಪಿಸುವ ಕುರಿತು

**ಶ್ರೀ ಅಲ್ಲಂ ವೀರಭದ್ರಪ್ಪ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೨೩ (೬೧೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರಿನಲ್ಲಿ ಈವರೆಗೆ ಅಂದರೆ ೯೦ ದಿನಗಳು ನಿರಂತರವಾಗಿ ಮಳೆ ಬಂದಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಿಬಿಎಂಪಿ, ಮತ್ತು ಸರ್ಕಾರ ಮಳೆ ನೀರನ್ನು ಸಂಗ್ರಹಿಸಲು ಈವರೆಗೆ ಯಾವ ಯೋಜನೆಯನ್ನೂ ರೂಪಿಸದಿರುವುದು ನಿಜವೇ;

(ಇ) ಮುಂದಿನ ವರ್ಷವಾದರೂ ಯೋಜನೆ ರೂಪಿಸಿ ನೀರನ್ನು ಸಂಗ್ರಹಿಸಲು ಯೋಜಿಸಲಾಗಿದೆಯೇ;

(ಈ) ಇದನ್ನು ಪ್ರತಿಯೊಂದು ಹಳ್ಳಿ ಮತ್ತು ಪಟ್ಟಣಗಳಲ್ಲಿ ಮಾಡಲು ಸರ್ಕಾರ ಯೋಜನೆ ರೂಪಿಸಲು ಯೋಜಿಸಿದೆಯೇ; ಹಾಗಿದ್ದಲ್ಲಿ ಯಾವ ರೀತಿಯ ಕ್ರಮ ಕೈಗೊಳ್ಳಲಾಗಿದೆ?

## ತುಂಗಭದ್ರ ಜಲಾಶಯದ ಇನ್ನೀರು ಸಂಗ್ರಹಿಸಲು ಸಮಾನಾಂತರ ಡ್ಯಾಂನ್ನು ನವಲಿ ಹತ್ತಿರ ನಿರ್ಮಿಸುವ ಕುರಿತು

**ಶ್ರೀ ಅಲ್ಲಂ ವೀರಭದ್ರಪ್ಪ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೨೪ (೫೯೮) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತುಂಗಭದ್ರ ಜಲಾಶಯದಲ್ಲಿ ಮಳೆಗಾಲದಲ್ಲಿ ನೀರು ತುಂಬಿ ಹರಿಯುತ್ತಿರುವುದರಿಂದ ನವಲಿಯ ಹತ್ತಿರ ಸಮಾನಾಂತರ ಡ್ಯಾಂ ನಿರ್ಮಿಸಲು ಈಗಾಗಲೇ ಡಿ.ಪಿ.ಆರ್. ಆಗಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದಲ್ಲಿ, ಇದಕ್ಕಾಗಿ ನಿಗಧಿಪಡಿಸಿದ ಅನುದಾನವೆಷ್ಟು ಮತ್ತು ಬಿಡುಗಡೆ ಮಾಡಿದ ಅನುದಾನವೆಷ್ಟು;

(ಇ) ಸದರಿ ಕಾಮಗಾರಿ ಯಾವ ಹಂತದಲ್ಲಿದೆ ?

## ರಾಜ್ಯದಲ್ಲಿರುವ ಅನುದಾನಿತ ಶಾಲಾ/ಕಾಲೇಜುಗಳಲ್ಲಿ ಹುದ್ದೆ ಭರ್ತಿ ಮಾಡಲು ಆರ್ಥಿಕ ಇಲಾಖೆಯು ಆರ್ಥಿಕ ಮಿತವ್ಯಯದ ಆದೇಶವನ್ನು ಹಿಂಪಡೆಯುವ / ಸಡಿಲಗೊಳಿಸುವ ಕುರಿತು

**ಶ್ರೀ ಅರುಣ ಶಹಾಪೂರ (ಶಿಕ್ಷಕರ ಕ್ಷೇತ್ರ) :–**

೪೨೫ (೬೧೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಅನುದಾನಿತ ಪ್ರಾಥಮಿಕ / ಪ್ರೌಢ/ಪದವಿಪೂರ್ವ/ ಪದವಿ ಕಾಲೇಜುಗಳ ಸಿಬ್ಬಂದಿ ವರ್ಗಗಳ ಅನುದಾನಕ್ಕೆ ಒಳಪಡಿಸುವ ಪ್ರಕ್ರಿಯೆಗೆ ಆರ್ಥಿಕ ಮಿತವ್ಯಯ ಹೇರಲಾಗಿದೆಯೇ;

(ಆ) ಸದರಿ ಅನುದಾನಿತ ಕಾಲೇಜುಗಳಲ್ಲಿ ಮಂಜೂರಾದ ಖಾಲಿ ಹುದ್ದೆಗಳ ಭರ್ತಿಗೆ ಸಂದರ್ಶನ ನಡೆದು ಇಲಾಖೆಯ ವಿವಿಧ ಹಂತಗಳಲ್ಲಿ ಪ್ರಕ್ರಿಯೆಯಲ್ಲಿರುವ ಹುದ್ದೆಗಳ ಮಾಹಿತಿ ನೀಡುವುದು;

(ಇ) ಆರ್ಥಿಕ ಮಿತವ್ಯಯದ ಆದೇಶವನ್ನು ಹಿಂಪಡೆಯುವಲ್ಲಿ ತಕ್ಷಣ ಕ್ರಮ ಕೈಗೊಳ್ಳಲು ಇರುವ ಅಡೆತಡೆಗಳೇನು;

(ಈ) ಯಾವ ಕಾಲ ಮಿತಿಯೊಳಗೆ ಅನುದಾನಕ್ಕೆ ಒಳಪಡಿಸಲು ಕ್ರಮ ಕೈಗೊಳ್ಳಲಾಗುವುದು?

## ಮಂಡ್ಯ ಜಿಲ್ಲಾ ವ್ಯಾಪ್ತಿಯಲ್ಲಿ ಸಣ್ಣ ನೀರಾವರಿ ಇಲಾಖೆಯಿಂದ ಮಂಜೂರಾದ ಕಾಮಗಾರಿಗಳ ಬಗ್ಗೆ

**ಶ್ರೀ ಎನ್.ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೨೬ (೫೦೦) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೮–೧೯ನೇ ಸಾಲಿನಿಂದ ೨೦೨೦–೨೧ನೇ ಸಾಲಿನವರೆಗೆ ಮಂಡ್ಯ ಜಿಲ್ಲೆ ವ್ಯಾಪ್ತಿಯಲ್ಲಿ ಸಣ್ಣ ನೀರಾವರಿ ಇಲಾಖೆವತಿಯಿಂದ ಮಂಜೂರಾದ ಕಾಮಗಾರಿಗಳಾವುವು; (ತಾಲ್ಲೂಕುವಾರು ಅಂದಾಜು ಪಟ್ಟಿ ಸಹಿತ ಮಾಹಿತಿ ನೀಡುವುದು)

(ಆ) ಮಂಜೂರಾದ ಕಾಮಗಾರಿಗಳಲ್ಲಿ ಈವರೆವಿಗೂ ಉದ್ಘಾಟನೆ ಮಾಡಿ ಪ್ರಾರಂಭ ಮಾಡಿರುವ ಕಾಮಗಾರಿಗಳು ಯಾವುವು; (ತಾಲ್ಲೂಕುವಾರು ಪ್ರತ್ಯೇಕವಾಗಿ ವಿವರವನ್ನು ನೀಡುವುದು)

(ಇ) ನಾಗಮಂಗಲ ತಾಲ್ಲೂಕು ಹೊನಕೆರೆ ಹೋಬಳಿ ಶ್ಯಾನುಭೋಗನಹಳ್ಳಿ ವ್ಯಾಪ್ತಿಯಲ್ಲಿ ಕಲ್ಲುಕೊರೆ ಸಮೀಪ ಸುಮಾರು ೧೦೦.೦೦ಲಕ್ಷ ಅಂದಾಜಿನಲ್ಲಿ ಚೆಕ್ ಡ್ಯಾಂ ನಿರ್ಮಾಣ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಪ್ರಸ್ತುತ ಚಾಲ್ತಿಯಲ್ಲಿರುವ ಕಲ್ಲುಕೊರೆ ಹತ್ತಿರದಲ್ಲಿಯೇ ಚೆಕ್ ಡ್ಯಾಂ ನಿರ್ಮಾಣ ಮಾಡುತ್ತಿರುವುದರಿಂದ ಚೆಕ್ ಡ್ಯಾಂಗೆ ಹಾನಿಯಾಗು-ವುದಿಲ್ಲವೆ; ಈ ಸಂಬಂಧ ಕಾಮಗಾರಿಗೆ ಸ್ಥಳ ಆಯ್ಕೆ ಮಾಡುವಾಗ ಕಲ್ಲುಕೊರೆ ಪಕ್ಕದಲ್ಲಿಯೇ ಸ್ಥಳ ಆಯ್ಕೆ ಮಾಡಿರುವ ಅಧಿಕಾರಿಗಳ ವಿರುದ್ಧ ಸರ್ಕಾರ ತೆಗೆದುಕೊಂಡ ಕ್ರಮಗಳೇನು? (ವಿವರ ನೀಡುವುದು)

## ಭಾರತೀಯ ರಿಸರ್ವ್ ಬ್ಯಾಂಕಿನಿಂದ ಪಡೆದ ಸಾಲದ ಬಗ್ಗೆ

**ಶ್ರೀ ಎನ್.ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೨೭ (೬೩೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಆಗಸ್ಟ್-೨೦೧೯ ರಿಂದ ಇಲ್ಲಿಯವರೆಗೆ ರಾಜ್ಯ ಸರ್ಕಾರ ಭಾರತೀಯ ರಿಸರ್ವ್ ಬ್ಯಾಂಕ್‌ನಿಂದ ಎಷ್ಟು ಸಾಲ ಪಡೆಯ-ಲಾಗಿದೆಯೇ; (ವಿವರ ನೀಡುವುದು)

(ಆ) ಪಡೆದಂತಹ ಸಾಲವನ್ನು ಯಾವ ಯಾವ ಉದ್ದೇಶಕ್ಕಾಗಿ ಬಳಸಲಾಗಿದೆ; (ವಿವರವಾದ ಮಾಹಿತಿ ನೀಡುವುದು) ಸದರಿ ಉದ್ದೇಶಕ್ಕೆ ಕಳೆದ ಸಾಲಿನ ಬಜೆಟ್‌ನಲ್ಲಿ ಎಷ್ಟು ಮೊತ್ತವನ್ನು ನಿಗದಿಪಡಿಸಲಾಗಿತ್ತು; ಪ್ರಸ್ತುತ ಹೆಚ್ಚುವರಿ ಎಷ್ಟು ಮೊತ್ತವನ್ನು ಖರ್ಚು ಮಾಡಲಾಗಿದೆ;

(ಇ) ರಾಜ್ಯ ಸರ್ಕಾರ ಇತರೆ ಬ್ಯಾಂಕ್‌ಗಳಿಂದ ಸಾಲ ಪಡೆದ ವಿವರವನ್ನು ನೀಡುವುದು ಕೋವಿಡ್–೨೦೧೯ ಸಂಬಂಧ ಇಲ್ಲಿಯವರೆಗೆ ವೈದ್ಯಕೀಯ ಉಪಕರಣ, ಚಿಕಿತ್ಸೆ ಸಂಶೋಧನೆ, ಪಿ.ಪಿ.ಇ ಕಿಟ್ ವೆಂಟಿಲೇಟರ್, ಇತರೆ ಮೂಲ ಸೌಲಭ್ಯಕ್ಕೆ ಹಾಗೂ ಆಸ್ಪತ್ರೆ ಮೇಲ್ದರ್ಜೆ ಮಾಡಲು ಭರಿಸುವ ಮೊತ್ತವನ್ನು ಪ್ರತ್ಯೇಕವಾಗಿ ನೀಡುವುದು ;

(ಈ) ಮಂಡ್ಯ ಜಿಲ್ಲೆಯಲ್ಲಿ ಕೋವಿಡ್–೨೦೧೯ ಸಂಬಂಧ ಇಲ್ಲಿಯವರೆಗೆ ವೈದ್ಯಕೀಯ ಉಪಕರಣ, ಚಿಕಿತ್ಸೆ ಸಂಶೋಧನೆ, ಪಿ.ಪಿ.ಇ ಕಿಟ್ ವೆಂಟಿಲೇಟರ್, ಇತರೆ ಮೂಲ ಸೌಲಭ್ಯಕ್ಕೆ ಹಾಗೂ ಆಸ್ಪತ್ರೆ ಮೇಲ್ದರ್ಜೆ ಮಾಡಲು ಭರಿಸುವ ಮೊತ್ತವೆಷ್ಟು? (ತಾಲ್ಲೂಕುವಾರು ಪ್ರತ್ಯೇಕವಾಗಿ ವಿವರ ನೀಡುವುದು)

## ಅಬಕಾರಿ ಇಲಾಖೆಯ ತೆರಿಗೆ ಬಾಕಿ ಬಗ್ಗೆ

**ಶ್ರೀ ಎನ್.ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೨೮ (೫೦೨) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳಿಂದ ವಿವಿಧ ವರ್ಗಗಳ ಪರವಾನಗಿಯಿಂದ/ ಅಬಕಾರಿ ಗುತ್ತಿಗೆದಾರರಿಂದ ಹಾಗೂ ಡಿಸ್ಟಲರಿಗಳಿಂದ ಅಬಕಾರಿ ಇಲಾಖೆಗೆ ಬರಬೇಕಾಗಿರುವ ಬಾಕಿ ತೆರಿಗೆ ಹಣವೆಷ್ಟು; (ಡಿಸ್ಟಲರಿವಾರು/ಕಂಪನಿವಾರು/ಇವುಗಳ ಮಾಲೀಕರು/ಸಂಪೂರ್ಣ ಮಾಹಿತಿ ನೀಡುವುದು)

(ಆ) ಈ ಬಾಕಿ ಉಳಿಸಿಕೊಂಡಿರುವ ತೆರಿಗೆ ಹಣವನ್ನು ಇಲ್ಲಿಯವರೆಗೂ ವಸೂಲು ಮಾಡದಿರಲು ಕಾರಣವೇನು; ಈ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮವೇನು ಎಷ್ಟು ವರ್ಷಗಳ ಬಾಕಿ ಇಟ್ಟುಕೊಂಡಿದ್ದಾರೆ. (ವಿವರ ನೀಡುವುದು)

(ಇ) ಬಾಕಿ ಉಳಿಸಿಕೊಂಡಿರುವ ತೆರಿಗೆ ಹಣವನ್ನು ಎಷ್ಟು ದಿವಸಗಳಲ್ಲಿ ವಸೂಲು ಮಾಡಲಾಗುವುದು; (ವಿವರ ನೀಡುವುದು)

(ಈ) ಈ ಹಿಂದೆ ಅಬಕಾರಿ ಇಲಾಖೆಯಿಂದ ಸಾರ್ವಜನಿಕ ಲೆಕ್ಕ ಪತ್ರ ಸಮಿತಿಯ ಮುಂದೆ ಪ್ರಕರಣಗಳಿರುವ ಅಂಶವನ್ನು ಅಬಕಾರಿ ಇಲಾಖೆ ಆಯುಕ್ತರು ಸ್ಪಷ್ಟಪಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಅಂತಹ ಪ್ರಕರಣಗಳು ಎಷ್ಟಿವೆ? (ಸಂಪೂರ್ಣ ವಿವರ ನೀಡುವುದು)

## ಬಿ.ಬಿ.ಎಂ.ಪಿ ನೌಕರರ ಭವಿಷ್ಯನಿಧಿ ಪಾವತಿ ಬಗ್ಗೆ

**ಶ್ರೀ ಎನ್.ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೨೯ (೫೦೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ೨೦೧೦ರಿಂದ ೨೦೧೮ರ ಅವಧಿಯಲ್ಲಿ ನಿಯೋಜನೆಯ ಮೇರೆಗೆ ಕೇಂದ್ರ ಕಛೇರಿಯಲ್ಲಿ ಕಾರ್ಯನಿರ್ವಹಿಸಿದ ಅಭಿಯಂತರುಗಳು, ನೌಕರರುಗಳು ಹಾಗೂ ಅಧಿಕಾರಿಗಳ ವೇತನದಲ್ಲಿ ಸಾಮಾನ್ಯ ಭವಿಷ್ಯನಿಧಿ ಬಾಬ್ತು ಕಟಾವು ಮಾಡಿದ ಮೊತ್ತವನ್ನು ಮಹಾ ಲೆಕ್ಕಪಾಲರ ಮುಖೇನ ಸಂಬಂಧಪಟ್ಟವರ ಖಾತೆಗೆ ಜಮಾ ಮಾಡಿರುವ ಹಾಗೂ ಮಾಡದೇ ಇರುವ ಪ್ರತೀ ಅಧಿಕಾರಿಯ ಹೆಸರು, ಪದನಾಮ ಹಾಗೂ ಖಾತೆಗೆ ಜಮಾ ಮಾಡಿರುವ ಮತ್ತು ಜಮಾ ಮಾಡದಿರುವ ವಿವರ ದಿನಾಂಕದೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು ;

(ಆ) ಈ ಕಾರ್ಯ ನಿರ್ವಹಿಸುತ್ತಿದ್ದ ವಿಷಯ ನಿರ್ವಾಹಕರು ಹಾಗೂ ಸಂಬಂಧಪಟ್ಟ ಅಧಿಕಾರಿಗಳ ವಿವರ ಮತ್ತು ಕರ್ತವ್ಯ ನಿರ್ಲಕ್ಷ ಮಾಡಿದ್ದಲ್ಲಿ, ಅಂತವರ ವಿರುದ್ಧ ಸರ್ಕಾರ ತೆಗೆದುಕೊಂಡಿರುವ ಕ್ರಮದ ಬಗ್ಗೆ ವಿವರ ನೀಡುವುದು;

(ಇ) ಈ ಬಗ್ಗೆ ಬಾದಿತ ಅಭಿಯಂತರುಗಳ, ನೌಕರರುಗಳು ಹಾಗೂ ಅಧಿಕಾರಿಗಳು ಈವರೆಗೆ ಸಲ್ಲಿಸಿರುವ ಮನವಿಗಳೆಷ್ಟು ? (ವಿವರ ಮತ್ತು ತೆಗೆದುಕೊಂಡಿರುವ ಕ್ರಮದ ಬಗ್ಗೆ ವಿವರ ನೀಡುವುದು)

## ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಲ್ಲಿ ಬದಲಿ ನಿವೇಶನ ಹಂಚಿಕೆಯಲ್ಲಿನ ಸಮಸ್ಯೆ ಬಗ್ಗೆ

**ಶ್ರೀ ಅಡಗೂರ್ ಹೆಚ್.ವಿಶ್ವನಾಥ್(ನಾಮ ನಿರ್ದೇಶನ ಹೊಂದಿದವರು) :–**

೪೩೦ (೫೮೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸಾರ್ವಜನಿಕರಿಂದ ನಿವೇಶನ/ ಜಮೀನುಗಳನ್ನು ವಶಪಡಿಸಿಕೊಂಡು ಸಂಬಂಧಿಸಿದವರಿಗೆ ಬದಲಿ ನಿವೇಶನಗಳನ್ನು ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ನಿವೇಶನ/ ಜಮೀನುಗಳ ಸ್ವಾಧೀನದ ಬದಲಿಗೆ ಬದಲಿ ನಿವೇಶನ ಕೋರಿ ಅರ್ಜಿ ಸಲ್ಲಿಸಿರುವ ಫಲಾನುಭವಿಗಳ ವಿವರ ನೀಡುವುದು;

(ಇ) ಸಾರ್ವಜನಿಕರ ಜಮೀನು/ ನಿವೇಶನಗಳನ್ನು ಸ್ವಾಧೀನಪಡಿಸಿಕೊಂಡು ಸಂಬಂಧಿಸಿದವರಿಗೆ ಬದಲಿ ನಿವೇಶನ ನೀಡದಿರಲು ಕಾರಣವೇನು;

(ಈ) ಬದಲಿ ನಿವೇಶನಕ್ಕೆ ಅರ್ಹರಾಗಿದ್ದು ಹಂಚಿಕೆಯಾಗದ ಫಲಾನುಭವಿಗಳ ಪಟ್ಟಿ ನೀಡುವುದು?

## ಬಿ.ಎಂ.ಆರ್.ಸಿ.ಎಲ್. ನಲ್ಲಿ ಗುತ್ತಿಗೆ ನೌಕರರ ನೇಮಕಾತಿ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೪೩೧ (೫೪೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಮೆಟ್ರೋ ರೈಲು ನಿಗಮ (BMRCL) ದಲ್ಲಿ ಹಾಲಿ ಗುತ್ತಿಗೆಯಡಿ ಕೆಲಸ ನಿರ್ವಹಿಸುತ್ತಿರುವ ಉದ್ಯೋಗಿಗಳ ಸಂಖ್ಯೆ ಎಷ್ಟು; (ಉದ್ಯೋಗಿಗಳ ಹೆಸರು, ಹುದ್ದೆ, ಮಾಸಿಕ ಪಡೆಯುತ್ತಿರುವ ವೇತನ ಸೇವೆಗೆ ಸೇರಿದ ದಿನಾಂಕದೊಂದಿಗೆ ವಿವರವಾದ ಮಾಹಿತಿ ನೀಡುವುದು)

(ಆ) ಸದರಿ ನೌಕರರಲ್ಲಿ ಕರ್ನಾಟಕದವರೆಷ್ಟು ; ಬೇರೆ ರಾಜ್ಯದವರೆಷ್ಟು ; (ಹೆಸರು ವಿಳಾಸದೊಂದಿಗೆ ಮಾಹಿತಿ ನೀಡುವುದು)

(ಇ) ಮೆಟ್ರೋ ನಿಗಮಕ್ಕೆ ಸಾವಿರಾರು ಗುತ್ತಿಗೆ ನೌಕರರನ್ನು ಯಾವ ಮಾನದಂಡದ ಮೇಲೆ ನೇಮಕಾತಿ ಮಾಡಿಕೊಳ್ಳಲಾಗಿದೆ ; ದಿನಪತ್ರಿಕೆಯಲ್ಲಿ ಜಾಹೀರಾತು ನೀಡಿ ನೇಮಕ ಮಾಡಿಕೊಳ್ಳಾಗಿದೆಯೇ ; (ಮಾಹಿತಿ ನೀಡುವುದು)

(ಈ) ಜನಪ್ರತಿನಿಧಿಗಳು ಶಿಫಾರಸ್ಸು ಮಾಡಿದ ಯಾವ ಅಭ್ಯರ್ಥಿಗಳಿಗೂ ಕೆಲಸ ನೀಡದೆ ಅಧಿಕಾರಿಗಳು ತಮ್ಮ ಮನಸ್ಸಿಗೆ ಬಂದಂತೆ ಗುತ್ತಿಗೆ ನೌಕರರನ್ನು ನೇಮಕಾತಿ ಮಾಡಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ನೇಮಕಗೊಂಡ ಗುತ್ತಿಗೆ ನೌಕರರಲ್ಲಿ ಜನಪ್ರತಿನಿಧಿಗಳು ಶಿಫಾರಸ್ಸು ಮಾಡಿದವರೆಷ್ಟು ; ಅಧಿಕಾರಿಗಳು ನೇರವಾಗಿ ನೇಮಕ ಮಾಡಿಕೊಂಡವರೆಷ್ಟು ;

(ಉ) ಕನ್ನಡಿಗ ಅಭ್ಯರ್ಥಿಗಳಿಗೆ ಅನ್ಯಾಯ ಮಾಡಿದ ಅಧಿಕಾರಿಗಳ ಮೇಲೆ ಸರ್ಕಾರ ಯಾವ ಕ್ರಮಕೈಗೊಳ್ಳಲಿದೆ ?

## ರಾಜ್ಯ ಮಟ್ಟದ ಸರ್ಕಾರಿ ಕಛೇರಿಗಳನ್ನು ಸುವರ್ಣ ಸೌಧಕ್ಕೆ ಸ್ಥಳಾಂತರಿಸುವ ಕುರಿತು

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೪೩೨ (೫೮೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರವು ಕೆಲವು ಪ್ರಮುಖವಾದಂತಹ ರಾಜ್ಯ ಮಟ್ಟದ ಕಛೇರಿಗಳನ್ನು ಸುವರ್ಣ ಸೌಧ ಬೆಳಗಾವಿಗೆ ಸ್ಥಳಾಂತರ ಮಾಡಲು ಆದೇಶ ಹೊರಡಿಸಿದ್ದು ನಿಜವೇ ; (ವಿವರ ನೀಡುವುದು)

(ಆ) ಇಲ್ಲಿಯವರೆಗೆ ಎಷ್ಟು ರಾಜ್ಯ ಮಟ್ಟದ ಕಛೇರಿಗಳು ಬೆಳಗಾವಿಯ ಸುವರ್ಣ ಸೌಧಕ್ಕೆ ಸ್ಥಳಾಂತರಗೊಂಡಿವೆ ; (ಅವುಗಳ ಹೆಸರು ಮತ್ತು ಸ್ಥಳಾಂತರಗೊಂಡ ದಿನಾಂಕದೊಂದಿಗೆ ವಿವರ ನೀಡುವುದು)

(ಇ) ದಿನಾಂಕ: ೩೦–೦೬–೨೦೨೦ ರಂದು ಸರ್ಕಾರದ ಆದೇಶ ಸಂಖ್ಯೆ:ಯೋಇ ೭೫ ಯೋಪರ ೨೦೧೮ (ಭಾಗ–೬) ಪ್ರಕಾರ ಬೆಳಗಾವಿಯಲ್ಲಿ ಬೇರೆ ಬೇರೆ ಕಡೆ ಇರುವ ಕಛೇರಿಗಳನ್ನು ಸುವರ್ಣ ಸೌಧಕ್ಕೆ ಸ್ಥಳಾಂತರ ಮಾಡಲಾಗಿದೆ ಎಂದು ತಿಳಿಸಿರುವುದು ನಿಜವೇ ; ನಿಜವಿದ್ದಲ್ಲಿ, ಕಾರಣಗಳೇನು ;

(ಈ) ರಾಜ್ಯ ಮಟ್ಟದ ಕಛೇರಿಗಳನ್ನು ಸ್ಥಳಾಂತರ ಮಾಡಲು ಹಾಗೂ ಅಧಿಕಾರ ವಿಕೇಂದ್ರೀಕರಣ ಮಾಡಲು ಸರ್ಕಾರ ತೀರ್ಮಾನ ತೆಗೆದುಕೊಂಡಿರುವುದು ನಿಜವೇ ; ನಿಜವಿದ್ದಲ್ಲಿ, ರಾಜ್ಯ ಮಟ್ಟದ ಕಛೇರಿಗಳನ್ನು ಸ್ಥಳಾಂತರ ಮಾಡದಿರಲು ಕಾರಣವೇನು ;

(ಉ) ಈಗಲಾದರೂ ಸರ್ಕಾರ ತಕ್ಷಣ ರಾಜ್ಯ ಮಟ್ಟದ ಕಛೇರಿಗಳನ್ನು ಸ್ಥಳಾಂತರ ಮಾಡಲು ಕ್ರಮ ಕೈಗೊಳ್ಳುವುದೇ ?

## ನಾಲೆಗಳ ಮುಖಾಂತರ ನೀರು ಹರಿಸುವ ಬಗ್ಗೆ

**ಶ್ರೀ ಬಸವರಾಜ ಪಾಟೀಲ ಇಟಗಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೩೩ (೧೦) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಎನ್‌ಆರ್‌ಬಿಸಿ ನ ೧೫, ೧೬, ೧೭ ಮತ್ತು ೧೮ನೇ ಡಿಸ್ಟ್ರಿಬ್ಯೂಟರ್‌ನಲ್ಲಿ ಸುಮಾರು ೨೦ ಸಾವಿರ ಹೆಕ್ಟೇರ್ ಪ್ರದೇಶದ ನಾಲೆಗಳ ಮುಖಾಂತರ ನೀರು ಬಾರದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮವೇನು ;

(ಇ) ನಾಲೆಗಳ ಮುಖಾಂತರ ನೀರು ಹರಿಸಲು ಯಾವಾಗ ಕ್ರಮಕೈಗೊಳ್ಳಲಾಗುವುದು ?

## ನಾಲೆಗಳಿಗೆ ಸಿಟಿಸಿ ನಿರ್ಮಾಣ

**ಶ್ರೀ ಬಸವರಾಜ ಪಾಟೀಲ ಇಟಗಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೩೪ (೦೯) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ಜಿಲ್ಲೆ, ದೇವದುರ್ಗ ತಾಲ್ಲೂಕಿನ ನದಿ ಪಾತ್ರದಲ್ಲಿರುವ ಗ್ರಾಮಗಳ ನಾಲಾ ದಾವಿ ಜಮೀನುಗಳಿಗೆ ರೈತರು ಹೋಗಲು ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ನಾಲೆಗಳಲ್ಲಿ ಹೆಚ್ಚು ಕ್ಯಾನಲ್‌ಗಳ ಸಿ ಪೇಜ್ ನೀರು ಬರುವುದರಿಂದ ರೈತರಿಗೆ ಅನುಕೂಲವಾಗುವ ರೀತಿ ಎಷ್ಟು ಬ್ರಿಡ್ಜ್ ಅಥವಾ ಬಾಕ್ಸ್ ಕಲವರಟ್ ನಿರ್ಮಿಸಲಾಗಿದೆ ;

(ಇ) ಇನ್ನು ಎಷ್ಟು ಸಿಟಿಸಿ ಗಳ ನಿರ್ಮಾಣ ಮಾಡಬೇಕಾಗಿದೆ ;

(ಈ) ಈ ಕಾಮಗಾರಿಗಳನ್ನು ಯಾವಾಗ ಕೈಗೆತ್ತಿಕೊಳ್ಳಲಾಗುವುದು ?

## ಪಿಂಚಣಿ ಯೋಜನೆ ಕುರಿತು

**ಶ್ರೀಮತಿ ಭಾರತಿ ಶೆಟ್ಟಿ (ನಾಮನಿರ್ದೇಶನ ಹೊಂದಿದವರು) :–**

೪೩೫ (೫೯೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ನೂತನ ಪಿಂಚಣಿ ಯೋಜನೆಯಿಂದ ಹಿಂದಿನ ಪಿಂಚಣಿ ಯೋಜನೆಗೆ ವರ್ಗಾವಣೆಗೊಳ್ಳಲು ಎಷ್ಟು ಮಂದಿ ಸರ್ಕಾರಿ ನೌಕರರು ಮತ್ತು ಅಧಿಕಾರಿಗಳಿಂದ ಕೋರಿಕೆಗಳನ್ನು ಸರ್ಕಾರವು ಸ್ವೀಕರಿಸಿದೆ ; (ಕೇಂದ್ರ ಸರ್ಕಾರವು ನ್ಯಾಯಾಲಯದ ಆದೇಶದಂತೆ ಮಾರ್ಪಡಿಸಿರುವ ರೀತಿಯಲ್ಲಿ)

(ಆ) ಈ ಕುರಿತು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ;

(ಇ) ತೀರ್ಮಾನವು ವಿಳಂಬವಾದಂತೆ ಅಧಿಕಾರಿಗಳ ಮತ್ತು ನೌಕರರ ವೇತನದಿಂದ NPC ಬಾಬ್ತು ಕಟಾಯಿಸುವ ಸಮಸ್ಯೆಯಿಂದ ಸರ್ಕಾರ ಪಾರು ಮಾಡುವುದೇ ;

(ಈ) ಕೇಂದ್ರ ಸರ್ಕಾರದ ಮಾದರಿಯನ್ನು ಕೂಡಲೇ ರಾಜ್ಯ ಸರ್ಕಾರ ಜಾರಿಗೊಳಿಸುವುದೇ ?

## ಆರನೇ ವೇತನದ ಶಿಫಾರಸ್ಸುಗಳ ಕುರಿತು

**ಶ್ರೀಮತಿ ಭಾರತಿ ಶೆಟ್ಟಿ (ನಾಮನಿರ್ದೇಶನ ಹೊಂದಿದವರು) :–**

೪೩೬ (೫೯೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೬ನೇ ವೇತನ ಆಯೋಗದಿಂದ ಆಡಳಿತತ್ಮಾಕ ಸುಧಾರಣೆ ವರದಿ ಅಳವಡಿಕೆ ಕುರಿತಂತೆ ರಚಿಸಲಾಗಿರುವ ಸಂಪುಟದ ಉಪ ಸಮಿತಿ ಮಾಡಿರುವ ಶಿಫಾರಸ್ಸುಗಳಾವುವು ; (ವಿವರ ಒದಗಿಸುವುದು)

(ಆ) ಇನ್ನು ಶಿಫಾರಸ್ಸುಗಳು ಬರದಿದ್ದಲ್ಲಿ, ಆಡಳಿತ ಸುಧಾರಣಾ ವರದಿಯ ಉದ್ದೇಶವನ್ನು ಸರ್ಕಾರ ಯಾವ ರೀತಿ ಈಡೇರಿಸುತ್ತದೆ ;

(ಇ) ಆರ್ಥಿಕವಾಗಿ ಹೊರೆಯಾಗುತ್ತಿರುವ ಇಲಾಖೆಗಳನ್ನು ಆಡಳಿತಾತ್ಮಕ ಸುಧಾರಣಾ ವರದಿಯಂತೆ ಜಾರಿಗೊಳಿಸಲು ಸರ್ಕಾರಕ್ಕೆ ಇರುವ ತೊಡಕುಗಳೇನು ; ಈ ಬಗ್ಗೆ ಸರ್ಕಾರದ ಕ್ರಮಗಳೇನು ?

## ಬೀದರ್ ಜಿಲ್ಲೆಯ ಕಾರಂಜಾ ಮುಳುಗಡೆಯಾದ ಭೂಮಿಗೆ ಪರಿಹಾರ ನೀಡುವ ಕುರಿತು

**ಡಾ॥ ಚಂದ್ರಶೇಖರ್ ಬಿ. ಪಾಟೀಲ್ (ಪದವೀಧರರ ಕ್ಷೇತ್ರ) :–**

೪೩೭ (೫೨೧) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

ಬೀದರ್ ಜಿಲ್ಲೆಯ ಕಾರಂಜಾ ಮುಳಗಡೆ ಸಂತ್ರಸ್ತರಿಗೆ ಭೂಮಿಗೆ ತಕ್ಕಂತೆ ಕನಿಷ್ಠ ಬೆಲೆ ನಿಗದಿ ಮಾಡಿ ಸರ್ಕಾರದ ವತಿಯಿಂದ ಪರಿಹಾರ ನೀಡಲಾಗಿದೆಯೇ ; ಭೂಮಿಯ ಬೆಲೆಗೆ ತಕ್ಕಂತೆ ಗರಿಷ್ಠ ಬೆಲೆ ನಿಗದಿ ಮಾಡಿ ಪರಿಹಾರ ನೀಡುತ್ತಿಲ್ಲದಿರುವುದಕ್ಕೆ ಕಾರಣಗಳೇನು ?

## ಬೀದರ್ ಜಿಲ್ಲೆಯಲ್ಲಿ ಕ್ಯಾನಲ್ ಮಾಡುವ ಕುರಿತು

**ಡಾ॥ ಚಂದ್ರಶೇಖರ್ ಬಿ. ಪಾಟೀಲ್ (ಪದವೀಧರರ ಕ್ಷೇತ್ರ) :–**

೪೩೮ (೫೨೩) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

ಬೀದರ್ ಜಿಲ್ಲೆಯ ಅತಿವಾಳ ಏತನೀರಾವರಿ ಯೋಜನೆಯಿಂದ ಮರ್ಖಲ ಗ್ರಾಮದವರೆಗೆ ನೀರು ಪೂರೈಸಲು ಕ್ಯಾನಲ್ ಮಾಡುವ ಉದ್ದೇಶ ಸರ್ಕಾರದ ಮುಂದಿದೆಯೇ ?

## ಹಾಲಿ ಮತ್ತು ಮಾಜಿ ಸಂಸದರು ಮತ್ತು ಶಾಸಕರುಗಳಿಗೆ ರಕ್ಷಣಾ ವ್ಯವಸ್ಥೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೩೯ (೫೬೩) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಎಷ್ಟು ಜನ ಹಾಲಿ ಮತ್ತು ಮಾಜಿ ಸಂಸದರು ಮತ್ತು ಶಾಸಕರುಗಳಿಗೆ ರಕ್ಷಣಾ ವ್ಯವಸ್ಥೆಯನ್ನು ಮಾಡಲಾಗಿದೆ ; ಹಾಗೂ ಯಾವ ರೀತಿಯ ರಕ್ಷಣೆ ಒದಗಿಸಲಾಗಿದೆ ; (ಕಳೆದ ೩ ವರ್ಷಗಳ ಮಾಹಿತಿ ನೀಡುವುದು)

(ಆ) ರಕ್ಷಣಾ ವ್ಯವಸ್ಥೆ ಮಾಡಲು ಇರುವ ಮಾನದಂಡಗಳೇನು ; ನಿಯಮಗಳೇನು ? (ವಿವರ ನೀಡುವುದು)

## ಕೇಂದ್ರದಿಂದ ಜಿ.ಎಸ್.ಟಿ. ಪರಿಹಾರ ನೀಡದಿರುವುದರಿಂದ ಆಗುವ ಪರಿಣಾಮ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೪೦ (೫೬೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೇಂದ್ರ ಸರ್ಕಾರ ರಾಜ್ಯಕ್ಕೆ ಜಿ.ಎಸ್.ಟಿ. ಪರಿಹಾರ ನೀಡದಿರುವುದರಿಂದ ರಾಜ್ಯ ಸರ್ಕಾರಕ್ಕೆ ಆಗುವ ಪರಿಣಾಮಗಳೇನು ;

(ಆ) ಇದರಿಂದ ರಾಜ್ಯದ ಆರ್ಥಿಕ ಹೊಣೆಗಾರಿಕೆಯ ಮೇಲೆ ಪರಿಣಾಮ ಬೀರುವುದಿಲ್ಲವೇ ; ಬೀರುವುದಾದರೆ ಯಾವ ಪ್ರಮಾಣದಲ್ಲಿ ಬೀರುತ್ತದೆ ;

(ಇ) ಇದರಿಂದ ಶೇಕಡಾವಾರು ಎಷ್ಟು ಹಾನಿಯಾಗುತ್ತದೆ ; ಈ ಆರ್ಥಿಕ ಬಿಕ್ಕಟ್ಟನ್ನು ಹೇಗೆ ನಿಭಾಯಿಸಲಾಗುತ್ತದೆ ?

## ಡ್ರಗ್ಸ್ ಮಾಫಿಯಾದಿಂದ ಸಮಾಜದ ಸ್ವಾಸ್ಥ್ಯ ಹಾಳಾಗುತ್ತಿರುವ ಕುರಿತು

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೪೧ (೫೬೫) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಡ್ರಗ್ಸ್ ಮಾಫಿಯಾದಿಂದ ಸಮಾಜದಲ್ಲಿ ಯುವ ಜನರು ಮತ್ತು ಮಕ್ಕಳು ಹಾಳಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸರ್ಕಾರ ಇದನ್ನು ತಡೆಗಟ್ಟಲು ಯಾವ ಕ್ರಮಗಳನ್ನು ಕೈಗೊಂಡಿದೆ ;

(ಇ) ಈ ಪಿಡುಗಿನಿಂದ ಸಮಾಜದ ಸ್ವಾಸ್ಥ್ಯ ಹಾಳಾಗುತ್ತಿದ್ದರೂ, ಸರ್ಕಾರ ಕಠಿಣ ಕ್ರಮಗಳನ್ನು ಕೈಗೊಳ್ಳದಿರಲು ಕಾರಣವೇನು ; ಇನ್ನಾದರೂ ಗಂಭೀರವಾಗಿ ಪರಿಗಣಿಸುವುದೇ ?

## ರಾಜ್ಯ ಸರ್ಕಾರದ ಸಾಲ ಮತ್ತು ಜಿ.ಎಸ್.ಡಿ.ಪಿ. ದರ ಕುರಿತು

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೪೨ (೫೬೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳಲ್ಲಿ ರಾಜ್ಯ ಸರ್ಕಾರ ಮಾಡಿರುವ ಸಾಲದ ಮೊತ್ತವೆಷ್ಟು ; (ವರ್ಷವಾರು ವಿವರ ನೀಡುವುದು)

(ಆ) ಪ್ರಸ್ತುತ ೨೦೨೦-೨೦೨೧ನೇ ಸೆಪ್ಟೆಂಬರ್ ತಿಂಗಳ ಅಂತ್ಯಕ್ಕೆ ಜಿ.ಎಸ್.ಡಿ.ಪಿ.ಯ ಶೇಕಡಾವಾರು ದರ ಎಷ್ಟಾಗಬಹುದು ;

(ಇ) ಜಿ.ಎಸ್.ಡಿ.ಪಿ. ದರ ಕಡಿಮೆಯಾದರೆ ರಾಜ್ಯ ಸರ್ಕಾರ ಒಟ್ಟು ಎಷ್ಟು ಸಾಲ ಪಡೆಯಲು ಅರ್ಹವಾಗುತ್ತದೆ ?

## ಸಾರ್ವಜನಿಕ ಸಂಪರ್ಕ ಇಲಾಖೆಯ ಕೆಲಸ ಕಾರ್ಯಗಳು

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೪೩ (೫೬೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಲ್ಲಿರುವ ಸಾರ್ವಜನಿಕ ಸಂಪರ್ಕ ಇಲಾಖೆಯ ಕೆಲಸ ಕಾರ್ಯಗಳಾವುವು ;

(ಆ) ಸಾರ್ವಜನಿಕರಿಗೆ ಯಾವ ರೀತಿಯ ಪ್ರಯೋಜನೆಗಳು ಈ ಇಲಾಖೆಯಿಂದ ದೊರೆಯುತ್ತಿದೆ ;

(ಇ) ಈ ಇಲಾಖೆಯಲ್ಲಿ ಕಳೆದ ಎರಡು ವರ್ಷಗಳಲ್ಲಿ ಆಗಿರುವ ಕಾರ್ಯಕ್ರಮಗಳು ಯಾವುವು ? (ಮಾಹಿತಿ ನೀಡುವುದು)

## ನಿರುದ್ಯೋಗ ಪದವೀಧರರಿಗೆ ನೆರವು

**ಶ್ರೀ ಅ. ದೇವೇಗೌಡ (ಪದವೀಧರರ ಕ್ಷೇತ್ರ) :–**

೪೪೪ (೫೪೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ನಿರುದ್ಯೋಗಿ ಪದವೀಧರರಿಗೆ ಯಾವ ರೀತಿಯ ಆರ್ಥಿಕ ನೆರವು ನೀಡಲು ಸರ್ಕಾರ ರೂಪರೇಷೆಗಳನ್ನು ಹೊಂದಿದೆ ;

(ಆ) ನಿರುದ್ಯೋಗಿ ಪದವೀಧರರಿಗೆ ಸರ್ಕಾರವು ನೀಡುವ ಆರ್ಥಿಕ ನೆರವು ಕಾರ್ಯರೂಪಕ್ಕೆ ತರಲಾಗುವುದು ಯಾವಾಗ ?

## ಮಾಗಡಿ ತಾಲ್ಲೂಕಿಗೆ ಹೇಮಾವತಿ ನಾಲೆಯಿಂದ ನೀರು ಹರಿಸುವ ಬಗ್ಗೆ

**ಶ್ರೀ ಅ. ದೇವೇಗೌಡ (ಪದವೀಧರರ ಕ್ಷೇತ್ರ) :–**

೪೪೫ (೬೫೫) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಾಗಡಿ ತಾಲ್ಲೂಕು, ರಾಮನಗರ ಜಿಲ್ಲೆ, ಈ ತಾಲ್ಲೂಕಿಗೆ ಹೇಮಾವತಿ ನದಿಯಿಂದ ನಾಲೆಯ ಮೂಲಕ ಕೆರೆಗಳಿಗೆ ನೀರನ್ನು ಹರಿಸುವ ಕಾಮಗಾರಿಯು ಪ್ರಸ್ತುತ ಯಾವ ಹಂತದಲ್ಲಿದೆ ;

(ಆ) ೨೦೧೪ರಲ್ಲಿ ಪ್ರಾರಂಭವಾದ ಈ ಕಾಮಗಾರಿಯು ಪೂರ್ಣಗೊಳ್ಳಲು ವಿಳಂಬವಾಗುತ್ತಿದ್ದು, ಕಾಮಗಾರಿಯು ತ್ವರಿತವಾಗಿ ಪೂರ್ಣಗೊಳ್ಳಲು ಸರ್ಕಾರ ಏನು ಕ್ರಮ ಕೈಗೊಂಡಿದೆ ;

(ಇ) ಮಾಗಡಿ ತಾಲ್ಲೂಕಿನ ಕೆರೆಗಳಿಗೆ ನೀರಿನ ಬವಣೆ ಹೆಚ್ಚಾಗಿದ್ದು, ಹೇಮಾವತಿ ನದಿಯಿಂದ ನಾಲೆಯ ಮೂಲಕ ಹರಿಸುವ ಕುಡಿಯುವ ನೀರು ಕಾಮಗಾರಿಯು ಪೂರ್ಣಗೊಳ್ಳಲು ಎಷ್ಟು ಕಾಲಾವಧಿ ಬೇಕಾಗಬಹುದು ?

## ರಾಜ್ಯ ಮತ್ತು ಕೇಂದ್ರ ಸರ್ಕಾರಿ ನೌಕರರ ವೇತನದಲ್ಲಿನ ತಾರತಮ್ಯದ ಬಗ್ಗೆ

**ಶ್ರೀ ಅ. ದೇವೇಗೌಡ (ಪದವೀಧರರ ಕ್ಷೇತ್ರ) :–**

೪೪೬ (೫೮೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ೭ನೇ ವೇತನ ಆಯೋಗದ ವರದಿಯನ್ನು ಜಾರಿಗೆ ತಂದಿದ್ದರೂ ರಾಜ್ಯ ಮತ್ತು ಕೇಂದ್ರ ಸರ್ಕಾರಿ ನೌಕರರುಗಳ ವೇತನದಲ್ಲಿ ತಾರತಮ್ಯವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ದೇಶದಲ್ಲಿ ಹಲವು ರಾಜ್ಯಗಳು ಅಲ್ಲಿನ ನೌಕರರುಗಳಿಗೆ ಕೇಂದ್ರ ಸರ್ಕಾರದ ಸರ್ಕಾರಿ ನೌಕರರಿಗೆ ಸಮನಾಂತರವಾಗಿ ವೇತನ/ ಪಿಂಚಣಿ ಸೌಲಭ್ಯವನ್ನು ನೀಡುತ್ತಿದ್ದು ರಾಜ್ಯದಲ್ಲಿ ಸದರಿ ಸೌಲಭ್ಯವನ್ನು ಜಾರಿಗೆ ತರದಿರಲು ಕಾರಣವೇನು ;

(ಇ) ರಾಜ್ಯದ ಸರ್ಕಾರಿ ನೌಕರರಿಗೆ ಕೇಂದ್ರ ಸರ್ಕಾರಿ ನೌಕರರಿಗೆ ನೀಡುತ್ತಿರುವ ಕೇಂದ್ರದ ೭ನೇ ವೇತನ ಆಯೋಗದ ಶಿಫಾರಸ್ಸುಗಳನ್ನು ಜಾರಿಗೆ ತರಲು ಯಾವ ಕ್ರಮ ಕೈಗೊಳ್ಳಲಾಗುವುದು;

(ಈ) ಈ ರೀತಿ ವೇತನ ತಾರತಮ್ಯವನ್ನು ನಿವಾರಿಸುವುದರಿಂದ ಆಡಳಿತದಲ್ಲಿ ದಕ್ಷತೆಯನ್ನು ಹೆಚ್ಚಿಸಿ ಭ್ರಷ್ಟಾಚಾರಕ್ಕೆ ಕಡಿವಾಣ ಹಾಕಬಹುದಲ್ಲವೇ ;

(ಉ) ಕರ್ನಾಟಕದಲ್ಲಿ ಕಾರ್ಯನಿರ್ವಹಿಸುತ್ತಿರುವ ಅಖಿಲ ಭಾರತ ಸೇವೆಯ ಅಧಿಕಾರಿಗಳಿಗೆ ಈಗಾಗಲೇ ೭ನೇ ವೇತನ ಆಯೋಗದ ಶಿಫಾರಸ್ಸಿನಡಿಯಲ್ಲಿ ಸಂಬಳ ಸೌಲಭ್ಯವನ್ನು ನೀಡುತ್ತಿರುವುದರಿಂದ ಅವರ ಕೈಕೆಳಗೆ ಹೆಚ್ಚಿನ ಜವಾಬ್ದಾರಿಯಿಂದ ಕಾರ್ಯ ನಿರ್ವಹಿಸುತ್ತಿರುವ ರಾಜ್ಯ ಸರ್ಕಾರಿ ನೌಕರರುಗಳಿಗೆ ಈ ತಾರತಮ್ಯದಿಂದ ಅನ್ಯಾಯವಾಗವುದಿಲ್ಲವೇ ;

(ಊ) ಈ ಅನ್ಯಾಯವನ್ನು ಯಾವಾಗ ಸರಿಪಡಿಸಲಾಗುವುದು ?

## ಕುಮಾರಸ್ವಾಮಿ ಬಡಾವಣೆಯಲ್ಲಿನ ರಸ್ತೆ ಬಗ್ಗೆ

**ಶ್ರೀ ಅ. ದೇವೇಗೌಡ (ಪದವೀಧರರ ಕ್ಷೇತ್ರ) :–**

೪೪೭ (೬೪೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕುಮಾರಸ್ವಾಮಿ ಬಡಾವಣೆಯಲ್ಲಿನ ೯ನೇ (ವಾಸವಿ ಆಸ್ಪತ್ರೆ ಹತ್ತಿರವಿರುವ) ಅಡ್ಡರಸ್ತೆಯನ್ನು ಒಂದನೇ ಹಂತ ಹಾಗೂ ಎರಡನೇ ಹಂತ ಎಂದು ವಿಂಗಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸದರಿ ರಸ್ತೆಯ ಒಂದನೇ ಹಂತದಲ್ಲಿರುವ ನಿವೇಶನಗಳ ಸಂಖ್ಯೆ ಮತ್ತು ಎರಡನೇ ಹಂತದಲ್ಲಿರುವ ನಿವೇಶನಗಳ ಸಂಖ್ಯೆಗಳನ್ನು ಒದಗಿಸುವುದು ;

(ಇ) ಸದರಿ ರಸ್ತೆಗೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದವರು ಹಂಚಿರುವ ಖಾತಾ ಪ್ರಮಾಣ ಪತ್ರದಲ್ಲಿನ ನಿವೇಶನಗಳ ಸಂಖ್ಯೆಯು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯವರು ನಮೂದಿಸಿರುವ ನಿವೇಶನಗಳ ಸಂಖ್ಯೆಗೆ ತಾಳೆಯಾಗುವುದೇ ? (ಪೂರ್ಣ ಮಾಹಿತಿಯನ್ನು ಒದಗಿಸುವುದು)

## ಸರ್ಕಾರದ ವಿವಿಧ ಇಲಾಖೆಗಳಲ್ಲಿ ನೌಕರರ ಕಾರ್ಯಕ್ಷಮತೆ ಹೆಚ್ಚಿಸಲು ತರಬೇತಿ ಅವಶ್ಯಕತೆ ಬಗ್ಗೆ

**ಶ್ರೀ ಕೆ. ಗೋವಿಂದರಾಜ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೪೮ (೬೦೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಇತ್ತೀಚೆಗೆ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿ ಮತ್ತು ಅಧಿಕಾರಿಗಳಿಗೆ ತರಬೇತಿ ಕಾರ್ಯಕ್ರಮಗಳನ್ನು ಒದಗಿಸಲಾಗದಿರುವ ಅಂಶವನ್ನು ಸರ್ಕಾರವು ಗಂಭೀರವಾಗಿ ಪರಿಗಣಿಸಿದೆಯೇ ; (ಮಾಹಿತಿ ಒದಗಿಸುವುದು)

(ಆ) ಕಳೆದ ೩ ವರ್ಷಗಳ ಅವಧಿಯಲ್ಲಿ ಯಾವ ಯಾವ ಇಲಾಖೆಗಳಲ್ಲಿ ತರಬೇತಿ ಕಾರ್ಯಕ್ರಮಗಳನ್ನು ನಡೆಸಲಾಗಿದೆ ; (ಇಲಾಖಾವಾರು, ವರ್ಷಾವಾರು, ನೀಡಲಾದ ತರಬೇತಿ, ತರಬೇತಿ ಅವಧಿ, ವಿನಿಯೋಗಿಸಲಾದ ಅನುದಾನ, ಭಾಗವಹಿಸಿದ ಸಿಬ್ಬಂದಿ/ ಅಧಿಕಾರಿಗಳ ಸಂಖ್ಯೆ. ತರಬೇತಿ ವಿಷಯ ಕುರಿತಾಗಿ ಪ್ರತ್ಯೇಕವಾದ ಸಂಪೂರ್ಣ ಮಾಹಿತಿಯನ್ನು ಒದಗಿಸುವುದು)

(ಇ) ಹಲವಾರು ಇಲಾಖೆಗಳು ಇತ್ತೀಚಿನ ದಿನಗಳಲ್ಲಿ ಗಣಕೀಕೃತಗೊಂಡು ಕಾರ್ಯನಿರ್ವಹಿಸುತ್ತಿದ್ದು, ವಿವಿಧ ರೀತಿಯಲ್ಲಿ ಸಿಬ್ಬಂದಿ ಅಧಿಕಾರಿಗಳಿಗೆ ತರಬೇತಿ ಅವಶ್ಯವಿದ್ದರೂ ಈ ನಿಟ್ಟಿನಲ್ಲಿ ಸರ್ಕಾರ ಉದಾಸೀನ ತೋರುತ್ತಿರುವುದು ನಿಜವೇ ; ಹಾಗಿದ್ದಲ್ಲಿ, ಈ ನಿಟ್ಟಿನಲ್ಲಿ ಸರ್ಕಾರ ಕೈಗೊಂಡ ಕ್ರಮಗಳು ಏನು ; (ಮಾಹಿತಿ ಒದಗಿಸುವುದು)

(ಈ) ಪ್ರತಿ ನೌಕರನಿಗೂ ಅವನ ಹುದ್ದೆ ನಿರ್ವಹಣೆಗೆ ಅವಶ್ಯಕವಾದ ತರಬೇತಿ, ಪುನರ್ ಮನನದಂತಹ ಕಾರ್ಯಕ್ರಮಗಳನ್ನು ಕಡ್ಡಾಯಗೊಳಿಸಿ ಕಾರ್ಯಕ್ಷಮತೆ ಹೆಚ್ಚಿಸುವ ನಿಟ್ಟಿನಲ್ಲಿ ಸರ್ಕಾರದ ಕ್ರಮಗಳ ಕುರಿತಾಗಿ ಮಾಹಿತಿ ಒದಗಿಸುವುದು ?

## ಬೈಯಪ್ಪನಹಳ್ಳಿ ರೈಲು ನಿಲ್ದಾಣದಲ್ಲಿನ ಹೊಸ ಟರ್ಮಿನಲ್‌ಗೆ ತಲುಪುವ ಸುತ್ತಮುತ್ತಲಿನ ರಸ್ತೆಗಳ ಅಭಿವೃದ್ಧಿ ಬಗ್ಗೆ

**ಶ್ರೀ ಕೆ. ಗೋವಿಂದರಾಜ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೪೯ (೬೧೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರ ಬೈಯಪ್ಪನಹಳ್ಳಿ ರೈಲು ನಿಲ್ದಾಣದಲ್ಲಿ ನಿರ್ಮಿಸಲಾಗಿದ್ದ ಟರ್ಮಿನಲ್ ಸ್ಟೇಷನ್‌ಗೆ ಹೋಗುವ ರಸ್ತೆಗಳು ಅತಿ ಚಿಕ್ಕದಾಗಿದ್ದು ಹಾಗೂ ಅಭಿವೃದ್ಧಿಯೂ ಆಗಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಇದರಿಂದಾಗಿ ಇಂದಿರಾನಗರ, ಕೆ.ಆರ್.ಪುರಂ, ದೊಮ್ಮಲೂರು, ಕೋರಮಂಗಲ, ರಾಮಮೂರ್ತಿ ನಗರ, ಮಾರುತಿ ಸೇವಾ ನಗರ ಮುಂತಾದ ಬಡಾವಣೆಗಳ ಪ್ರಯಾಣಿಕರು ಅತಿ ಚಿಕ್ಕ ಹಾಗೂ ಮಣ್ಣಿನಿಂದ ಕೂಡಿದ ಕುಲುಕುವ ರಸ್ತೆಗಳಲ್ಲಿ ಕಷ್ಟಕರವಾಗಿ ಪ್ರಯಾಣಿಸಿ, ಸದರಿ ಟರ್ಮಿನಲ್ ಅನ್ನು ತಲುಪಬೇಕಾಗಿದ್ದು ಇದರಿಂದ ಟ್ರಾಫಿಕ್ ಜಾಮ್, ಧೂಳು ಸೇವನೆ ಮುಂತಾದ ಅನಾನುಕೂಲಗಳನ್ನು ಪ್ರಯಾಣಿಕರು ಎದುರಿಸಬೇಕಾಗಿರುವುದರಿಂದ ಈ ಪ್ರಯಾಣಿಕರ ಭವಣೆಯನ್ನು ನಿವಾರಿಸಲು ಸರ್ಕಾರ ತೆಗೆದುಕೊಳ್ಳುವ ಯೋಜನೆಗಳೇನು ?

## ಹೆಚ್ಚುವರಿ ಮಂಜೂರಾಗಿರುವ CL - 2 ಸನ್ನದು ರದ್ದು ವಿಳಂಬವಾಗುತ್ತಿರುವ ಬಗ್ಗೆ

**ಶ್ರೀ ಕೆ. ಗೋವಿಂದರಾಜ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೫೦ (೬೦೬) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ CL-2, CL-4, CL-7 ಕೋಟಾದಡಿ ಮಂಜೂರಾಗಿರುವ ವೈನ್ ಶಾಪ್‌ಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಪ್ರತ್ಯೇಕ ಮಾಹಿತಿ ಒದಗಿಸುವುದು)

(ಆ) CL-2 ಕೋಟಾದಡಿ ನಿಗದಿಗಿಂತ ಹೆಚ್ಚುವರಿಯಾಗಿ ವೈನ್ ಶಾಪ್ ತೆರೆಯಲು ಮಂಜೂರಾತಿ ನೀಡಲಾಗಿರುವುದು ನಿಜವೇ ; ಹಾಗಿದ್ದಲ್ಲಿ, ಹೆಚ್ಚುವರಿ ವೈನ್ ಶಾಪ್‌ಗಳ ಮಂಜೂರಾತಿ ರದ್ದುಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ಏನು ;

(ಇ) CL-2 ಕೋಟಾದಡಿ ಹೆಚ್ಚುವರಿ ಮಂಜೂರು ಆಗಿರುವ ವೈನ್ ಶಾಪ್‌ಗಳನ್ನು ರದ್ದುಪಡಿಸುವಂತೆ ರಾಜ್ಯ ಉಚ್ಚ ನ್ಯಾಯಾಲಯ ಆದೇಶಿಸಿರುವುದು ನಿಜವೇ ; ಹಾಗಿದ್ದಲ್ಲಿ, ನ್ಯಾಯಾಲಯದ ಆದೇಶ ಪಾಲಿಸದೇ ಇನ್ನೂ ತೆರೆದಿರುವ ಹೆಚ್ಚುವರಿ ಮಂಜೂರಾದ ವೈನ್ ಶಾಪ್‌ಗಳನ್ನು ಮುಚ್ಚಿಸುವಲ್ಲಿ ಸರ್ಕಾರ ಗಂಭೀರವಾಗಿ ಆಲೋಚಿಸಿದೆಯೇ ; ಹಾಗಿದ್ದಲ್ಲಿ, ಈ ನಿಟ್ಟಿನಲ್ಲಿ ಕೈಗೊಂಡ ಕ್ರಮಗಳ ಪೂರ್ಣ ಮಾಹಿತಿ ಒದಗಿಸುವುದು ?

## ಬಿ.ಬಿ.ಎಂ.ಪಿ.ಯ ಮಹದೇವಪುರ ವಲಯದಲ್ಲಿ ರಸ್ತೆ ಅಭಿವೃದ್ಧಿ ಕಾಮಗಾರಿಗಳಲ್ಲಿ ಅಕ್ರಮದ ಬಗ್ಗೆ

**ಶ್ರೀ ಕೆ. ಗೋವಿಂದರಾಜ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೫೧ (೬೦೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬಿ.ಬಿ.ಎಂ.ಪಿ ಮಹದೇವಪುರ ವಲಯದಲ್ಲಿ ಮುಖ್ಯ ಮಂತ್ರಿಯವರ ನವ ನಗರೋತ್ಥಾನ ಯೋಜನೆಯ ರಸ್ತೆಗಳ ಅಭಿವೃದ್ಧಿ ಕಾಮಗಾರಿಗಳು ಟೆಂಡರ್ ಷರತ್ತಿನ ಪ್ರಕಾರ ಅರ್ಹತೆ

ಹೊಂದಿಲ್ಲದವರಿಗೆ ಗುತ್ತಿಗೆ ನೀಡಲು ಸಿದ್ಧತೆ ನಡೆದಿರುವ ಬಗ್ಗೆ ಸರ್ಕಾರಕ್ಕೆ ವಕೀಲರೊಬ್ಬರೆ ದೂರು ಸಲ್ಲಿಕೆಯಾಗಿರುವುದು ನಿಜವೇ;

(ಆ) ಕಾಮಗಾರಿ ನಡೆಸುವವರು ಟೆಂಡರ್ ಷರತ್ತುಗಳ ಪ್ರಕಾರ ಮಹದೇವಪುರ ೪೦ ಕಿಲೋಮೀಟರ್ ವ್ಯಾಪ್ತಿಯಲ್ಲಿ ಹಾಟ್‌ಮಿಕ್ಸ್ ಘಟಕ ಹೊಂದಿರುವುದು ಹಾಗೂ ವಾರ್ಷಿಕ ವಹಿವಾಟಿಗೆ ಸಂಬಂಧಿಸಿದಂತೆ ಈ ಗುತ್ತಿಗೆದಾರರು ತಪ್ಪು ಪ್ರಮಾಣ ಪತ್ರಗಳನ್ನು ಸಲ್ಲಸಿದ್ದಾರೆಂಬ ಕುರಿತು ಸರ್ಕಾರ ಕೂಲಂಕಷವಾಗಿ ತನಿಖೆ ನಡೆಸುವುದೇ ?

## ಡ್ರಗ್ಸ್ ಅಕ್ರಮ ಮಾರಾಟ ಪಿಡುಗಿನ ನಿಗ್ರಹದ ಬಗ್ಗೆ

**ಶ್ರೀ ಕೆ. ಗೋವಿಂದರಾಜ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೫೨ (೭೦೮) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳ ಅವಧಿಯಲ್ಲಿ ಬೆಂಗಳೂರು ನಗರ ಸೇರಿದಂತೆ ರಾಜ್ಯದ ಯಾವ ಯಾವ ಭಾಗಗಳಲ್ಲಿ ಮಾದಕ ವಸ್ತು ಮಾರಾಟಗಾರರ ಬಂಧನವಾಗಿದ್ದು, ಮತ್ತು ಯಾವ ಯಾವ ಮಾದಕ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ ;

(ಆ) ಈ ಮಾದಕ ವಸ್ತುಗಳ ಬಳಕೆ ಮತ್ತು ಪೂರೈಕೆದಾರರ ಜಾಲದಲ್ಲಿ ಭಾಗಿಗಳಾಗಿರುವವರ ಮಾಹಿತಿ ಗೃಹ ಇಲಾಖೆಯಲ್ಲಿ ಇದೆಯೇ ; ಹಾಗಿದ್ದಲ್ಲಿ, ಅಂತಹ ಸಂಕಷ್ಟ ವ್ಯಕ್ತಿಗಳ ಪ್ರತ್ಯೇಕ ಮಾಹಿತಿ ಮತ್ತು ಕೈಗೊಂಡಿರುವ ಕ್ರಮಗಳ ಸಂಪೂರ್ಣ ವಿವರ ಒದಗಿಸುವುದು;

(ಇ) ಲಾಕ್‌ಡೌನ್‌ನ ಇಂತಹ ಸಂಕಷ್ಟ ಸಂದರ್ಭದಲ್ಲೂ ಸಹ ಬೆಂಗಳೂರು ನಗರದಲ್ಲಿ ಕೋಟ್ಯಾಂತರ ರೂಪಾಯಿಗಳ ಮಾದಕ ವಸ್ತು/ದ್ರವ್ಯ/

ಡ್ರಗ್ಸ್ ಮಾರಾಟವಾಗಿರುವ ಅಂಶ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಡ್ರಗ್ಸ್ ಅಕ್ರಮ ಮಾರಾಟ ಮತ್ತು ಬಳಕೆದಾರರ ಮಾಹಿತಿ ಪಡೆದು ನಿಯಂತ್ರಿಸುವಲ್ಲಿ ರಾಜ್ಯ ಸರ್ಕಾರ ವಿಫಲವಾಗಿರುವುದು ಹಾಗೂ ಮಾದಕ ವಸ್ತು ನಿಗ್ರಹ ದಳ (ಎನ್.ಸಿ.ಬಿ) ರವರು ತನಿಖೆ ಕೈಗೆತ್ತಿಕೊಂಡಿರುವುದು ನಿಜವೇ ; ಹಾಗಿದ್ದಲ್ಲಿ, ಸರ್ಕಾರ ಈ ನಿಟ್ಟಿನಲ್ಲಿ ಯಾವ ರೀತಿಯ ತನಿಖಾ ವ್ಯಾಪ್ತಿ ಮತ್ತು ನಿಯಂತ್ರಣದ ಬಗ್ಗೆ ಕ್ರಮ ಕೈಗೊಂಡಿದೆ ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಉ) ವಿದ್ಯಾರ್ಥಿಗಳು ಮತ್ತು ಯುವ ಜನತೆಯನ್ನು ದಾರಿ ತಪ್ಪಿಸುವ, ಸಮಾಜದ ಶಾಂತಿ ಭಂಗಕ್ಕೆ ಸಮಾಜದ ಸ್ವಾಸ್ಥ್ಯಕ್ಕೆ ಮಾರಕವಾಗಿರುವ ಈ ಪಿಡುಗು ನಿವಾರಿಸುವ ನಿಟ್ಟಿನಲ್ಲಿ ಸರ್ಕಾರದ ಕಾನೂನು ಕ್ರಮಗಳು ಮತ್ತು ಇದುವರೆಗಿನ ಫಲಶೃತಿ ಕುರಿತಾಗಿ ಸಂಪೂರ್ಣ ಮಾಹಿತಿ ಒದಗಿಸುವುದು ?

## ಮರಳು ವಾಹನ ಹಿಡಿದು ಲಕ್ಷಾಂತರ ರೂಪಾಯಿ ವಸೂಲಿ ಮಾಡುತ್ತಿರುವ ಬಗ್ಗೆ

**ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೫೩ (೫೭೩) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾರವಾರ ಜಿಲ್ಲೆಯ ಜೋಯಿಡಾ ತಾಲ್ಲೂಕಿನ ರಾಮನಗರ ಮರಳು ಅಡ್ಡೆ ಮೇಲೆ ಅನಾವಶ್ಯಕ ಜೋಯಿಡಾ ಪೋಲೀಸ್ ಅಧಿಕಾರಿ ದಾಳಿ ನಡೆಸಿ ಲಕ್ಷಾಂತರ ಹಣ ಪಡೆದು ಪ್ರಕರಣ ದಾಖಲಿಸದೇ ವಾಹನ ಬಿಡುತ್ತಿರುವುದು ಗೋವಾ ಗಡಿಭಾಗದಲ್ಲಿರುವ ಅಣಮೋಡಾ ತಪಾಸಣೆ ನಾಕೆಯಲ್ಲಿಯೂ ಕೂಡಾ ಮದ್ಯವನ್ನು

ಸಾಗಿಸುವಾಗ ಪ್ರಕರಣ ದಾಖಲಿಸುವ ಬದಲಾಗಿ ಅವರಿಂದ ಲಕ್ಷಾಂತರ ರೂಪಾಯಿ ಹಣ ಪಡೆದ ಸಣ್ಣ ಪ್ರಕರಣವನ್ನು ಬೇರೆಯವರ ಮೇಲೆ ದಾಖಲಿಸಿ ಕೈ ತೊಳೆದುಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ಮಾಹಿತಿ ನೀಡುವುದು)

(ಆ) ಈ ರೀತಿ ಬೇಜವಾಬ್ದಾರಿ ತನದಿಂದ ಕರ್ತವ್ಯ ನಿರ್ವಹಿಸುತ್ತಿರುವ ಪೊಲೀಸ್ ಅಧಿಕಾರಿಗಳ ಮೇಲೆ ಸಾರ್ವಜನಿಕರು ಲಿಖಿತ ದೂರು ನೀಡಿದರೂ ಮೇಲಾಧಿಕಾರಿಗಳು ಇಲ್ಲಿಯವರೆಗೆ ಯಾವುದೇ ರೀತಿಯಲ್ಲಿ ತನಿಖೆ ಮಾಡದೆ ಉತ್ತರ ನೀಡುವುದು ಸಂಶಯಕ್ಕೆ ಆಸ್ಪದವಾಗಿದ್ದು, ಈ ಬಗ್ಗೆ ತನಿಖೆ ಮಾಡಲಾಗುವುದೇ ; (ವಿವರ ನೀಡುವುದು)

(ಇ) ಸದರಿ ವಿಷಯದಲ್ಲಿ ಸಾರ್ವಜನಿಕರು/ಜನ ಪ್ರತಿನಿಧಿಗಳು ಸಂಬಂಧಿಸಿದ ಇಲಾಖಾ ಮೇಲಾಧಿಕಾರಿಗೆ ಲಿಖಿತ ಪತ್ರದ ಮುಖಾಂತರ ತನಿಖೆ ಮಾಡಲು ವಿನಂತಿಸಿ ಪತ್ರ ನೀಡಿದರೂ ಇಲ್ಲಿಯವರೆಗೆ ಯಾವುದೇ ರೀತಿಯಲ್ಲಿ ಸ್ಪಂದಿಸದಿರುವ ಅಧಿಕಾರಿಯ ಕಾರ್ಯ ವೈಖರಿ ಬಗ್ಗೆ ಸರ್ಕಾರ ವರದಿ ಪಡೆದು ಕ್ರಮ ಕೈಗೊಳ್ಳಲಾಗುವುದೇ ? (ವಿವರ ನೀಡುವುದು)

## ಕಾರವಾರ ಜಿಲ್ಲೆಯಲ್ಲಿ ಸರಗಳ್ಳತನ ಮತ್ತು ದರೋಡೆ ಕೃತ್ಯಗಳು ನಡೆಯುತ್ತಿರುವ ಬಗ್ಗೆ

**ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೫೪ (೬೩೧) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:–

(ಅ) ಕಾರವಾರ ಜಿಲ್ಲೆಯಲ್ಲಿ ಸರ ಕಳ್ಳತನ, ದರೋಡೆ ಮುಂತಾದ ಪ್ರಕರಣಗಳು ದಿನೇ ದಿನೇ ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಆ) ಬಂದಿದ್ದಲ್ಲಿ, ಕಳೆದ ೨ ವರ್ಷದಿಂದ ಸದರಿ ವಿಷಯದಲ್ಲಿ ದಾಖಲಾಗಿರುವ ದೂರುಗಳು ಎಷ್ಟು ; ಆ ಪೈಕಿ ಪತ್ತೆ ಹಚ್ಚಲಾದ ಪ್ರಕರಣಗಳು ಎಷ್ಟು ; ಬಾಕಿ ಇರುವ ಪ್ರಕರಣಗಳನ್ನು ಶೀಘ್ರದಲ್ಲಿ ಪತ್ತೆ ಹಚ್ಚಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ; (ಜಿಲ್ಲಾವಾರು ವಿವರ ನೀಡುವುದು)

(ಇ) ಕಳ್ಳರಿಂದ ವಶಪಡಿಸಿಕೊಂಡಿರುವ ಆಭರಣಗಳು ಹಾಗೂ ಇತರೇ ವಸ್ತುಗಳ ಮೌಲ್ಯ ಎಷ್ಟು ; ಅವುಗಳನ್ನು ಸಂಬಂಧಪಟ್ಟವರಿಗೆ ವಿತರಿಸಲು ಕ್ರಮ ಕೈಗೊಳ್ಳಲಾಗಿದೆಯೇ ? (ತಾಲ್ಲೂಕುವಾರು/ ಜಿಲ್ಲಾವಾರು ಸವಿಸ್ತಾರ ವಿವರ ಎಫ್.ಐ.ಆರ್.ನಲ್ಲಿ ನಮೂದಿಸಿದಂತೆ ನೀಡುವುದು)

## ಪೊಲೀಸ್ ಇಲಾಖೆಯ ಕರ್ತವ್ಯ ನಿರ್ಲಕ್ಷ್ಯ ಕುರಿತು

**ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೫೫ (೬೩೦) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾರವಾರ ಜಿಲ್ಲೆಯ ಹಳಿಯಾಳ/ಜೋಯಿಡಾ ತಾಲ್ಲೂಕಿನಲ್ಲಿ ವ್ಯಾಪಕವಾಗಿ ಮಾದಕ ದ್ರವ್ಯಗಳ ಜಾಲ ಕಾರ್ಯ ನಿರ್ವಹಿಸುತ್ತಿರುವುದು ನಿಜವೇ ; ಸದರಿ ವಿಷಯದಲ್ಲಿ ಕಳೆದ ೨ ವರ್ಷಗಳಿಂದ ದಾಖಲಾದ ಪ್ರಕರಣಗಳೆಷ್ಟು ; ಎಷ್ಟು ಪ್ರಕರಣಗಳು ನ್ಯಾಯಾಲಯದ ಶಿಕ್ಷೆಗೊಳಪಟ್ಟಿದೆ ;

(ಆ) ಹಳಿಯಾಳ/ಜೋಯಿಡಾ ತಾಲ್ಲೂಕಿನಲ್ಲಿ ಕಳೆದ ೨ ವರ್ಷಗಳಿಂದ ಮಟಕಾ ಹಾಗೂ ಇಸ್ಪೀಟ್ ದಂದೆಗಳು ಬೇಕಾ ಬಿಟ್ಟಿ ನಡೆಯುತ್ತಿರುವುದು ನಿಜವೇ ; ಈ ಕುರಿತು ಪೊಲೀಸ್ ಇಲಾಖೆ ಯಾವುದೇ ರೀತಿಯಲ್ಲಿ ಸ್ಪಂದಿಸದೇ ಇರುವುದು ಏಕೆ ; ಸದರಿ ವಿಷಯದಲ್ಲಿ ಇಲ್ಲಿಯವರೆಗೆ ಎಫ್.ಐ.ಆರ್. ದಾಖಲಿಸಿದ ವಿವರ ಹಾಗೂ ಸದರಿ ವಿಷಯದಲ್ಲಿ ಎಷ್ಟು ಆರೋಪಿತರ ಮೇಲೆ ಕ್ರಮಕೈಗೊಳ್ಳಲಾಗಿದೆ ; (ವಿವರ ನೀಡುವುದು)

(ಇ) ಹಳಿಯಾಳ/ಜೋಯಿಡಾ ತಾಲ್ಲೂಕಿನಲ್ಲಿ ಕಳೆದ ೨ ವರ್ಷಗಳಿಂದ ಆಗಿರುವ ಅಪಘಾತಗಳ ವಿವರ ನೀಡುವುದು ಸದರಿ ವಿಷಯದಲ್ಲಿ ಎಷ್ಟು ಪ್ರಕರಣಗಳು ಮುಕ್ತಾಯ ಆಗಿರುತ್ತೆ ; ಎಷ್ಟು ಪ್ರಕರಣಗಳು ಚಾಲ್ತಿಯಲ್ಲಿರುತ್ತದೆ ? (ತಿಂಗಳವಾರು/ವರ್ಷವಾರು ಸವಿಸ್ತಾರ ವರದಿಯ ವಿವರ ನೀಡುವುದು)

## ಆರ್ಥಿಕ ಇಲಾಖೆಯು ತಡೆ ನೀಡಿರುವ ಆದೇಶಗಳ ಕುರಿತು

**ಶ್ರೀ ಎಂ.ಎ.ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೫೬ (೫೨೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ಸರ್ಕಾರದ ಅನೇಕ ಇಲಾಖೆಗಳು ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಕಳೆದ ವರ್ಷ ನೀಡಿರುವ ಬಹುತೇಕ ಆಡಳಿತಾತ್ಮಕ ಅನುಮೋದನೆ/ಆದೇಶಗಳಿಗೆ ಆರ್ಥಿಕ ಇಲಾಖೆಯು ತಡೆ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಸಂಬಂಧ ಸರ್ಕಾರವು ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಆ) ಎಸ್.ಸಿ.ಪಿ/ಟಿ.ಎಸ್.ಪಿ. ಯೋಜನೆಗಳಡಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಪಡೆದಿರುವ ಆಡಳಿತಾತ್ಮಕ ಅನುಮೋದನೆ/ಆದೇಶಗಳಿಗೆ ಆರ್ಥಿಕ ಇಲಾಖೆಯು ತಡೆ ನೀಡಿದೆಯೇ; ನೀಡಿದ್ದಲ್ಲಿ, ಯಾವ ಯಾವ ಇಲಾಖೆಯ ಆದೇಶಗಳಿಗೆ ತಡೆ ನೀಡಲಾಗಿದೆ ; ಈ ತಡೆ ಆದೇಶಗಳನ್ನು ಯಾವಾಗ ರದ್ದುಗೊಳಿಸಲಾಗುವುದು ; (ವಿವರ ನೀಡುವುದು)

(ಇ) ಅನುದಾನಿತ ಶಾಲೆ ಮತ್ತು ಕಾಲೇಜುಗಳಲ್ಲಿ ಖಾಲಿ ಇರುವ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಆರ್ಥಿಕ ಇಲಾಖೆಯು ತಡೆ ನೀಡಿದೆಯೇ ; ನೀಡಿದ್ದಲ್ಲಿ, ಈ ತಡೆ ಆದೇಶಗಳನ್ನು ಯಾವಾಗ ರದ್ದುಗೊಳಿಸಲಾಗುವುದು ? (ವಿವರ ನೀಡುವುದು)

**ಎಸ್.ಸಿ.ಪಿ/ಟಿ.ಎಸ್.ಪಿ. ಕಾಮಗಾರಿಗಳ ಕುರಿತು**

**ಶ್ರೀ ಎಂ.ಎ.ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೫೭ (೫೨೯) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಾಸನ ಜಿಲ್ಲೆಯಲ್ಲಿ ಕಳೆದ ೩ ವರ್ಷಗಳಲ್ಲಿ ಸಣ್ಣ ನೀರಾವರಿ ಇಲಾಖೆಯಿಂದ ಎಸ್.ಸಿ.ಪಿ/ಟಿ.ಎಸ್.ಪಿ. ಯೋಜನೆಯಡಿ ಕೈಗೆತ್ತಿಕೊಳ್ಳಲಾದ ಕಾಮಗಾರಿಗಳು ಯಾವುವು ; ಈ ಕಾಮಗಾರಿಗಳಿಗೆ ಮಂಜೂರಾದ ಅನುದಾನವೆಷ್ಟು ; ಖರ್ಚಾದ ಅನುದಾನವೆಷ್ಟು ; (ಕಾಮಗಾರಿವಾರು ವಿವರ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ಸಣ್ಣ ನೀರಾವರಿ ಇಲಾಖೆಯಿಂದ ಎಸ್.ಸಿ.ಪಿ/ ಟಿ.ಎಸ್.ಪಿ. ಯೋಜನೆಯಡಿ ಸೋಲಾರ್/ವಿದ್ಯುತ್ ಚಾಲಿತ ಕೊಳವೆ ಬಾವಿಗಳನ್ನು ಕೊರೆಸಲು ನಿಗದಿಪಡಿಸಿರುವ ಆರ್ಥಿಕ ಮತ್ತು ಭೌತಿಕ ಗುರಿಗಳೇನು ; ಈ ಯೋಜನೆಯಡಿ ನಿರ್ಮಿಸಲಾದ ಸೋಲಾರ್/ ವಿದ್ಯುತ್ ಚಾಲಿತ ಕೊಳವೆ ಬಾವಿಗಳೆಷ್ಟು ; ಇದಕ್ಕಾಗಿ ಸರ್ಕಾರವು ಬಿಡುಗಡೆ ಮಾಡಿದ ಅನುದಾನವೆಷ್ಟು ; ಖರ್ಚಾದ ಅನುದಾನವೆಷ್ಟು? (ಫಲಾನುಭವಿ ಹೆಸರು, ಜಾತಿ, ಗ್ರಾಮ, ಹೋಬಳಿ, ತಾಲ್ಲೂಕು ವಿವರ ನೀಡುವುದು)

**ಎಸ್.ಸಿ.ಪಿ / ಟಿ.ಎಸ್.ಪಿ. ಕಾಮಗಾರಿಗಳ ಕುರಿತು**

**ಶ್ರೀ ಎಂ.ಎ.ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೫೮ (೫೨೭) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾವೇರಿ ನೀರಾವರಿ ನಿಗಮ ಮತ್ತು ವಿಶ್ವೇಶ್ವರಯ್ಯ ಜಲ ನಿಗಮದಿಂದ ಎಸ್.ಸಿ.ಪಿ/ಟಿ.ಎಸ್.ಪಿ. ಯೋಜನೆಗಳಡಿ ಕಳೆದ ೨ ವರ್ಷಗಳಲ್ಲಿ ಹಾಸನ ಜಿಲ್ಲೆಯಲ್ಲಿ ಕೈಗೆತ್ತಿಕೊಳ್ಳಲು ಅನುಮೋದನೆ ನೀಡಿರುವ ಕಾಮಗಾರಿಗಳು ಯಾವುವು ; ಕಾಮಗಾರಿಗಳ ವೆಚ್ಚವೆಷ್ಟು ; ಈ ಕಾಮಗಾರಿಗಳಿಗೆ ಮಂಜೂರಾದ ಅನುದಾನವೆಷ್ಟು ; ಈ ಕಾಮಗಾರಿಗಳ ಪೈಕಿ ಯಾವ ಆದೇಶಗಳಿಗೆ ಆರ್ಥಿಕ ಇಲಾಖೆಯು ತಡೆ ನೀಡಿದೆ ; (ಕಾಮಗಾರಿವಾರು ಸಂಪೂರ್ಣ ವಿವರ ನೀಡುವುದು)

(ಆ) ಆರ್ಥಿಕ ಇಲಾಖೆಯು ತಡೆ ನೀಡಲಾಗಿರುವ ಆದೇಶಗಳನ್ನು ಯಾವಾಗ ಬಿಡುಗಡೆ ಮಾಡಲಾಗುವುದು ;

(ಇ) ಈ ಕಾಮಗಾರಿಗಳನ್ನು ಪಡೆದಿರುವ ಗುತ್ತಿಗೆದಾರರು/ಏಜೆನ್ಸಿಗಳ ವಿವರ ನೀಡುವುದು ; ಈ ಕಾಮಗಾರಿಗಳು ಪ್ರಸ್ತುತ ಯಾವ ಯಾವ ಹಂತಗಳಲ್ಲಿವೆ ; ಈ ಕಾಮಗಾರಿಗಳಿಗಾಗಿ ಇಲ್ಲಿಯವರೆಗೆ ಬಿಡುಗಡೆ ಮಾಡಿರುವ ಅನುದಾನವೆಷ್ಟು ; (ಕಾಮಗಾರಿವಾರು ಸಂಪೂರ್ಣ ವಿವರ ನೀಡುವುದು)

## ಗ್ರಾಮೀಣ ಪ್ರದೇಶಗಳಲ್ಲಿ ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸುವ ಕುರಿತು

**ಶ್ರೀ ಎಂ.ಎ.ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೫೯ (೫೩೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಪಟ್ಟಣ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸಲು ಸರ್ಕಾರವು ರೂಪಿಸಿರುವ ಯೋಜನೆಗಳು ಯಾವುವು ; ಈ ಯೋಜನೆಗಳಡಿ ಕಳೆದ ೩ ವರ್ಷಗಳಲ್ಲಿ ಹಾಸನ ಜಿಲ್ಲೆಯಲ್ಲಿ ಸ್ಥಾಪನೆಯಾದ ಸಣ್ಣ ಕೈಗಾರಿಕೆಗಳ ಮಾಹಿತಿ ನೀಡುವುದು; (ಆದೇಶದ ಪ್ರತಿಯೊಂದಿಗೆ ಸಂಪೂರ್ಣ ವಿವರವನ್ನು ನೀಡುವುದು)

(ಆ) ಹಾಸನ ಜಿಲ್ಲಾ ವ್ಯಾಪ್ತಿಯಲ್ಲಿ ಯಾವ ಯಾವ ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸಲು ಅವಕಾಶಗಳಿವೆ ; ಸಣ್ಣ ಕೈಗಾರಿಕೆಗಳ ಒಂದು ಕೈಗಾರಿಕಾ ಪ್ರದೇಶ ಸ್ಥಾಪಿಸಲು ಇರುವಂತಹ ಮಾನದಂಡಗಳೇನು ; (ಸಂಪೂರ್ಣ ವಿವರ ನೀಡುವುದು)

(ಇ) ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ ಮತ್ತು ಹಿಂದುಳಿದ ವರ್ಗದವರು ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸಲು ಸರ್ಕಾರದ ವತಿಯಿಂದ ಯಾವ ಯಾವ ಯೋಜನೆಗಳನ್ನು ರೂಪಿಸಿ ಅವರಿಗೆ ಸಾಲ ಸೌಲಭ್ಯ, ಸಹಾಯ ಧನ ನೀಡಲಾಗುತ್ತಿದೆ ? (ಸಂಪೂರ್ಣ ವಿವರ ನೀಡುವುದು)

## ಗೃಹ ಬಳಕೆ ಅಥವಾ ಕೈಗಾರಿಕೆಗಳಿಗೆ ಅಕ್ರಮವಾಗಿ ವಿದ್ಯುತ್ ಸಂಪರ್ಕ

**ಶ್ರೀ ಕೆ. ಹರೀಶ್ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು):–**

೪೬೦ (೫೧೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗೃಹ ಬಳಕೆಗೆ ಅಥವಾ ಕೈಗಾರಿಕೆಗಳಿಗೆ ಅಕ್ರಮವಾಗಿ ವಿದ್ಯುತ್ ಸಂಪರ್ಕ ಪಡೆದುಕೊಳ್ಳುತ್ತಿರುವ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಆ) ಕ್ರಮ ಕೈಗೊಂಡಿದ್ದಲ್ಲಿ, ಇಲ್ಲಿಯವರೆಗೆ ದಂಡದ ರೂಪದಲ್ಲಿ ಇಂತಹ ಅಕ್ರಮಗಳಿಂದ ವಸೂಲಾದ ಒಟ್ಟು ಮೊತ್ತವೆಷ್ಟು ;

(ಇ) ದಂಡ ವಿಧಿಸುವ ಬದಲು ಬೆಸ್ಕಾಂ ಸಿಬ್ಬಂದಿಗಳು ಅಕ್ರಮ ಎಸಗಿದವರನ್ನು ರಕ್ಷಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸಿಬ್ಬಂದಿಯ ಮೇಲೆ ಯಾವ ರೀತಿ ಕ್ರಮಕೈಗೊಳ್ಳಲಾಗಿದೆ? (ಮಾಹಿತಿ ನೀಡುವುದು)

## ಎತ್ತಿನ ಹೊಳೆ ಯೋಜನೆಯ ಕುರಿತು

**ಶ್ರೀ ಕೆ. ಹರೀಶ್ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು):–**

೪೬೧ (೫೨೦) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಪ್ರಮುಖ ಯೋಜನೆಯಾದ ಎತ್ತಿನ ಹೊಳೆ ಯೋಜನೆಯ ವಿವರಗಳೇನು ; (ಮಾಹಿತಿ ನೀಡುವುದು)

(ಆ) ಈ ಯೋಜನೆಗೆ ಬೇಕಾದ ಎಷ್ಟು ಎಕರೆ ಭೂಮಿಯನ್ನು ಭೂಸ್ವಾಧೀನ ಪಡಿಸಿಕೊಳ್ಳಲಾಗಿದೆ ;

(ಇ) ಈ ಕಾಮಗಾರಿಯನ್ನು ಕೈಗೆತ್ತಿಕೊಂಡ ಸಂಸ್ಥೆ ಯಾವುದು ;

(ಈ) ಈ ಯೋಜನೆಯು ಪೂರ್ಣಗೊಳ್ಳುವುದು ಯಾವಾಗ ; ಇದಕ್ಕೆ ಮೀಸಲಿಟ್ಟ ಅನುದಾನ ಎಷ್ಟು ?

## FSL ವಿಧಿ ವಿಜ್ಞಾನ ಸಂಸ್ಥೆಯ ಸ್ವಾಯತ್ತತೆ ಕುರಿತು

**ಶ್ರೀ ಬಿ.ಕೆ. ಹರಿಪ್ರಸಾದ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೬೨ (೪೮೯) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರಿನಲ್ಲಿ ಅಸ್ತಿತ್ವದಲ್ಲಿರುವ ಎಫ್.ಎಸ್.ಎಲ್. (ವಿಧಿ ವಿಜ್ಞಾನ ಪ್ರಯೋಗಾಲಯ) ವನ್ನು ಆಧುನೀಕರಿಸಲು ಸರ್ಕಾರದ ಮುಂದೆ ಯಾವುದಾದರೂ ಪ್ರಸ್ತಾಪವಿದೆಯೇ ;

(ಆ) ಅಸ್ತಿತ್ವದಲ್ಲಿರುವ ಎಫ್.ಎಸ್.ಎಲ್. ಇತ್ತೀಚಿನ ತಾಂತ್ರಿಕತೆಯೊಂದಿಗೆ ಸಂಪೂರ್ಣವಾಗಿ ಸಜ್ಜುಗೊಂಡಿದೆಯೇ ;

(ಇ) ಈ ವಿಚಾರದಲ್ಲಿ ಸರ್ಕಾರ ಯಾವ ಕ್ರಮಗಳನ್ನು ತೆಗೆದುಕೊಳ್ಳುತ್ತದೆ ;

(ಈ) ಎಫ್.ಎಸ್.ಎಲ್.ಗೆ ಸ್ವತಂತ್ರ ಪರಿಣಾಮಕಾರಿ ಕಾರ್ಯನಿರ್ವಹಣೆಗೆ ಅನುಕೂಲವಾಗುವಂತೆ ಸ್ವಾಯತ್ತ ಸ್ಥಾನಮಾನವನ್ನು ನೀಡಿಲ್ಲವೇಕೆ ?

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಆಸ್ತಿ ತೆರಿಗೆಯನ್ನು ಹೆಚ್ಚಿಸುತ್ತಿರುವ ಕುರಿತು

**ಶ್ರೀ ಬಿ.ಕೆ. ಹರಿಪ್ರಸಾದ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೬೩ (೪೮೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರ ವ್ಯಾಪ್ತಿಯಲ್ಲಿ ವಾಸಿಸುವ/ವಾಣಿಜ್ಯ ಆಸ್ತಿಗಳ ಮೇಲಿನ ಆಸ್ತಿ ತೆರಿಗೆಯನ್ನು ಹೆಚ್ಚಿಸಲು ಸರ್ಕಾರದ ಮುಂದೆ ಯಾವುದಾದರೂ ಪ್ರಸ್ತಾಪವಿದೆಯೇ ;

(ಆ) ಹಾಗಿದ್ದಲ್ಲಿ, ಕೋವಿಡ್–೧೯ರ ಸಮಯದಲ್ಲಿ ಇಂತಹ ಕ್ರಮದ ಅವಶ್ಯಕತೆ ಇದೆಯೇ ; ಇದರಿಂದ ಜನರಿಗೆ ತೊಂದರೆಯಾಗುವುದಿಲ್ಲವೇ ?

## ವಿದ್ಯುತ್ ಪರಿವರ್ತಕ (ಟ್ರಾನ್ಸ್‌ಫಾರ್ಮರ್) ಅಳವಡಿಕೆಯಲ್ಲಿ ಅಕ್ರಮ ಬಗ್ಗೆ

**ಶ್ರೀ ಬಿ.ಕೆ. ಹರಿಪ್ರಸಾದ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೬೪ (೪೭೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೫–೧೬, ೨೦೧೬–೧೭ರಲ್ಲಿ ಮೆಸ್ಕಾಂ (ಮಂಗಳೂರು ವಿದ್ಯುತ್ ಸರಬರಾಜು ಕಂಪನಿ) ವ್ಯಾಪ್ತಿಯ ಶಿವಮೊಗ್ಗ ಜಿಲ್ಲೆಯ ಸೊರಬ ವಿಭಾಗದಲ್ಲಿ ಅಕ್ರಮ–ಸಕ್ರಮದಲ್ಲಿ ಎಷ್ಟು ಅರ್ಜಿದಾರರಿಗೆ ೨೫ ಕೆವಿ ವಿದ್ಯುತ್ ಪರಿವರ್ತಕ (ಟ್ರಾನ್ಸ್‌ಫಾರ್ಮರ್) ಮಂಜೂರು ಮಾಡಲಾಗಿದೆ ; (ಅರ್ಜಿದಾರರ ಹೆಸರು, ಗ್ರಾಮದ ವಿವರ ನೀಡುವುದು)

(ಆ) ಸೊರಬ ತಾಲ್ಲೂಕು, ಗುಡ್ಡೆಕೊಪ್ಪ ಗ್ರಾಮದಲ್ಲಿ ಮಂಜೂರಾದ ಅರ್ಜಿದಾರರ ವರ್ಕ್ ಅವಾರ್ಡ್ ಜಿ.ಕೆ.ಈ.ಪಿ. ೩೪೬೮/೩೪೬೯ (ಡಿ.೩೮೦೪೨, ದಿ: ೩೧.೦೩.೨೦೧೬) ಅಡಿಯಲ್ಲಿ ಮಂಜೂರಾದ ವಿದ್ಯುತ್ ಪರಿವರ್ತಕ (ಟ್ರಾನ್ಸ್‌ಫಾರ್ಮರ್) ಅಳವಡಿಸುವಲ್ಲಿ ಸ್ಥಳೀಯ ಗುತ್ತಿಗೆದಾರರೊಂದಿಗೆ ಮೆಸ್ಕಾಂ ಇಲಾಖೆಯವರು

ಶಾಮೀಲಾಗಿ ದಿ. ೦೪–೦೫–೨೦೧೬ರಲ್ಲಿಯೆ, ಕಾಮಗಾರಿ ಪೂರ್ಣಗೊಳಿಸಿರುವುದಾಗಿ ರೂ. ೨,೪೨,೯೪೪/–ಗಳನ್ನು ಡ್ರಾ ಮಾಡಿ ಮಂಜೂರಾದ ಅರ್ಜಿದಾರರ ಸಹಿಯನ್ನು ಸಹ ನಕಲು ಮಾಡಿ, ಮಂಜೂರಾದ ಅರ್ಜಿದಾರರನ್ನು ಬಿಟ್ಟು ಬೇರೆಯವರಿಗೆ ವಿದ್ಯುತ್ ಪರಿವರ್ತಕ (ಟ್ರಾನ್ಸ್‌ಫಾರ್ಮರ್) ಅಳವಡಿಸಿ ಅಕ್ರಮವೆಸಗಿರುವ ಬಗ್ಗೆ ಅರ್ಜಿದಾರರು ದೂರು ನೀಡಿರುವುದು ನಿಜವೇ ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ದೂರು ನೀಡಿರುವ ಅರ್ಜಿದಾರರಿಗೆ ಮಂಜೂರಾಗಿರುವ ವಿದ್ಯುತ್ ಪರಿವರ್ತಕ (ಟ್ರಾನ್ಸ್‌ಫಾರ್ಮರ್) ಅಳವಡಿಸಲಾಗಿದೆಯೇ ;

(ಈ) ಇಂತಹ ಇನ್ನೂ ಎಷ್ಟು ಪ್ರಕರಣಗಳಲ್ಲಿ ದೂರುಗಳು ಬಂದಿವೆ ; ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳುವುದು ? (ದೂರುಗಳು ಬಂದಲ್ಲಿ, ದೂರಿನ ಪ್ರತಿ ನೀಡುವುದು)

## ರಾಜ್ಯದ ಬಂದೀಖಾನೆಗಳ ಕುರಿತು

**ಶ್ರೀ ಬಿ.ಕೆ. ಹರಿಪ್ರಸಾದ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೬೫ (೪೮೬) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಬಂದೀಖಾನೆಗಳ ಸಂಖ್ಯೆ ಎಷ್ಟು ; ಅವಶ್ಯಕತೆಗಿಂತ ಹೆಚ್ಚು ಖೈದಿಗಳನ್ನು ತುಂಬಿರುವಂತಹ ಬಂದೀಖಾನೆಗಳು ಯಾವುವು ;

(ಆ) ಬಂದೀಖಾನೆಗಳಿಗೆ ಮೂಲ ಸೌಕರ್ಯಗಳನ್ನು ಒದಗಿಸುವುದು ಹಾಗೂ ಹೊಸ ಬಂದೀಖಾನೆಗಳನ್ನು ನಿರ್ಮಿಸಲು ಸರ್ಕಾರ ಯೋಚಿಸಿದೆಯೇ ?

## ಗ್ರಂಥಾಲಯ ಇಲಾಖೆಗೆ ಸಂದಾಯವಾಗಬೇಕಾಗಿರುವ ಸೆಸ್

**ಶ್ರೀ ಬಿ.ಕೆ. ಹರಿಪ್ರಸಾದ್ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೪೬೬ (೪೮೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೯–೨೦೨೦ನೇ ಸಾಲಿನಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಿಂದ ಗ್ರಂಥಾಲಯ ಇಲಾಖೆಗೆ ಸಂದಾಯವಾಗಬೇಕಾಗಿರುವ ಸೆಸ್‌ನ ಪ್ರಮಾಣವೆಷ್ಟು; ಬಾಕಿ ಇರುವ ಸೆಸ್‌ನ ಪ್ರಮಾಣವೆಷ್ಟು ;

(ಆ) ಓದುವ ಸಂಸ್ಕೃತಿಯನ್ನು ಬೆಳೆಸುವುದಕ್ಕೆ ಮತ್ತು ಗ್ರಂಥಾಲಯಗಳ ಅಭಿವೃದ್ಧಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಮೆಟ್ರೋ ರೈಲು ನಿಗಮ ಕುರಿತು

**ಶ್ರೀ ಕಾಂತರಾಜು ( ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೬೭ (೬೯೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಮೆಟ್ರೋ ರೈಲು ನಿಗಮದ ಕಾರ್ಯಾಚರಣೆ ಮತ್ತು ಮಾನವ ಸಂಪನ್ಮೂಲ ಹಾಗೂ ಯೋಜನಾ (Project) ವಿಭಾಗದಲ್ಲಿ ಗುತ್ತಿಗೆ ಮತ್ತು ನಿಯೋಜನೆ ಹಾಗೂ ಖಾಯಂ ಆಗಿ ಕಾರ್ಯನಿರ್ವಹಿಸುತ್ತಿರುವವರ ಪೈಕಿ ಎಷ್ಟು ಜನ ಹೊರ ರಾಜ್ಯದವರು ಇದ್ದಾರೆ ; ಅದರಲ್ಲಿ ಮುಖ್ಯ ಕಾರ್ಯ ನಿರ್ವಾಹಣೆ (Key Position) ಹುದ್ದೆಗಳಲ್ಲಿ ಎಷ್ಟು ಜನ ಕಾರ್ಯ ನಿರ್ವಹಿಸುತ್ತಿದ್ದಾರೆ ; (ವಿವರವಾದ ಮಾಹಿತಿ ನೀಡುವುದು)

(ಆ) BMRC ರವರು ಬೆಂಗಳೂರು ಮೆಟ್ರೋ ನಿಗಮದಲ್ಲಿ ೬೨ ವರ್ಷಕ್ಕಿಂತ ಹೆಚ್ಚಿಗೆ ವಯಸ್ಸಿನವರು ಕಾರ್ಯ ನಿರ್ವಹಿಸಲು ನಿರ್ಬಂದ ಹೇರಿರುವುದು ನಿಜವೇ ; ಹಾಗಾದರೆ ನಿಗಮವು ೭೫ ವರ್ಷದ ವಯಸ್ಸಿನವರನ್ನು ನೇಮಕ ಮಾಡುತ್ತಿರುವುದು ಸರಿಯೇ ; (ವಿವರವಾದ ಮಾಹಿತಿ ನೀಡುವುದು)

(ಇ) ಸದರಿ ನಿಗಮದಲ್ಲಿ ಒಂದೇ ವೃಂದ ಅಥವಾ ಸಮಾನ ವೃಂದದಲ್ಲಿ ಕೆಲಸ ನಿರ್ವಹಿಸುತ್ತಿದ್ದ ಸಿಬ್ಬಂದಿಗಳಲ್ಲಿ ಕಿರಿಯ ಸಿಬ್ಬಂದಿ ಬಡ್ತಿ ಹೊಂದಿದಾಗ ಜೇಷ್ಠತೆಯಲ್ಲಿ ಮೊದಲನೇ ಸಿಬ್ಬಂದಿಗಿಂತ ಕಿರಿಯ ಸಿಬ್ಬಂದಿಗೆ ಹೆಚ್ಚಿನ ವೇತನ ನೀಡುತ್ತಿರುವುದು ಸರಿಯೇ ; (ವಿವರವಾದ ಮಾಹಿತಿ ನೀಡುವುದು)

(ಈ) ನಿಗಮದ ಹೆಚ್.ಆರ್ ವಿಭಾಗದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳು ಯಾರು ಯಾರು ; ಅವರ ಹೆಸರು, ವಿದ್ಯಾರ್ಹತೆ, ಹುದ್ದೆ, ವಿಳಾಸದೊಂದಿಗೆ ಮಾಹಿತಿ ನೀಡುವುದು ; ಇವರುಗಳಿಗೆ ಹೆಚ್.ಆರ್. ಕೆಲಸದಲ್ಲಿ ೧೫ ವರ್ಷಗಳ ಅನುಭವ ಇದೆಯೇ ; ಅಥವಾ ಹೆಚ್.ಆರ್. ಸ್ನಾತಕ ಪದವಿ ಪಡೆದಿದ್ದಾರೆಯೇ ? (ವಿವರವಾದ ಮಾಹಿತಿ ನೀಡುವುದು)

## ಆರ್ಥಿಕ ಇಲಾಖೆ ಅಡಿಯಲ್ಲಿರುವ ಲೆಕ್ಕಶೀರ್ಷಿಕೆಗಳ ಬಗ್ಗೆ

**ಶ್ರೀ ಕಾಂತರಾಜು (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೬೮ (೬೯೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಲೆಕ್ಕ ಶೀರ್ಷಿಕೆಗಳು ಅಂದರೇನು ; ಇವುಗಳಲ್ಲಿ ಎಷ್ಟು ವಿಧ ; ಅವು ಯಾವುವು ; ಬ್ರಿಟೀಷರ ಕಾಲದಿಂದ ಇವುಗಳ ಇತಿಹಾಸವೇನು ; (ವಿವರವಾದ ಮಾಹಿತಿ ನೀಡುವುದು)

(ಆ) ರಾಜ್ಯ ಸರ್ಕಾರದ ಆರ್ಥಿಕ ಇಲಾಖೆ ಅಡಿಯಲ್ಲಿ ಎಷ್ಟು ಲೆಕ್ಕ ಶೀರ್ಷಿಕೆಗಳಿವೆ ; ಅವುಗಳ ವಿಧಗಳಾವುವು ; (ವಿವರವಾಗಿ ಇಲಾಖಾವಾರು ಮಾಹಿತಿ ನೀಡುವುದು)

(ಇ) ಆರ್ಥಿಕ ಇಲಾಖೆಯ ಅಧೀನದಲ್ಲಿ ಬರುವ ಜೀ–ಹೂಜೂರು ಖಜಾನೆಯನ್ನು ಯಾವಾಗಿನಿಂದ ಪ್ರಾರಂಭಿಸಲಾಯಿತು ಹಾಗೂ ಇದರ ಇತಿಹಾಸವೇನು ; ಇದರ ಕರ್ತವ್ಯ ಹಾಗೂ ಧ್ಯೇಯೋದ್ದೇಶಗಳೇನು ;

(ಈ) ೨೦೧೮–೨೦೧೯ ಹಾಗೂ ೨೦೧೯–೨೦೨೦ನೇ ಆರ್ಥಿಕ ವರ್ಷದಲ್ಲಿ ಕೇಂದ್ರ ಸರ್ಕಾರದಿಂದ ರಾಜ್ಯ ಸರ್ಕಾರಕ್ಕೆ ಯಾವ ಯಾವ ಯೋಜನೆಗಳಡಿ ಯಾವ ಯಾವ ಲೆಕ್ಕ ಶೀರ್ಷಿಕೆಗಳ ಅಡಿ ಎಷ್ಟು ಹಣ ಬಿಡುಗಡೆ ಆಗಿದೆ ? (ವಿವರವಾದ ಮಾಹಿತಿ ನೀಡುವುದು)

## ಬೆಳಗಾವಿ ಸುವರ್ಣ ವಿಧಾನಸೌಧವನ್ನು ಸಂಪೂರ್ಣ ಬಳಕೆ ಮಾಡಿಕೊಳ್ಳುವ ಕುರಿತು

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೬೯ (೫೭೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉತ್ತರ ಕರ್ನಾಟಕದ ಜನತೆಯ ಸಮಸ್ಯೆಗಳಿಗೆ ಸ್ಪಂದಿಸುವ ನಿಟ್ಟಿನಲ್ಲಿ ರೂ ೪೩೫.೦೦ ಕೋಟಿ ವೆಚ್ಚದಲ್ಲಿ ನಿರ್ಮಿಸಲಾದ ಸುವರ್ಣ ವಿಧಾನ ಸೌಧವು ಸಂಪೂರ್ಣ ಬಳಕೆಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸುವರ್ಣ ವಿಧಾನ ಸೌಧಕ್ಕೆ ರಾಜ್ಯ ಸರ್ಕಾರದ ಕೆಲವು ಪ್ರಮುಖ ಇಲಾಖೆಗಳನ್ನು ಶಾಶ್ವತವಾಗಿ ಸ್ಥಳಾಂತರಿಸುವ ಉದ್ದೇಶ ಸರ್ಕಾರಕ್ಕಿದೆಯೇ;

(ಇ) ಇದ್ದಲ್ಲಿ, ಈ ಪ್ರಕ್ರಿಯೆಯನ್ನು ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು ಹಾಗೂ ಯಾವ ಯಾವ ಇಲಾಖೆಗಳನ್ನು ಸ್ಥಳಾಂತರಿಸಲಾಗುವುದು ? (ವಿವರ ನೀಡುವುದು)

## ಉತ್ತರ ಕರ್ನಾಟಕದ ದೂದ್ ಗಂಗಾ ಯೋಜನೆ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೭೦ (೫೮೦) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಹಾರಾಷ್ಟ್ರ ಹಾಗೂ ಉತ್ತರ ಕರ್ನಾಟಕ ರಾಜ್ಯದ ಜಂಟಿ ಸಹಭಾಗಿತ್ವದ ಉತ್ತರ ಕರ್ನಾಟಕ ಮಹಾತ್ವಾಕಾಂಕ್ಷೆ ಯೋಜನೆಯಾದ ದೂದ್‌ಗಂಗಾ ಯೋಜನೆಗೆ ಸಂಬಂಧಿಸಿದಂತೆ ಈವರೆಗೂ ಕಾಮಗಾರಿ ಪೂರ್ಣಗೊಳ್ಳದಿರುವ ಬಗ್ಗೆ ಸರ್ಕಾರದ ನಿಲುವೇನು ;

(ಆ) ಈ ಜಂಟಿ ಯೋಜನೆಯನ್ನು ಯಾವಾಗ ಹಮ್ಮಿಕೊಳ್ಳಲಾಗಿತ್ತು ; ಸದರಿ ಯೋಜನೆಗೆ ಅಂದಾಜು ಮಾಡಲಾಗಿದ್ದ ಒಟ್ಟು ಹಣವೆಷ್ಟು ; (ವಿವರ ನೀಡುವುದು)

(ಇ) ಈ ಜಂಟಿ ಯೋಜನೆ ಪ್ರಾರಂಭವಾದಂದಿನಿಂದ ಇಲ್ಲಿಯವರೆಗೂ ವೆಚ್ಚವಾದ ಒಟ್ಟು ಹಣವೆಷ್ಟು ; (ವರ್ಷವಾರು ವಿವರ ನೀಡುವುದು)

(ಈ) ಸದರಿ ಯೋಜನೆಯು ಯಾವ ಹಂತದಲ್ಲಿದೆ ಮತ್ತು ಯಾವ ಕಾಲಮಿತಿಯೊಳಗೆ ಯೋಜನೆಯನ್ನು ಪೂರ್ಣಗೊಳಿಸಲಾಗುವುದು ;

(ಉ) ಸದರಿ ಯೋಜನೆಗೆ ಸಂಬಂಧಿಸಿದಂತೆ ಮಹಾರಾಷ್ಟ್ರ ಸರ್ಕಾರದಿಂದ ಇಲ್ಲಿಯವರೆಗೆ ಬಿಡುಗಡೆಯಾದ ಹಣವೆಷ್ಟು; ಹಾಗೂ ಆ ಸರ್ಕಾರದೊಂದಿಗೆ ಈ ಯೋಜನೆಗೆ ಸಂಬಂಧಿಸಿದಂತೆ ನಡೆದ ಸಭೆಗಳ ಸಂಪೂರ್ಣ ವಿವರ ನೀಡುವುದು ?

## ಬೆಳಗಾವಿ ಜಿಲ್ಲೆಯ ರೈತಾಪಿ ಜನರಿಗೆ ನೀರಾವರಿ ಸೌಲಭ್ಯ ಒದಗಿಸುವ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೭೧ (೫೭೮) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ಜಿಲ್ಲೆಯ ಪಶ್ಚಿಮ ಘಟ್ಟದಲ್ಲಿರುವ ಘಟಪ್ರಭಾ, ಮಲಪ್ರಭಾ, ಹಿರಣ್ಯಕೇಶಿ, ಕೃಷ್ಣಾ ಮತ್ತು ವೇದಗಂಗಾ ನದಿಗಳು ಮಳೆಗಾಲದ ಸಂದರ್ಭದಲ್ಲಿ ತುಂಬಿ ಹರಿದು ಲಕ್ಷಾಂತರ ಕ್ಯೂಸೆಕ್ಸ್ ನೀರು ಸಮುದ್ರ ಪಾಲಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸಮುದ್ರ ಪಾಲಾಗುವ ನೀರನ್ನು ಅಲ್ಲಲ್ಲಿ ಶೇಖರಣೆ ಮಾಡುವ ಯೋಜನೆಗಳನ್ನು ರೂಪಿಸಿ ನೀರಾವರಿಯಿಂದ ವಂಚಿತರಾದ ಈ ಭಾಗದ ಜನರಿಗೆ ನೀರಾವರಿ ಸೌಲಭ್ಯ ಒದಗಿಸುವ ಯೋಜನೆ ಜಾರಿಗೊಳಿಸುವ ಉದ್ದೇಶ ಸರ್ಕಾರಕ್ಕಿದೆಯೇ ;

(ಇ) ಹಾಗಿದ್ದಲ್ಲಿ, ಈ ಭಾಗದ ರೈತಾಪಿ ಜನರಿಗೆ ನೆರವಾಗುವ ದೃಷ್ಟಿಯಲ್ಲಿ ಸರ್ಕಾರವು ಯಾವ ಕಾಲಮಿತಿಯಲ್ಲಿ ಇಂತಹ ಯೋಜನೆಗಳನ್ನು ಪೂರ್ಣಗೊಳಿಸಲು ಯೋಚಿಸಿದೆ ?

## ಬಿ.ಡಿ.ಎ., ಬಡಾವಣೆಗಳಲ್ಲಿ ಮೂಲಭೂತ ಸವಲತ್ತುಗಳ ಕೊರತೆ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೭೨ (೫೭೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಜನರಿಗೆ ಹಲವಾರು ಬಡಾವಣೆಗಳನ್ನು ನಿರ್ಮಿಸಿದ್ದು, ನಿರ್ಮಿಸಲಾಗಿರುವ ಅನೇಕ ಬಡಾವಣೆಗಳಲ್ಲಿ ಮೂಲಭೂತ ಸೌಲಭ್ಯಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಬೆಂಗಳೂರು ಅಭಿವೃದ್ಧಿ, ಪ್ರಾಧಿಕಾರವು ನಿರ್ಮಿಸಿದ ಯಾವ ಯಾವ ಬಡಾವಣೆಗಳು ಮೂಲಭೂತ ಸವಲತ್ತುಗಳ ಕೊರತೆ ಎದುರಿಸುತ್ತಿದೆ ;

(ಇ) ಅಂತಹ ಬಡಾವಣೆಗಳಲ್ಲಿ ಜನರಿಗೆ ಬೇಕಾದ ವಿಸ್ತಾರವಾದ ರಸ್ತೆ ಶುದ್ಧ ಕುಡಿಯುವ ನೀರಿನ ಪೂರೈಕೆ ಒಳಚರಂಡಿ ಹಾಗೂ ವಿದ್ಯುತ್ತಿನ ಅನುಕೂಲತೆ ಒದಗಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಈ) ಬೆಂಗಳೂರು ನಗರದ ಕೆಲವು ಭಾಗಗಳು ಈಗಾಗಲೇ ದೊಡ್ಡ ಪ್ರಮಾಣದಲ್ಲಿ ಕುಡಿಯುವ ನೀರಿನ ಸಮಸ್ಯೆಯನ್ನು ಎದುರಿಸುತ್ತಿದ್ದು, ಹೊಸದಾಗಿ ನಿರ್ಮಿಸುತ್ತಿರುವ ಬಡಾವಣೆಗಳಿಗೆ ಯಾವ ಮೂಲಗಳಿಂದ ನೀರು ಒದಗಿಸಲು ಯೋಜನೆ ರೂಪಿಸಲಾಗಿದೆ ?

## ರಾಜ್ಯದಲ್ಲಿ ಡ್ರಗ್ಸ್ ದಂಧೆ ವ್ಯಾಪಕವಾಗಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೭೩ (೫೭೬) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಡ್ರಗ್ಸ್ ಮಾರಾಟ ದಂಧೆ ವ್ಯಾಪಕವಾಗಿ ನಡೆಯುತ್ತಿದ್ದು, ಯುವ ಪೀಳಿಗೆ ಇದರ ಜಾಲಕ್ಕೆ, ಬಿದ್ದು ಜೀವನ ಹಾಳು ಮಾಡಿಕೊಳ್ಳುತ್ತಿರುವುದನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆಯೇ ;

(ಆ) ಸದರಿ ಮಾದಕ ವಸ್ತು ಮಾರಾಟ ದಂಧೆಯನ್ನು ಪರಿಣಾಮಕಾರಿಯಾಗಿ ಹತ್ತಿಕ್ಕಲು ಸರ್ಕಾರ ಯಾವ ಯಾವ ಕ್ರಮಗಳನ್ನು ಕೈಗೊಂಡಿದೆ ;

(ಇ) ಕಳೆದ ಎರಡು ವರ್ಷಗಳಲ್ಲಿ ರಾಜ್ಯದಲ್ಲಿ ಮಾದಕ ವಸ್ತು ಮಾರಾಟ ಮಾಡುತ್ತಿರುವ ಎಷ್ಟು ಮಂದಿಯನ್ನು ಬಂಧಿಸಲಾಗಿದೆ ; ಎಷ್ಟು ಮಂದಿಯನ್ನು ಕಾನೂನಿನಡಿ ಶಿಕ್ಷೆಗೆ ಒಳಪಡಿಸಲಾಗಿದೆ ;

(ಈ) ತಿಂಗಳುಗಟ್ಟಲೆ ನಿಗಾ ವಹಿಸಿ ಡ್ರಗ್ ಪೆಡ್ಲರ್‌ನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೊಳಪಡಿಸಿದರೆ ಆರೋಪಿ ವಾರದೊಳಗೆ ಜಾಮೀನಿನ ಮೇಲೆ ಹೊರಗೆ ಬರಲು ಕಾರಣವೇನು ;

(ಉ) ಮಾದಕ ವಸ್ತು ಪ್ರಕರಣಗಳಲ್ಲಿ ತ್ವರಿತ ವಿಚಾರಣೆ ನಡೆಸಿ ಆರೋಪಿಗಳಿಗೆ ಕಠಿಣ ಶಿಕ್ಷೆ ವಿಧಿಸುವಂತೆ ಮಾಡಲು ನ್ಯಾಯಾಲಯಗಳಿಗೆ ಮನವಿ ಮಾಡುವ ಯೋಚನೆ ಸರ್ಕಾರಕ್ಕಿದೆಯೇ ?

## ಆತ್ಮಹತ್ಯೆಗೆ ಶರಣಾದ ಸರ್ಕಾರಿ ನೌಕರರ ಕುರಿತು

**ಶ್ರೀ ಕೆ.ಸಿ. ಕೊಂಡಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೭೪ (೬೨೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೋವಿಡ್ ಕರ್ತವ್ಯದಲ್ಲಿದ್ದವರ ಪೈಕಿ ಕೆಲವು ಸರ್ಕಾರಿ ಅಧಿಕಾರಿ / ನೌಕರರು ಮೃತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಆತ್ಮಹತ್ಯೆ ಮಾಡಿಕೊಂಡವರ ಸಂಖ್ಯೆ ಎಷ್ಟು ಕಾರಣಗಳೇನು ;

(ಇ) ಮೃತರ ಕುಟುಂಬ ವರ್ಗದವರಿಗೆ ಸರ್ಕಾರದಿಂದ ನೀಡಲಾದ ಪರಿಹಾರವೇನು ?

## ವಿದ್ಯುತ್ ಕಾಯಿದೆಗೆ ತಿದ್ದುಪಡಿ ತರುತ್ತಿರುವ ಕುರಿತು

**ಶ್ರೀ ಕೆ.ಸಿ. ಕೊಂಡಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೭೫ (೫೮೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ವಿದ್ಯುತ್ ಕಾಯಿದೆಯ ತಿದ್ದುಪಡಿ ಪ್ರಸ್ತಾವವನ್ನು ಮರು ಪರಿಶೀಲಿಸುವಂತೆ ಕೇಂದ್ರ ಸರ್ಕಾರಕ್ಕೆ ರಾಜ್ಯ ಸರ್ಕಾರ ಅಭಿಪ್ರಾಯ ವ್ಯಕ್ತಪಡಿಸಿದೆಯೇ ;

(ಆ) ಹಾಗಿದ್ದಲ್ಲಿ, ಇದರಿಂದ ಉಚಿತ ವಿದ್ಯುತ್ ಪೂರೈಸುವ ಯೋಜನೆಗಳಿಗೆ ಧಕ್ಕೆಯಾಗುವುದು ಸರ್ಕಾರದ ಗಮನದಲ್ಲಿದೆಯೇ ; ಈ ಕುರಿತು ಸರ್ಕಾರದ ನಿಲುವೇನು ?

## ಮೇಕೆದಾಟು ಯೋಜನೆ ಕುರಿತು

**ಶ್ರೀ ಕೆ.ಸಿ. ಕೊಂಡಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೭೬ (೫೮೮) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೇಕೆದಾಟು ಯೋಜನೆ ಕಳೆದ ಹತ್ತಾರು ವರ್ಷಗಳಿಂದ ನೆನೆಗುದಿಗೆ ಬಿದ್ದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಯೋಜನೆಯಿಂದ ಬೆಂಗಳೂರು ನಗರದ ಕುಡಿಯುವ ನೀರಿಗೆ ಹಾಗೂ ರೈತರ ವ್ಯವಸಾಯಕ್ಕೆ ದೊರೆಯಬಹುದಾದ ನೀರಿನ ಪ್ರಮಾಣವೆಷ್ಟು ;

(ಇ) ಮುಳುಗಡೆಯಾಗಲಿರುವ ಅರಣ್ಯ ಮತ್ತು ಕೃಷಿ ಜಮೀನಿನ ವ್ಯಾಪ್ತಿ ಎಷ್ಟು; ಯಾವ ಕಾಲಮಿತಿಯೊಳಗೆ ಈ ಯೋಜನೆಯನ್ನು ಪೂರ್ಣಗೊಳಿಸಲಾಗುವುದು ?

## ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ಹಂಚಿಕೆಯಾದ ನಿವೇಶನಗಳ ಬಗ್ಗೆ

**ಶ್ರೀ ಕೆ.ಸಿ. ಕೊಂಡಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೭೭ (೫೭೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೮–೧೯, ೨೦೧೯–೨೦ನೇ ಸಾಲಿನಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ಹಂಚಿಕೆಯಾಗಿರುವ ನಿವೇಶನಗಳ ಸಂಖ್ಯೆ ಎಷ್ಟು;

(ಆ) ಹಂಚಿಕೆ ಮಾಡಿದ್ದಲ್ಲಿ, ವಾರ್ಷಿಕವಾರು ವಿವರವನ್ನು ನೀಡುವುದು ;

(ಇ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಲ್ಲಿ ಹಲವಾರು ಇಲಾಖೆಯ ಸಿಬ್ಬಂದಿಗಳು ನಿಯೋಜನೆ ಮೇರೆಗೆ ವಿವಿಧ ವಿಭಾಗಗಳಲ್ಲಿ ಹಲವಾರು ವರ್ಷಗಳಿಂದ ಕರ್ತವ್ಯ ನಿರ್ವಹಿಸುತ್ತಿದ್ದು ಸಾರ್ವಜನಿಕರಿಗೆ ತುಂಬಾ ತೊಂದರೆ ಕೊಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಸುದೀರ್ಘ ಅವಧಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವವರನ್ನು ಮಾತೃ ಇಲಾಖೆಗೆ ಹಿಂದಕ್ಕೆ ಕಳುಹಿಸಲು ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ;

(ಉ) ನಿಯೋಜಿತ ಸಿಬ್ಬಂದಿಗಳಿಗೆ ಸರ್ಕಾರದ ನಿಯೋಜನೆಯ ನಿಯಮಗಳು ಅನ್ವಯವಾಗುವುದಿಲ್ಲವೇ ? (ನಿಯೋಜಿತ ಸಿಬ್ಬಂದಿ / ಅಧಿಕಾರಿಗಳ ವರ್ಷವಾರು ಮಾಹಿತಿಯನ್ನು ಒದಗಿಸುವುದು)

## ನಿಯೋಜನಾ ಸಿಬ್ಬಂದಿ ಮಾತೃ ಇಲಾಖೆಗೆ ವರದಿ ಮಾಡಿಕೊಳ್ಳದಿರುವುದು

**ಶ್ರೀ ಕೆ.ಸಿ. ಕೊಂಡಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೭೮ (೫೭೫) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರಕ್ಕೆ ಪೊಲೀಸ್ ಇಲಾಖೆಯಿಂದ ಕರ್ತವ್ಯ ನಿರ್ವಹಿಸಲು ಸಿಬ್ಬಂದಿಗಳನ್ನು ನಿಯೋಜಿಸಲಾಗಿದೆಯೇ ; ನಿಯೋಜನೆ ಮೇಲೆ ಕರ್ತವ್ಯ ನಿರ್ವಹಿಸುತ್ತಿದ್ದ ಪೊಲೀಸ್‌ರ ವಿವರಗಳನ್ನು ಒದಗಿಸುವುದು ;

(ಆ) ಈ ರೀತಿ ನಿಯೋಜನೆಗೊಂಡವರು ಎಷ್ಟು ವರ್ಷಗಳಿಂದ ಸೇವೆ ಸಲ್ಲಿಸುತ್ತಿದ್ದಾರೆ ; ಪ್ರಸ್ತುತ ನಿಯೋಜನೆ ಮೇಲಿದ್ದವರನ್ನು ಕರ್ತವ್ಯದಿಂದ ಬಿಡುಗಡೆಗೊಳಿಸಲಾಗಿದೆಯೇ ;

(ಇ) ಬಿಡುಗಡೆಗೊಳಿಸಿ ಆದೇಶ ಹೊರಡಿಸಿದ್ದರೂ ನಿಯೋಜನೆ ಮೇಲಿದ್ದವರು ತಮ್ಮ ಮಾತೃ ಇಲಾಖೆಗೆ ಕರ್ತವ್ಯಕ್ಕೆ ವರದಿ ಮಾಡಿಕೊಂಡಿದ್ದಾರೆಯೇ ;

(ಈ) ಇನ್ನೂ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳದೇ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಲ್ಲೇ ಅನಧಿಕೃತ ಕೆಲಸಗಳಲ್ಲಿ ತೊಡಗಿರುವ ಬಗ್ಗೆ ಸರ್ಕಾರಕ್ಕೆ ಮಾಹಿತಿ ಇದೆಯೇ ; ಇದ್ದಲ್ಲಿ, ಸಂಬಂಧಿಸಿದವರ ವಿರುದ್ಧ ಕ್ರಮ ಕೈಗೊಳ್ಳಲಾಗುವುದೇ ?

## ರಾಜ್ಯದಲ್ಲಿ ಡ್ರಗ್ಸ್ ಮಾರಾಟವಾಗುತ್ತಿರುವ ಬಗ್ಗೆ

**ಶ್ರೀ ಲಹರ್ ಸಿಂಗ್ ಸಿರೋಯಾ (ವಿಧಾನ ಸಭೆಯಿಂದ ಚುನಾಯಿತರಾದವರು):–**

೪೭೯ (೫೮೭) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಡ್ರಗ್ಸ್ ಮಾರಾಟದ ದಂಧೆ ರಾಜಾರೋಷವಾಗಿ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಡ್ರಗ್ಸ್ ಮಾರಾಟದಲ್ಲಿ ಅನೇಕ ಸಲೆಬ್ರಿಟಿಗಳು ಭಾಗಿಯಾಗಿರುವುದು ನಿಜವೇ ; (ಪೂರ್ಣ ಮಾಹಿತಿಯನ್ನು ಒದಗಿಸುವುದು)

(ಇ) ಡ್ರಗ್ಸ್ ಮಾರಾಟಕ್ಕೆ ಕಡಿವಾಣ ಹಾಕಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ? (ಉತ್ತರವನ್ನು ಕನ್ನಡ ಮತ್ತು ಆಂಗ್ಲ ಭಾಷೆಯಲ್ಲಿ ನೀಡುವುದು)

## ಅಕ್ರಮವಾಗಿ ನೆಲೆಸಿರುವ ವಿದೇಶಿಯರ ಬಗ್ಗೆ

**ಶ್ರೀ ಲಹರ್ ಸಿಂಗ್ ಸಿರೋಯಾ (ವಿಧಾನ ಸಭೆಯಿಂದ ಚುನಾಯಿತರಾದವರು):–**

೪೮೦ (೬೨೬) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ೨೦೨೦ರ ಜುಲೈ ಅಂತ್ಯಕ್ಕೆ ವೀಸಾ ಅವಧಿ ಮುಗಿದಿರುವ ವಿವಿಧ ದೇಶಗಳ ಎಷ್ಟು ವಿದ್ಯಾರ್ಥಿಗಳು ಹಾಗೂ ವಿದೇಶಿಯರು ಅಕ್ರಮವಾಗಿ ವಾಸವಾಗಿದ್ದಾರೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ವೀಸಾ ಅವಧಿ ಮುಗಿದಿರುವ ವಿದ್ಯಾರ್ಥಿಗಳು ಹಾಗೂ ವಿದೇಶಿಯರು ಕಾನೂನು ಬಾಹಿರ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಕಾನೂನು ಬಾಹಿರ ಚಟುವಟಿಕೆಗಳಲ್ಲಿ ತೊಡಗಿರುವ ಇವರ ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಈ) ವೀಸಾ ಅವಧಿ ಮುಗಿದಿದ್ದರೂ ಅಕ್ರಮವಾಗಿ ರಾಜ್ಯದಲ್ಲಿ ನೆಲೆಸಿರುವ ವಿದೇಶಿಯರನ್ನು ವಾಪಸ್ಸು ಅವರ ದೇಶಕ್ಕೆ ಕಳುಹಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ? (ಪೂರ್ಣ ವಿವರವನ್ನು ನೀಡುವುದು)

## ಆಸ್ತಿ ತೆರಿಗೆ ಪಾವತಿಸದಿರುವ ಕುರಿತು

**ಶ್ರೀ ಲಹರ್ ಸಿಂಗ್ ಸಿರೋಯಾ (ವಿಧಾನ ಸಭೆಯಿಂದ ಚುನಾಯಿತರಾದವರು):–**

೪೮೧ (೬೨೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೫–೨೦೧೬ ರಿಂದ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಎಂಟು ವಲಯಗಳಲ್ಲಿರುವ ಸರ್ಕಾರಿ ಕಛೇರಿಗಳೂ ಸೇರಿದಂತೆ ಅನೇಕ ಪ್ರತಿಷ್ಠಿತ ಖಾಸಗಿ ಸಂಸ್ಥೆಗಳು ಬೆಂಗಳೂರು ಮಹಾನಗರ ಪಾಲಿಕೆಗೆ ಆಸ್ತಿ ತೆರಿಗೆಯನ್ನು ಪಾವತಿಸದೆ ಬಾಕಿ ಉಳಿಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಅವಧಿಯಲ್ಲಿ ಪ್ರತಿಷ್ಠಿತ ಖಾಸಗಿ ಸಂಸ್ಥೆಗಳಿಂದ ಪಾಲಿಕೆಗೆ ಬರಬೇಕಾಗಿರುವ ಬಾಕಿ ಆಸ್ತಿ ತೆರಿಗೆಯ ಮೊತ್ತವೆಷ್ಟು; (ವಿವರವನ್ನು ಒದಗಿಸುವುದು)

(ಇ) ಪ್ರತಿಷ್ಠಿತ ಖಾಸಗಿ ಸಂಸ್ಥೆಗಳಿಂದ ಬಾಕಿ ಇರುವ ಆಸ್ತಿ ತೆರಿಗೆಯ ಮೊತ್ತವನ್ನು ವಸೂಲಿ ಮಾಡಲು ಸರ್ಕಾರವು ಯಾವ ಕ್ರಮ ಕೈಗೊಂಡಿದೆ ? (ಪೂರ್ಣ ವಿವರವನ್ನು ಒದಗಿಸುವುದು)

## ಬೆಂಗಳೂರಿನ ೧೧೦ ಹಳ್ಳಿಗಳಿಗೆ ಕಾವೇರಿ ನೀರು ಸರಬರಾಜು ಮಾಡುವ ಬಗ್ಗೆ

**ಶ್ರೀ ಲಹರ್ ಸಿಂಗ್ ಸಿರೋಯಾ (ವಿಧಾನ ಸಭೆಯಿಂದ ಚುನಾಯಿತರಾದವರು):–**

೪೮೨ (೬೨೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯಿಂದ ಜಾರಿಯಾದ ೧೧೦ ಹಳ್ಳಿಗಳಿಗೆ ಕಾವೇರಿ ನೀರನ್ನು ಒದಗಿಸುವ ಕಾಮಗಾರಿ ಯಾವ ಹಂತದಲ್ಲಿದೆ ;

(ಆ) ಈ ಯೋಜನೆಯಡಿ ಈವರೆವಿಗೆ ನೀರು ಸರಬರಾಜು ಮಾಡಿದ ಹಳ್ಳಿಗಳ ವಿವರ ಹಾಗೂ ನೀರಿನ ಸಂಪರ್ಕ ಪಡೆದವರೆಷ್ಟು ? (ಒಟ್ಟು ಸಂಖ್ಯೆಯ ವಿವರಗಳನ್ನು ನೀಡುವುದು) (ಉತ್ತರವನ್ನು ಕನ್ನಡ ಮತ್ತು ಆಂಗ್ಲ ಭಾಷೆಯಲ್ಲಿ ನೀಡುವುದು)

## ಯಲಚೇನಹಳ್ಳಿ – ಅಂಜನಾಪುರ ಮೆಟ್ರೋ ಮಾರ್ಗ ಆರಂಭಿಸುವ ಕುರಿತು

**ಶ್ರೀ ಲಹರ್ ಸಿಂಗ್ ಸಿರೋಯಾ (ವಿಧಾನ ಸಭೆಯಿಂದ ಚುನಾಯಿತರಾದವರು):–**

೪೮೩ (೬೨೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕನಕಪುರ ರಸ್ತೆಯ ಯಲಚೇನಹಳ್ಳಿ – ಅಂಜನಾಪುರ ಹಾಗೂ ಮೈಸೂರು ರಸ್ತೆಯ ನಾಯಂಡಹಳ್ಳಿ – ಕೆಂಗೇರಿ ಮೆಟ್ರೋ ಮಾರ್ಗಗಳು ಸಾರ್ವಜನಿಕ ಸಂಚಾರಕ್ಕೆ ಯಾವಾಗ ದೊರೆಯಲಿವೆ ;

(ಆ) ಇವೆರಡೂ ಮಾರ್ಗಗಳ ಕಾಮಗಾರಿ ಯಾವ ಹಂತದಲ್ಲಿದೆ ? (ಪೂರ್ಣ ವಿವರಗಳನ್ನು ಒದಗಿಸುವುದು)

## ರಾಜ್ಯದಲ್ಲಿರುವ ಕಾನೂನು ಕಾಲೇಜುಗಳ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ):–**

೪೭೪ (೫೩೬) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಸರ್ಕಾರಿ / ಅನುದಾನಿತ / ಅನುದಾನ ರಹಿತ ಕಾನೂನು ಕಾಲೇಜುಗಳ ಸಂಖ್ಯೆ ಎಷ್ಟು ;

(ಆ) ಸರ್ಕಾರಿ ಅನುದಾನಿತ ಕಾಲೇಜುಗಳಲ್ಲಿ ಯಾವ ಯಾವ ಮೂಲ ಸೌಕರ್ಯಗಳ ಹಾಗೂ ಸಿಬ್ಬಂದಿಗಳ ಕೊರತೆ ಇದೆ ; (ಪ್ರತ್ಯೇಕವಾಗಿ ವಿವರ ನೀಡುವುದು)

(ಇ) ಈ ಕೊರತೆಗಳನ್ನು ನೀಗಿಸುವ ಸಂಬಂಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಸದರಿ ಕಾಲೇಜುಗಳ ಬೋಧಕ ಸಿಬ್ಬಂದಿಗಳಿಗೆ ಯು.ಜಿ.ಸಿ. ವೇತನವನ್ನು ನೀಡಲಾಗುತ್ತಿದೆಯೇ ?

## ನೀರಾವರಿ ನಿಗಮಗಳ ಯೋಜನೆ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ):–**

೪೮೫ (೫೩೭) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:–

(ಅ) ರಾಜ್ಯದಲ್ಲಿರುವ ನೀರಾವರಿ ನಿಗಮಗಳಿಗೆ ಕಳೆದ ಸಾಲಿನ ಆಯವ್ಯಯದಲ್ಲಿ ಎಷ್ಟು ಮೊತ್ತವನ್ನು ನಿಗದಿಗೊಳಿಸಲಾಗಿದೆ ; (ನಿಗಮವಾರು ಪ್ರತ್ಯೇಕ ವಿವರಗಳನ್ನು ಒದಗಿಸುವುದು)

(ಆ) ಸದರಿ ನಿಗಮಗಳಲ್ಲಿ ಆಯವ್ಯಯ ಮೊತ್ತದ ಅಡಿಯಲ್ಲಿ ಹೊಸದಾಗಿ ಯಾವ ಯೋಜನೆಗಳನ್ನು ರೂಪಿಸಲಾಗಿದೆ ; ಸದರಿ ಯೋಜನೆಗಳ ರೂಪುರೇಷೆಗಳೇನು ;

(ಇ) ಸದರಿ ಯೋಜನೆಯ ಅಂದಾಜು ಮೊತ್ತವೆಷ್ಟು ; (ನಿಗಮವಾರು ಪ್ರತ್ಯೇಕವಾಗಿ ವಿವರ ನೀಡುವುದು)

(ಈ) ಸದರಿ ಕಾಮಗಾರಿಗಳು ಯಾವ ಹಂತದಲ್ಲಿವೆ ?

## ಪೊಲೀಸ್ ಇಲಾಖೆಯ ವಿವಿಧ ಹುದ್ದೆಗಳ ಭರ್ತಿ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೪೮೬ (೫೩೯) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:–

(ಅ) ರಾಜ್ಯದಲ್ಲಿ ಖಾಲಿ ಇರುವ ಪೊಲೀಸ್ ಪೇದೆ, ಮುಖ್ಯಪೇದೆ, ಎ.ಎಸ್.ಐ. ಸಬ್ ಇನ್ಸ್‌ಪೆಕ್ಟರ್ ಹಾಗೂ ಮಹಿಳಾ ಪೇದೆಗಳ ಸಂಖ್ಯೆ ಎಷ್ಟು; (ಸಿವಿಲ್, ಸಿ.ಎ.ಆರ್/ಡಿ.ಎ.ಆರ್, ಕೆ.ಎಸ್.ಆರ್.ಪಿ, ಕೆ.ಐ.ಎಸ್.ಎಸ್. ಪ್ರತ್ಯೇಕವಾಗಿ ವಿವರಗಳನ್ನು ನೀಡುವುದು)

(ಆ) ಎಷ್ಟು ಸಮಯದಿಂದ ಸದರಿ ಹುದ್ದೆಗಳು ಖಾಲಿ ಇವೆ;

(ಇ) ಇವುಗಳನ್ನು ಭರ್ತಿ ಮಾಡದಿರಲು ಕಾರಣಗಳೇನು;

(ಈ) ಸದರಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಅನುಸರಿಸುತ್ತಿರುವ ಮಾನದಂಡಗಳೇನು;

(ಉ) ಯಾವ ಕಾಲಮಿತಿಯಲ್ಲಿ ಸದರಿ ಹುದ್ದೆಗಳನ್ನು ಭರ್ತಿ ಮಾಡಲಾಗುವುದು?

## ಸಣ್ಣ ನೀರಾವರಿ ಇಲಾಖಾ ಯೋಜನೆಗಳ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೪೮೭ (೫೩೮) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಸಾಲಿನಲ್ಲಿ ಚಾಮರಾಜನಗರ, ಮೈಸೂರು, ಮಂಡ್ಯ ಮತ್ತು ಹಾಸನ ಜಿಲ್ಲೆಗಳಲ್ಲಿ ಸಣ್ಣ ನೀರಾವರಿ ಇಲಾಖಾ ವತಿಯಿಂದ ಕೈಗೊಂಡಿರುವ ಹೊಸ ಯೋಜನೆಗಳಾವುವು;

(ಆ) ಸದರಿ ಯೋಜನೆಯ ರೂಪುರೇಷೆಗಳೇನು; ಅಂದಾಜು ಮೊತ್ತವೆಷ್ಟು; (ಜಿಲ್ಲಾವಾರು ಪ್ರತ್ಯೇಕವಾಗಿ ವಿವರ ನೀಡುವುದು)

(ಇ) ಪ್ರಸ್ತುತ ಸದರಿ ಯೋಜನೆಗಳು ಯಾವ ಹಂತದಲ್ಲಿವೆ ?

## ಸೌಕೂರು ಏತ ನೀರಾವರಿ ಯೋಜನೆಯನ್ನು ಅನುಷ್ಠಾನಗೊಳಿಸುವ ಬಗ್ಗೆ

**ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ (ನಾಮನಿರ್ದೇಶನ ಹೊಂದಿದವರು):–**

೪೮೮ (೬೧೮) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸೌಕೂರು ಏತ ನೀರಾವರಿ ಯೋಜನೆಯು ವಿಸ್ತೃತ ಯೋಜನಾ ವರದಿಯನ್ನು ತಯಾರಿಸಲಾಗಿದೆಯೇ; (ಹಾಗಿದ್ದಲ್ಲಿ ವರದಿಯ

ಪ್ರತಿಯನ್ನು ಒದಗಿಸುವುದು); ಈ ಯೋಜನೆಯ ಅಂದಾಜು ಮೊತ್ತವೆಷ್ಟು; ಈ ಯೋಜನೆಯು ಹೊಂದಿರುವ ಅಚ್ಚುಕಟ್ಟು ಪ್ರದೇಶದ ವಿಸ್ತೀರ್ಣವೆಷ್ಟು; ಈ ಯೋಜನೆಯು ಹಾದು ಹೋಗುವ ಗ್ರಾಮಗಳ ವಿವರವನ್ನು ಒದಗಿಸುವುದು;

(ಆ) ಖಾಸಗಿ ವಿದ್ಯುತ್ ಉತ್ಪಾದನೆಯವರಿಗೆ ಸಹಕರಿಸುವ ಉದ್ದೇಶದಿಂದ ವರಾಹಿ ಬಲದಂಡೆ ಮೂಲ ಯೋಜನೆಯಲ್ಲಿರುವ ಶಂಕರ-ನಾರಾಯಣ, ಅಂಪಾರು, ಕಾವ್ರಾಡಿ, ಹಳ್ನಾಡು ಗ್ರಾಮವನ್ನು ಕೈಬಿಟ್ಟು ಈ ಯೋಜನೆ ರೂಪಿಸಿರುವುದು ನಿಜವೇ; ಇಲ್ಲವಾದಲ್ಲಿ ಸಕಾರಣವನ್ನು ತಿಳಿಸುವುದು;

(ಇ) ವರಾಹಿ ನೀರಾವರಿ ಯೋಜನೆಯು ಪ್ರಾರಂಭವಾಗಿ ೪೦ ವರ್ಷಗಳೇ ಆದರೂ ಶಂಕರನಾರಾಯಣ, ಅಂಪಾರು, ಕಾವಾಡಿ, ಹಳ್ನಾಡು ಗ್ರಾಮಗಳ ಭೂಸ್ವಾಧೀನ ಪ್ರಕ್ರಿಯೆ ಪೂರ್ಣವಾಗದಿರಲು ಕಾರಣವೇನು; ಯೋಜನೆಗೆ ಅಗತ್ಯವಾದ ಭೂಮಿ ಎಷ್ಟು; ಪ್ರಸ್ತುತ ಭೂಸ್ವಾಧೀನ ಪಡಿಸಲಾದ ಭೂಮಿ ಎಷ್ಟು; ಭೂಸ್ವಾಧೀನ ಪ್ರಕ್ರಿಯೆಗೆ ಬಾಕಿ ಇರುವ ಭೂಮಿ ಎಷ್ಟು; (ಗ್ರಾಮವಾರು ವಿವರ ನೀಡುವುದು) ಈ ಭೂಸ್ವಾಧೀನ ಪ್ರಕ್ರಿಯೆ ಮತ್ತು ಕಾಲುವೆಯ ಕಾಮಗಾರಿಯನ್ನು ಪೂರ್ಣಗೊಳಿಸಲು ಸರಕಾರದ ಕಾಲಮಿತಿ ಯಾವುದು?

## ರಾಜ್ಯದಲ್ಲಿ ಸಣ್ಣ ಮತ್ತು ಅತಿ ಸಣ್ಣ ರೈತರ ಕೃಷಿ ನೀರಾವರಿ ಪಂಪುಸೆಟ್ಟುಗಳಿಗೆ ವಿಧಿಸಲಾಗುತ್ತಿರುವ ಅಭಿವೃದ್ಧಿ ಶುಲ್ಕದ ಬಗ್ಗೆ

**ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ (ನಾಮನಿರ್ದೇಶನ ಹೊಂದಿದವರು):-**

೪೮೯ (೬೮೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಸಣ್ಣ ಮತ್ತು ಅತಿ ಸಣ್ಣ ರೈತರ ಕೃಷಿ ನೀರಾವರಿ ಪಂಪುಸೆಟ್ಟುಗಳಿಗೆ ೧ ಎಚ್.ಪಿ. ಯಿಂದ ೧೦ ಎಚ್.ಪಿ. ತನಕ ವಿದ್ಯುತ್ ಸಂಪರ್ಕ ನೀಡುವಾಗ ವಿಧಿಸುತ್ತಿರುವ ಅಭಿವೃದ್ಧಿ ಶುಲ್ಕವೆಷ್ಟು;

(ಆ) ವಿಧಾನ ಪರಿಷತ್ತಿನ ಅರ್ಜಿ ಸಮಿತಿಯು ಅರ್ಜಿ ಸಂಖ್ಯೆ : ೮೮/೨೦೧೪ ರಲ್ಲಿ ಸಮಿತಿಯು ಸಣ್ಣ ಮತ್ತು ಅತಿ ಸಣ್ಣ ರೈತರಿಗೆ ಉಚಿತ ವಿದ್ಯುತ್ ಸಂಪರ್ಕ ಕಲ್ಪಿಸುವಂತೆ ನೀಡಲಾದ ಸೂಚನೆಯನ್ನು ಇಲಾಖೆಯಿಂದ ಜಾರಿಗೆ ತರಲಾಗಿದೆಯೇ; ಇಲ್ಲವಾದಲ್ಲಿ ಕಾರಣವೇನು;

(ಇ) ಅಭಿವೃದ್ಧಿ ಶುಲ್ಕವನ್ನು ಪಾವತಿಸಿಕೊಂಡರೂ ಸಹ ಸಾಮಗ್ರಿಗಳನ್ನು ನೀಡದೇ ವರ್ಷಾನುಗಟ್ಟಲೇ ವಿದ್ಯುತ್ ಸಂಪರ್ಕವನ್ನು ನೀಡದಿರಲು ಕಾರಣವೇನು; ಇದರಿಂದ ರೈತರ ಕೃಷಿ ಚಟುವಟಿಕೆ-ಗಳಿಗೆ ತೊಂದರೆಯಾಗಿ ಆರ್ಥಿಕ ನಷ್ಟವನ್ನು ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

## ೨೦೧೧ನೇ ಸಾಲಿನ ಜನಗಣತಿಯ ಮಾಹಿತಿಯಲ್ಲಿನ ಲೋಪದ ಬಗ್ಗೆ

**ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ (ನಾಮನಿರ್ದೇಶನ ಹೊಂದಿದವರು):-**

೪೯೦ (೬೧೩) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಪ್ರತಿ ೧೦ ವರ್ಷಕ್ಕೊಮ್ಮೆ ನಡೆಸುವ ಜನಗಣತಿಯ ಸಾಂಖ್ಯಿಕ ಮಾಹಿತಿಯನ್ನು ಯಾವ ಯಾವ ಆಧಾರದ ಮೇಲೆ

ಸಂಗ್ರಹಿಸಲಾಗುತ್ತದೆ; ಹೀಗೆ ಸಂಗ್ರಹಿಸಿದ ಮಾಹಿತಿಯನ್ನು ಯಾವ ಯಾವ ಉದ್ದೇಶಗಳಿಗೆ ಬಳಸಲಾಗುತ್ತದೆ; (ವಿವರವಾದ ಮಾಹಿತಿಯನ್ನು ಒದಗಿಸುವುದು)

(ಆ) ರಾಜ್ಯದಲ್ಲಿ ೨೦೧೧ರ ಜನಗಣತಿಯಲ್ಲಿ ಹಿಂದಿನ ೨೦೦೧ರ ಜನ ಗಣತಿಗಿಂತ ಕಡಿಮೆ ಜನಸಂಖ್ಯೆ ದಾಖಲಾದ ಗ್ರಾಮಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮಾಹಿತಿಯನ್ನು ನೀಡುವುದು)

(ಇ) ಉಡುಪಿ ಜಿಲ್ಲೆಯಲ್ಲಿ ೨೦೧೧ರ ಜನಗಣತಿಯ ಪ್ರಕಾರ ದಾಖಲಾದ ಜನಸಂಖ್ಯೆ ಎಷ್ಟು; (ಗ್ರಾಮವಾರು, ಬ್ಲಾಕ್ವಾರು, ಗಣತಿದಾರರ ಪಟ್ಟಿವಾರು ಮಾಹಿತಿಯನ್ನು ನೀಡುವುದು)

(ಈ) ಅವುಗಳಲ್ಲಿ ೨೦೧೧ರ ಜನಗಣತಿಯಲ್ಲಿ ಹಿಂದಿನ ೨೦೦೧ರ ಜನಗಣತಿಗಿಂತ ಕಡಿಮೆ ಜನಸಂಖ್ಯೆ ದಾಖಲಾದ ಉಡುಪಿ ಜಿಲ್ಲೆಯ ಗ್ರಾಮಗಳ ಸಂಖ್ಯೆ ಎಷ್ಟು ಮತ್ತು ಅವು ಯಾವುವು; (ತಾಲ್ಲೂಕುವಾರು ಗ್ರಾಮವಾರು ಮಾಹಿತಿ ನೀಡುವುದು)

(ಉ) ಈ ರೀತಿ ಗ್ರಾಮದಲ್ಲಿ ಕಡಿಮೆ ಜನಸಂಖ್ಯೆ ದಾಖಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇದಕ್ಕೆ ಕಾರಣವನ್ನು ಕಂಡು ಹಿಡಿಯಲು ಸರ್ಕಾರದಿಂದ ಕ್ರಮವಹಿಸಲಾಗಿದೆಯೇ; ಕೆಲವು ತಾಲ್ಲೂಕು ಮಟ್ಟದ ಅಧಿಕಾರಿಗಳು ಮೂಲಗಣತಿದಾರರು ನೀಡಿದ ಜನಸಂಖ್ಯಾ ಮಾಹಿತಿಯನ್ನು ತಿರುಚಿ ಸಾಂಖ್ಯಿಕ ಮಾಹಿತಿಯನ್ನು ಸರ್ಕಾರಕ್ಕೆ ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇಲ್ಲವಾದಲ್ಲಿ ಪರಿಶೀಲನೆ ನಡೆಸಲಾಗುವುದೇ; ದುರುದ್ದೇಶ ಪೂರ್ವಕವಾಗಿ ತಪ್ಪು ಮಾಹಿತಿ ನೀಡಿದ ಅಧಿಕಾರಿಗಳ ವಿರುದ್ಧ ಕ್ರಮವಹಿಸಲಾಗಿದೆಯೇ?

## ವರಾಹಿ, ಎಡದಂಡೆ, ಏತನೀರಾವರಿ ಯೋಜನೆಯ ಅನುಷ್ಠಾನದ ವಿಳಂಬ

**ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ (ನಾಮನಿರ್ದೇಶನ ಹೊಂದಿದವರು) :–**

೪೯೧ (೫೫೫) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಾರಾಹಿ ಎಡದಂಡೆ ಯೋಜನೆಗೆ ತಗಲುವ ಯೋಜಿತ ಅಂದಾಜು ಮೊತ್ತವೆಷ್ಟು; ಈವರೆಗೂ ಬಿಡುಗಡೆಯಾದ ಅನುದಾನವೆಷ್ಟು; ವೆಚ್ಚ ಮಾಡಲಾದ ಮೊತ್ತವೆಷ್ಟು ; ಬಿಡುಗಡೆಗೆ ಬಾಕಿಯಿರುವ ಅನುದಾನವೆಷ್ಟು ;

(ಆ) ಈ ಯೋಜನೆಯು ಹಾದು ಹೋಗುವ ಗ್ರಾಮಗಳು ಯಾವುವು; ಈ ಯೋಜನೆಯು ಹೊಂದಿರುವ ಅಚ್ಚುಕಟ್ಟು ಪ್ರದೇಶದ ವಿಸ್ತೀರ್ಣವೆಷ್ಟು; ಪೂರ್ಣಗೊಂಡ ಅಚ್ಚುಕಟ್ಟು ಪ್ರದೇಶದ ವಿಸ್ತೀರ್ಣವೆಷ್ಟು; ಬಾಕಿಯಿರುವ ಅಚ್ಚುಕಟ್ಟು ಪ್ರದೇಶದ ವಿಸ್ತೀರ್ಣವೆಷ್ಟು;

(ಇ) ಈ ಯೋಜನೆಗೆ ಭೂಸ್ವಾಧೀನ ಪಡಿಸಿಕೊಂಡ ಮತ್ತು ಭೂಸ್ವಾಧೀನ ಪ್ರಕ್ರಿಯೆಗೆ ಬಾಕಿಯಿರುವ ಭೂಮಿ ಎಷ್ಟು; ವಾರಾಹಿ ಎಡದಂಡೆ ಕಾಲುವೆಯ ಕಾಮಗಾರಿಯನ್ನು ಪೂರ್ಣಗೊಳಿಸಲು ಇಲಾಖೆಯಿಂದ ಯೋಜಿಸಲಾದ ಕಾಲಮಿತಿ ಯಾವುದು;

(ಈ) ಏತ ನೀರಾವರಿ ಯೋಜನೆಗೆ ತಗಲುವ ಯೋಜಿತ ಅಂದಾಜು ಮೊತ್ತವೆಷ್ಟು; ಈವರೆಗೂ ಬಿಡುಗಡೆಯಾದ ಅನುದಾನವೆಷ್ಟು; ವೆಚ್ಚ ಮಾಡಲಾದ ಮೊತ್ತವೆಷ್ಟು; ಬಿಡುಗಡೆಗೆ ಬಾಕಿಯಿರುವ ಅನುದಾನವೆಷ್ಟು; ಈ ಯೋಜನೆಯು ಹಾದುಹೋಗುವ ಗ್ರಾಮಗಳು ಯಾವುವು;

58

(ಉ) ಈ ಯೋಜನೆಯು ಹೊಂದಿರುವ ಅಚ್ಚುಕಟ್ಟು ಪ್ರದೇಶದ ವಿಸ್ತೀರ್ಣವೆಷ್ಟು; ಪೂರ್ಣಗೊಂಡ ಅಚ್ಚುಕಟ್ಟು ಪ್ರದೇಶದ ವಿಸ್ತೀರ್ಣವೆಷ್ಟು; ಬಾಕಿಯಿರುವ ಅಚ್ಚುಕಟ್ಟು ಪ್ರದೇಶದ ವಿಸ್ತೀರ್ಣವೆಷ್ಟು;

(ಊ) ಯೋಜನೆಗೆ ಭೂಸ್ವಾಧೀನ ಪಡಿಸಿಕೊಂಡ ಮತ್ತು ಭೂಸ್ವಾಧೀನ ಪ್ರಕ್ರಿಯೆಗೆ ಬಾಕಿಯಿರುವ ಭೂಮಿ ಎಷ್ಟು;

(ಋ) ವಾರಾಹಿ ಏತ ನೀರಾವರಿ ಕಾಮಗಾರಿಯನ್ನು ಪೂರ್ಣಗೊಳಿಸಲು ಇಲಾಖೆಯಿಂದ ಯೋಜಿಸಲಾದ ಕಾಲಮಿತಿ ಯಾವುದು?

## ಕರ್ನಾಟಕ ಶಾಸಕರ ಪ್ರದೇಶಾಭಿವೃದ್ಧಿ ಯೋಜನೆಯ ಅನುಷ್ಠಾನದಲ್ಲಿ ಆಗುತ್ತಿರುವ ವಿಳಂಬದ ಬಗ್ಗೆ

**ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ (ನಾಮನಿರ್ದೇಶನ ಹೊಂದಿದವರು) :–**

೪೯೨ (೬೪೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಲ್ಲಿ ಕರ್ನಾಟಕ ಶಾಸಕರ ಪ್ರದೇಶಾಭಿವೃದ್ಧಿ ಯೋಜನೆಯಲ್ಲಿ ಬಿಡುಗಡೆಯಾದ ಅನುದಾನವೆಷ್ಟು; ವೆಚ್ಚವಾದ ಅನುದಾನವೆಷ್ಟು; ಉಳಿಕೆಯಾದ ಅನುದಾನವೆಷ್ಟು; ಬಿಡುಗಡೆಗೆ ಬಾಕಿಯಿರುವ ಅನುದಾನವೆಷ್ಟು; (ಜಿಲ್ಲಾವಾರು ಕ್ಷೇತ್ರವಾರು ವರ್ಷವಾರು ವಿವರ ನೀಡುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ಶಾಸಕರಿಂದ ಸ್ವೀಕರಿಸಿದ ಪ್ರಸ್ತಾವನೆಗಳ ಸಂಖ್ಯೆ ಎಷ್ಟು; ಅವುಗಳಲ್ಲಿ ಪೂರ್ಣಗೊಂಡ ಕಾಮಗಾರಿಗಳ ಸಂಖ್ಯೆ ಎಷ್ಟು; ಬಾಕಿಯಿರುವ ಕಾಮಗಾರಿಗಳ ಸಂಖ್ಯೆ ಎಷ್ಟು; (ಶಾಸಕರ ಜಿಲ್ಲಾವಾರು, ಕ್ಷೇತ್ರವಾರು, ವರ್ಷವಾರು ವಿವರ ನೀಡುವುದು)

(ಇ) ಶಾಸಕರಿಂದ ಪ್ರಸ್ತಾವನೆಯನ್ನು ಸ್ವೀಕರಿಸಿದ ನಂತರ ಜಿಲ್ಲಾಧಿಕಾರಿಗಳು ಮತ್ತು ಅನುಷ್ಠಾನಾಧಿಕಾರಿಗಳ ಹಂತದಲ್ಲಿ ಆಗುತ್ತಿರುವ ವಿಳಂಬವನ್ನು ಸರಿಪಡಿಸಲು ಹಿಂದಿನಂತೆ ಕ್ರಮ ವಹಿಸಲಾಗುವುದೇ; ಇಲ್ಲವಾದಲ್ಲಿ ಬದಲಿ ವ್ಯವಸ್ಥೆ ಕಲ್ಪಿಸಲಾಗುವುದೇ; (ವಿವರ ಒದಗಿಸುವುದು)

(ಈ) ಕಳೆದ ಮೂರು ವರ್ಷಗಳಲ್ಲಿ ಶಾಸಕರ ಪ್ರದೇಶಾಭಿವೃದ್ಧಿ ಯೋಜನೆಯ ಅನುಷ್ಠಾನದ ಕುರಿತು ಶಾಸಕರು, ಜಿಲ್ಲಾಧಿಕಾರಿಗಳು ಮತ್ತು ಅನುಷ್ಠಾನಾಧಿಕಾರಿಗಳ ಪ್ರಗತಿ ಪರಿಶೀಲನಾ ಸಭೆ ನಡೆಸಲಾಗಿದೆಯೇ; ಇಲ್ಲವಾದಲ್ಲಿ ಕಾರಣವೇನು? (ದಿನಾಂಕವಾರು ವಿವರ ನೀಡುವುದು)

## ಕರ್ತವ್ಯ ನಿರತ ಕೊರೋನಾ ವಾರಿಯರ್ಸ್‌ಗಳ ಮರಣದ ಪರಿಹಾರದ ಬಗ್ಗೆ

**ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೯೩ (೬೨೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯಾದ್ಯಂತ ಕೊರೋನಾ ಸೇವೆಗೆ ನಿಯೋಜನೆಗೊಂಡಿರುವ ಕೊರೋನಾ ವಾರಿಯರ್ಸ್‌ಗಳು ಕೋವಿಡ್ ಸೋಂಕಿಗೆ ಒಳಗಾಗಿ ಮರಣವನ್ನು ಹೊಂದಿದ ಸಂದರ್ಭದಲ್ಲಿ ಸರ್ಕಾರದಿಂದ ಪರಿಹಾರವನ್ನು ಘೋಷಿಸಲಾಗಿದೆಯೇ;

(ಆ) ಕೊರೋನಾ ವಾರಿಯರ್ಸ್‌ಗಳು ಸದರಿ ಸೌಲಭ್ಯವನ್ನು ಪಡೆಯಲು ಹೊಂದಿರಬೇಕಾದ ಮಾನದಂಡಗಳೇನು;

(ಇ) ಯಾವ ಯಾವ ಇಲಾಖೆಯ ಕೊರೋನಾ ವಾರಿಯರ್ಸ್‌ಗಳಿಗೆ ಈ ಸೌಲಭ್ಯ ಅನ್ವಯವಾಗುತ್ತದೆ;

(ಈ) ಇಲ್ಲಿಯವರೆಗೆ ರಾಜ್ಯಾದ್ಯಂತ ಎಷ್ಟು ಕೊರೋನಾ ವಾರಿಯರ್ಸ್, ಕೊರೋನಾದಿಂದ ಮರಣವನ್ನು ಹೊಂದಿದ್ದಾರೆ; ಹಾಗೂ ಸರ್ಕಾರದಿಂದ ನೀಡಲಾದ ಪರಿಹಾರವೆಷ್ಟು? (ಜಿಲ್ಲಾವಾರು ಮಾಹಿತಿ ಒದಗಿಸುವುದು)

## ಕಳೆದ ೦೧ ವರ್ಷದಿಂದ ರಾಜ್ಯದಲ್ಲಿ ಹೊರಗುತ್ತಿಗೆಯಿಂದ ನೇಮಕ ಮಾಡಿರುವ ನೌಕರರ ವಿವರ

**ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೯೪ (೬೨೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೦೧ ವರ್ಷದಿಂದ ರಾಜ್ಯದ ವಿವಿಧ ಇಲಾಖೆಗಳಲ್ಲಿ ಹೊರಗುತ್ತಿಗೆ ಹಾಗೂ ಒಳಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿದ್ದ ಒಟ್ಟು ನೌಕರರು ಎಷ್ಟು; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ಏಪ್ರಿಲ್–೨೦೨೦ರಿಂದ ಪ್ರಸ್ತುತ ದಿನದವರೆಗೆ ಉದ್ಯೋಗವನ್ನು ಕಳೆದುಕೊಂಡಿರುವ ಅಥವಾ ಕೆಲಸದಿಂದ ತೆಗೆದು ಹಾಕಲಾಗಿರುವ ಒಟ್ಟು ಹೊರಗುತ್ತಿಗೆ ಹಾಗೂ ಒಳಗುತ್ತಿಗೆ ನೌಕರರ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಇ) ಕೆಲಸವನ್ನು ಕಳೆದುಕೊಂಡಿರುವ ಹೊರಗುತ್ತಿಗೆ ಹಾಗೂ ಒಳಗುತ್ತಿಗೆ ನೌಕರರ ಮುಂದಿನ ಭವಿಷ್ಯಕ್ಕಾಗಿ ಸರ್ಕಾರ ಕೈಗೊಂಡ ನಿರ್ಧಾರಗಳೇನು?

## ೨೦೧೯ ಹಾಗೂ ೨೦೨೦ರಲ್ಲಿ ಕೇಂದ್ರದಿಂದ ರಾಜ್ಯಕ್ಕೆ ನೆರೆಹಾವಳಿಗೆ ಬಂದಿರುವ NDRF ನ ಅನುದಾನದ ಬಗ್ಗೆ

**ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೯೫ (೬೨೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೯ ಹಾಗೂ ೨೦೨೦ನೇ ಸಾಲಿನಲ್ಲಿ ರಾಜ್ಯದಲ್ಲಿ ಉಂಟಾದ ಭೀಕರ ನೆರೆಹಾವಳಿಗೆ ಕೇಂದ್ರದ ಎನ್.ಡಿ.ಆರ್.ಎಫ್ ದಿಂದ ಬಂದ ಅನುದಾನವೆಷ್ಟು;

(ಆ) ರಾಜ್ಯದಲ್ಲಿ ಉಂಟಾಗಿರುವ ವ್ಯಾಪಕ ಕೊರೋನಾ ಹಾವಳಿ ತಡೆಗಟ್ಟುವ ನಿಟ್ಟಿನಲ್ಲಿ ರಾಜ್ಯಕ್ಕೆ ಕೇಂದ್ರದಿಂದ ಬಂದ ಅನುದಾನವೆಷ್ಟು?

## ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಅನುದಾನವನ್ನು ‘CM Covid-19 Relief Fund ಗೆ ನೀಡುವ ಬಗ್ಗೆ

**ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೯೬ (೬೨೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯ ಪರಿಷ್ಕೃತ ಮಾರ್ಗಸೂಚಿ–೨೦೧೪ ರ ಕಂಡಿಕೆ – ೨.೧೩ ರಲ್ಲಿ

ಪ್ರಕೃತಿ ವಿಪತ್ತು ಮತ್ತು ವಿಕೋಪದಡಿಯಲ್ಲಿ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯ ಅನುದಾನವನ್ನು ಬಳಕೆ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆಯೇ;

(ಆ) ಕರೋನಾ ವೈರಸ್ (ಕೋವಿಡ್-೧೯)ನ್ನು ನಿಯಂತ್ರಿಸಲು ಕರ್ನಾಟಕ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿಯ ನಿಧಿಯನ್ನು ೨೦೨೦-೨೧ನೇ ಸಾಲಿನಲ್ಲಿ ಮಾತ್ರ ಬಳಕೆ ಮಾಡಲು ಅನುಮತಿಸಲಾಗಿದಯೇ;

(ಇ) ಶಾಸಕರುಗಳು ಇಚ್ಛಿಸಿದಲ್ಲಿ ಸದರಿ ನಿಧಿಯನ್ನು ಮಾನ್ಯ ಮುಖ್ಯಮಂತ್ರಿಯವರ 'CM Covid-19 Relief Fund' ಗೆ ದೇಣಿಗೆ ನೀಡಲು ಅನುಮತಿಸಲಾಗಿದೆಯೇ;

(ಈ) ಸದರಿ ಆದೇಶದನ್ವಯ ರಾಜ್ಯಾದ್ಯಂತ ಒಟ್ಟು ಎಷ್ಟು ಶಾಸಕರು (ವಿಧಾನಸಭೆ/ವಿಧಾನಪರಿಷತ್) ಅನುದಾನವನ್ನು ಬಳಸಿಕೊಳ್ಳಲು ಆಯಾ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ ಪ್ರಸ್ತಾವನೆ ಸಲ್ಲಿಸಿದ್ದಾರೆ; ಎಷ್ಟು ಜನ ಶಾಸಕರ ಪ್ರಸ್ತಾವನೆಯನ್ನು ಜಿಲ್ಲಾಧಿಕಾರಿಗಳು ಅನುಷ್ಠಾನಗೊಳಿಸಿ ಅನುದಾನವನ್ನು ಬಿಡುಗಡೆಗೊಳಿಸಿದ್ದಾರೆ?

## ೨೦೧೮-೧೯, ೨೦೧೯-೨೦ನೇ ಸಾಲಿನಲ್ಲಿ ಕೇಂದ್ರದಿಂದ ರಾಜ್ಯಕ್ಕೆ ಬರಬೇಕಾಗಿರುವ GST ಪಾಲಿನ ಅನುದಾನದ ಬಗ್ಗೆ

**ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೯೭ (೬೨೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಸನ್ ೨೦೧೮–೧೯, ೨೦೧೯–೨೦ನೇ ಸಾಲಿನಲ್ಲಿ ಕೇಂದ್ರದಿಂದ ರಾಜ್ಯ ಸರ್ಕಾರಕ್ಕೆ ಬರಬೇಕಾಗಿರುವ ಜಿ.ಎಸ್.ಟಿ.ಪಾಲಿನ ಅನುದಾನವೆಷ್ಟು;

(ಆ) ಸನ್ ೨೦೧೮–೧೯, ೨೦೧೯–೨೦ನೇ ಸಾಲಿನಲ್ಲಿ ಕೇಂದ್ರದಿಂದ ರಾಜ್ಯ ಸರ್ಕಾರಕ್ಕೆ ಬರಬೇಕಾಗಿರುವ ಜಿ.ಎಸ್.ಟಿ ಪಾಲಿನ ಅನುದಾನ ತರುವಲ್ಲಿ ಸರ್ಕಾರ ತೆಗೆದುಕೊಂಡ ಕ್ರಮಗಳು ಹಾಗೂ ಪ್ರಯತ್ನಗಳೇನು;

(ಇ) ೨೦೧೮–೧೯, ೨೦೧೯–೨೦ನೇ ಸಾಲಿನಲ್ಲಿ ಬಾಕಿ ಉಳಿದಿರುವ ಜಿ.ಎಸ್.ಟಿ., ಪಾಲಿನ ಅನುದಾನವನ್ನು ರಾಜ್ಯಕ್ಕೆ ತರಲು ಬೇಕಾಗುವ ಕಾಲಾವಕಾಶವೆಷ್ಟು?

## ಎಂ.ಎಸ್.ಐ.ಎಲ್ ಅಂಗಡಿಗಳ ಬಗ್ಗೆ

**ಡಾ ॥ ಸಿ.ಆರ್.ಮನೋಹರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೯೮ (೪೯೯) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಯ ಎಂ.ಎಸ್.ಐ.ಎಲ್ ಹೊರತುಪಡಿಸಿ ಉಳಿಕೆ ಎಷ್ಟು ಅಂಗಡಿಗಳಿಗೆ ಲೈಸೆನ್ಸ್ ನೀಡಲಾಗಿದೆ;

(ಆ) ಇವುಗಳಿಂದ ರಾಜ್ಯದ ಬೊಕ್ಕಸಕ್ಕೆ ಎಷ್ಟು ಆದಾಯ ಬರುತ್ತಿದೆ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಎಷ್ಟು ಎಂ.ಎಸ್.ಐ.ಎಲ್. ಅಂಗಡಿಗಳಿಗೆ ಲೈಸೆನ್ಸ್ ನೀಡಲಾಗಿದೆ? (ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

## ಪೊಲೀಸ್ ಇಲಾಖೆಯ ಸಿಬ್ಬಂದಿಗಳ ಬಗ್ಗೆ

**ಡಾ ॥ ಸಿ.ಆರ್. ಮನೋಹರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೯೯ (೪೯೮) ಮಾನ್ಯ ಗೃಹ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

ಪೊಲೀಸ್ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿ ಮತ್ತು ಸಿಬ್ಬಂದಿಗಳು ಯಾವ ಯಾವ ಇಲಾಖೆಯಲ್ಲಿ ವರ್ಗಾವಣೆ/ ನಿಯೋಜನೆ ಮೇರೆಗೆ ಕರ್ತವ್ಯ ನಿರ್ವಹಿಸುತ್ತಿದ್ದಾರೆ ? (ಅವರುಗಳ ಹೆಸರು ಮತ್ತು ಹುದ್ದೆಯೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು.)

## ಅಗ್ನಿಶಾಮಕ ತುರ್ತು ಸೇವೆಗಳ ಕುರಿತು

**ಡಾ ॥ ಸಿ.ಆರ್. ಮನೋಹರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೦೦ (೪೮೩) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅಗ್ನಿಶಾಮಕ ತುರ್ತು ಸೇವೆಗಳಲ್ಲಿ ಖಾಲಿಯಿರುವ ಹುದ್ದೆಗಳೆಷ್ಟು;

(ಆ) ಹೊಸದಾಗಿ ಹುದ್ದೆಗಳನ್ನು ಭರ್ತಿ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

(ಇ) ಹಾಗಿದ್ದಲ್ಲಿ, ಯಾವಾಗ ಭರ್ತಿ ಮಾಡಲಾಗುವುದು;

(ಈ) ಪ್ರಸಕ್ತ ಅಗ್ನಿಶಾಮಕ ತುರ್ತು ಸೇವೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿ ಮತ್ತು ಸಿಬ್ಬಂದಿಗಳ ವರ್ಗಾವಣೆಯಲ್ಲಿ ವಿಳಂಬವಾಗು–ತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಯಾವಾಗ ವರ್ಗಾವಣೆ ಮಾಡಲಾಗುವುದು ?

# ಪ್ರಾಧಿಕಾರದ ಸ್ವತ್ತುಗಳನ್ನು ರಕ್ಷಿಸುವ ಬಗ್ಗೆ

**ಶ್ರೀ ನಸೀರ್ ಅಹ್ಮದ್ (ವಿಧಾನಸಭೆಯಿಂದ ಚುನಾಯಿತರಾದವರು):–**

೫೦೧ (೬೫೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ನೌಕರರ ಕ್ಷೇಮಾಭೀವೃದ್ಧಿ ಸಂಘಕ್ಕೆ ಪ್ರಾಧಿಕಾರದಿಂದ ಬಿಡುಗಡೆಯಾಗಿರುವ ಜಮೀನು ಎಷ್ಟು; (ಸ್ಥಳ, ಸರ್ವೆ ನಂಬರ್ ಮತ್ತು ಸರ್ವೆ ನಂಬರ್ ವಿಸ್ತೀರ್ಣವಾರು ವಿವರ ನೀಡುವುದು)

(ಆ) ದೊಡ್ಡಕಲ್ಲಸಂದ್ರದ ಸ.ನಂ. ೧೯ ಮತ್ತು ಲಿಂಗಧೀರನ ಹಳ್ಳಿಯ ಸ.ನಂ. ೧/೪(ಪಿ), ೭/೫(ಪಿ), ೭/೬(ಪಿ), ೭/೮(ಪಿ) ಮತ್ತು ೭/೯(ಪಿ) ಗಳಲ್ಲಿ ಜಮೀನುಗಳನ್ನು ಅಕ್ರಮವಾಗಿ ಅನುಮೋದಿತ ನಕ್ಷೆಯಲ್ಲಿ ಸೇರಿಸಿರುವುದು ನಿಜವೆ; ಇಲ್ಲದಿದ್ದಲ್ಲಿ, ಸದರಿ ಸರ್ವೆ ನಂಬರ್‌ವಾರು ಜಮೀನಿನ ವಿಸ್ತೀರ್ಣದ ವಿವರ ಮತ್ತು ಕ್ರಯಪತ್ರಗಳನ್ನು ನೀಡುವುದು; ಅಕ್ರಮವಾಗಿ ಸೇರಿಸಿದ್ದಲ್ಲಿ, ಈ ಅಕ್ರಮಕ್ಕೆ ಕಾರಣವಾದ ಅಧಿಕಾರ/ನೌಕರರ ಹೆಸರು ಮತ್ತು ಅವರುಗಳ ವಿರುದ್ಧ ಕೈಗೊಂಡ ಕ್ರಮಗಳೇನು ಹಾಗೂ ಈ ಜಮೀನುಗಳನ್ನು ಸ್ವಾಧೀನ ಪಡಿಸಿಕೊಳ್ಳಲು ಪ್ರಾಧಿಕಾರ ಕೈಗೊಳ್ಳುವ ಕ್ರಮಗಳೇನು;

(ಇ) ಲಿಂಗಧೀರನಹಳ್ಳಿ ಬಡಾವಣೆಯಲ್ಲಿ ರಚಿತವಾದ ಒಂದು ಎಕರೆ ವಿಸ್ತೀರ್ಣದ ಸಿ.ಎ. ನಿವೇಶನ ಅಕ್ರಮವಾಗಿ ಮಾರಾಟವಾಗಿದ್ದು ನಿಜವೆ; ಇದ್ದಲ್ಲಿ ಈ ಅಕ್ರಮಕ್ಕೆ ಕಾರಣರಾದವರ ವಿರುದ್ಧ ಕೈಗೊಂಡಿರುವ ಕ್ರಮಗಳೇನು; ವಿವರ ನೀಡುವುದು ಹಾಗೂ ಪ್ರಸ್ತುತ ಪ್ರಾಧಿಕಾರವು ಸಿ.ಎ. ನಿವೇಶನವನ್ನು ವಶಪಡಿಸಿಕೊಂಡಿದೆಯೇ;

(ಈ) ಸಂಘದಿಂದ ನಿವೇಶನ ಸಿಗದೇ ವಂಚನೆಗೊಳಗಾಗಿರುವ ಪ್ರಾಧಿಕಾರದ ನಿವೃತ್ತ ನೌಕರರಿಗೆ ನಿವೇಶನಗಳನ್ನು ಒದಗಿಸಿಕೊಡುವ ದಿಸೆಯಲ್ಲಿ ಜರುಗಿರುವ ಕ್ರಮಗಳೇನು ?

## ರಾಜ್ಯದಲ್ಲಿ ೨೦೧೯–೨೦ನೇ ಸಾಲಿನಲ್ಲಿ ಎಷ್ಟು ವಿದ್ಯುತ್‌ನ್ನು ಉತ್ಪಾದನೆ ಬಗ್ಗೆ

**ಶ್ರೀ ನಸೀರ್ ಅಹ್ಮದ್ (ವಿಧಾನಸಭೆಯಿಂದ ಚುನಾಯಿತರಾದವರು):–**

೫೦೨ (೬೪೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ೨೦೧೯–೨೦ನೇ ಸಾಲಿನಲ್ಲಿ ಎಷ್ಟು ವಿದ್ಯುತ್‌ನ್ನು ಉತ್ಪಾದನೆ ಮಾಡಲಾಗಿದೆ;

(ಆ) ಇದರಲ್ಲಿ ರೈತರಿಗೆ, ಕೈಗಾರಿಕೆಗಳಿಗೆ ಮತ್ತು ವ್ಯಾಪಾರಸ್ಥರಿಗೆ ನೀಡಿರುವ ವಿದ್ಯುತ್ ಎಷ್ಟು;

(ಇ) ರೈತರಿಗೆ ಸಮರ್ಪಕವಾದ ವಿದ್ಯುತ್ ನೀಡದೆ ಬೆಳೆ ನಷ್ಟವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ನಷ್ಟ ಹೊಂದಿದ ರೈತರಿಗೆ ಸರ್ಕಾರ ಯಾವ ರೀತಿಯ ಪರಿಹಾರವನ್ನು ಘೋಷಣೆ ಮಾಡಿದೆ;

(ಉ) ಈ ಕುಟುಂಬಗಳ ರಕ್ಷಣೆಗೆ ಸರ್ಕಾರ ಮುಂದಾಗುವುದೇ ?

## ಬೆಳಗಾವಿಯ ಸುವರ್ಣ ಸೌಧ ಕಟ್ಟಡದ ಇಲಾಖೆಯನ್ನು ಸ್ಥಳಾಂತರಿಸುವ ಬಗ್ಗೆ

**ಶ್ರೀ ನಸೀರ್ ಅಹ್ಮದ್ (ವಿಧಾನಸಭೆಯಿಂದ ಚುನಾಯಿತರಾದವರು):–**

೫೦೩ (೬೩೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉತ್ತರ ಕರ್ನಾಟಕದ ಅಭಿವೃದ್ಧಿಯ ಹಿತದೃಷ್ಟಿಯಿಂದ ಬೆಳಗಾವಿಯಲ್ಲಿ ನಿರ್ಮಿಸಿದ ಸುವರ್ಣ ಸೌಧದ ಕಟ್ಟಡಕ್ಕೆ ಕೆಲವೊಂದು ಇಲಾಖೆಗಳನ್ನು (ನೀರಾವರಿ, ಸಕ್ಕರೆ, ಶಿಕ್ಷಣ, ಉದ್ಯಮ ಹಾಗೂ ಸಮಾಜ ಕಲ್ಯಾಣ) ಮಂತ್ರಿಯಾದಿಯಾಗಿ ಸಂಪೂರ್ಣ ಸ್ಥಳಾಂತರ ಮಾಡುವ ವಿಚಾರ ಸರ್ಕಾರದ ಗಮನದಲ್ಲಿದೆಯೇ;

(ಆ) ಹಾಗಿದ್ದಲ್ಲಿ, ಇಲ್ಲಿಯವರೆಗೆ ಯಾವ ಯಾವ ಇಲಾಖೆಗಳನ್ನು ಸ್ಥಳಾಂತರ ಮಾಡಲಾಗಿದೆ;

(ಇ) ಉತ್ತರ ಕರ್ನಾಟಕ ಅಭಿವೃದ್ಧಿ ಹಿತದೃಷ್ಟಿಯಿಂದ ಅಲ್ಲಿಯ ಜನ ಸಾಮಾನ್ಯರಿಗೆ ಕಛೇರಿ ಕೆಲಸಕ್ಕೆ ಅನುಕೂಲವಾಗುವ ಸಲುವಾಗಿ ಹಾಗೂ ಸುವರ್ಣ ಸೌಧದ ಕಟ್ಟಡದ ಸದುಪಯೋಗ ಪಡೆಯಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ರಾಜ್ಯದಲ್ಲಿರುವ ಅಣೆಕಟ್ಟುಗಳ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ):–**

೫೦೪ (೪೮೫) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಅಣೆಕಟ್ಟುಗಳ ಸಂಖ್ಯೆ ಎಷ್ಟು; ಅವುಗಳಲ್ಲಿ ವಿದ್ಯುತ್ ಯೋಜನೆಗೆ ಎಷ್ಟು ಬಳಕೆಯಾಗುತ್ತಿವೆ;

(ಆ) ಎಷ್ಟು ಎಕರೆ ಪ್ರದೇಶಕ್ಕೆ ನೀರಾವರಿ ಸೌಲಭ್ಯ ಒದಗಿಸಲು ಸದರಿ ಅಣೆಕಟ್ಟುಗಳಿಂದ ಅನುಕೂಲವಾಗಿದೆ; (ವಿವರ ನೀಡುವುದು)

(ಇ) ಸದರಿ ಅಣೆಕಟ್ಟುಗಳಲ್ಲಿ ಕುಡಿಯುವ ನೀರಿಗಾಗಿ ಮತ್ತು ನೀರಾವರಿಗೆ ಬಳಕೆಯಾಗುತ್ತಿರುವ ಪ್ರಮಾಣವೆಷ್ಟು ? (ಅಣೆಕಟ್ಟುವಾರು ವಿವರ ನೀಡುವುದು)

## ಎತ್ತಿನಹೊಳೆ ಯೋಜನೆ ಪ್ರಗತಿ ಕುರಿತು

**ಡಾ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೫೦೫ (೬೬೦) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಎತ್ತಿನಹೊಳೆ ಯೋಜನೆ ಪ್ರಾರಂಭವಾದಾಗಿನಿಂದ ಈವರೆಗೆ ಎಷ್ಟು ಕೆರೆಗಳಿಗೆ ನೀರನ್ನು ತುಂಬಿಸಲಾಗಿದೆ;

(ಆ) ಬಾಕಿ ಕೆರೆಗಳನ್ನು ಯಾವ ಕಾಲಮಿತಿಯೊಳಗೆ ತುಂಬಿಸಲಾಗುವುದು; (ಜಿಲ್ಲಾವಾರು ಪ್ರತ್ಯೇಕವಾಗಿ ಮಾಹಿತಿ ನೀಡುವುದು)

(ಇ) ಎತ್ತಿನಹೊಳೆ ಯೋಜನೆಯು ಪ್ರಗತಿಯು ಕುಂಟುತ್ತಾ ಸಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇದಕ್ಕೆ ಕಾರಣಗಳೇನು;

(ಈ) ಈ ಯೋಜನೆಗೆ ವೇಗವನ್ನು ನೀಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಸಿ.ಎಲ್–೭ ಸನ್ನದ್ದುಗಳ ಸ್ಥಳಾಂತರ ಕುರಿತು

**ಡಾ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೫೦೬ (೬೫೮) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಿ.ಎಲ್–೭ ಸನ್ನದ್ದುಗಳ ಅನುಮತಿ ಹಾಗೂ ಸ್ಥಳಾಂತರಕ್ಕೆ ಅನುಮತಿ ನೀಡುತ್ತಿರುವುದರಲ್ಲಿ ವ್ಯಾಪಕವಾಗಿ ಭ್ರಷ್ಟಚಾರ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಭ್ರಷ್ಟಾಚಾರದಲ್ಲಿ ಭಾಗಿಯಾಗಿರುವ ಅಧಿಕಾರಿಗಳ ವಿವರ ನೀಡುವುದು ?

## ಸರ್ಕಾರಿ ಸ್ವಾಮ್ಯದ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುವ ನ್ಯಾಯವಾದಿಗಳ ಬಗ್ಗೆ

**ಡಾ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೫೦೭ (೬೫೯) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಿ.ಡಿ.ಎ., ಕೆ.ಐ.ಎ.ಡಿ.ಬಿ. ಮತ್ತು ಬೃ.ಬೆಂ.ಮ.ಪಾ (ಬಿ.ಬಿ.ಎಂ.ಪಿ) ಈ ಸಂಸ್ಥೆಗಳ ಪ್ಯಾನಲ್‌ಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನ್ಯಾಯವಾದಿಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ಕಳೆದ ೧೫ ವರ್ಷಗಳಲ್ಲಿ ಕಾರ್ಯನಿರ್ವಹಿಸಿರುವ ನ್ಯಾಯವಾದಿಗಳ ಹೆಸರುಗಳನ್ನು ನೀಡುವುದು;

(ಇ) ಮೇಲ್ಕಂಡ ಸಂಸ್ಥೆಗಳಲ್ಲಿ ಕಳೆದ ೧೫ ವರ್ಷಗಳಿಂದ ಸರ್ಕಾರದ ಪರ ಮತ್ತು ವಿರುದ್ಧ ಬಂದಿರುವ ತೀರ್ಪುಗಳ ಸಂಖ್ಯೆ ಎಷ್ಟು;

(ಈ) ಈ ಧಾವೆಗಳ ಪರ ವಾದಿಸಲು ನ್ಯಾಯವಾದಿಗಳಿಗೆ ಸರ್ಕಾರದಿಂದ ಪಾವತಿಸಲಾದ ಮೊತ್ತ ಎಷ್ಟು; (ವಿವರಗಳನ್ನು ನೀಡುವುದು)

(ಉ) ಸರ್ಕಾರವು ನೇಮಿಸುವ ವಿವಿಧ ನಿಗಮ/ಮಂಡಳಿಗಳಲ್ಲಿ ಇಂತಹ ನ್ಯಾಯವಾದಿಗಳನ್ನು ನೇಮಿಸುವಾಗ ಸಾರ್ವಜನಿಕ ಆಸ್ತಿಯ ರಕ್ಷಣೆ ಹಿತದೃಷ್ಟಿಯಿಂದ ಹೊಸ ಮಾನದಂಡಗಳನ್ನು ರೂಪಿಸಲು ಸರ್ಕಾರವು ಯೋಚಿಸಿದೆಯೇ ? (ಮಾಹಿತಿ ನೀಡುವುದು)

## ರಾಜ್ಯದಲ್ಲಿರುವ ಸಿ.ಎಲ್–೭ ಸನ್ನದ್ದುಗಳ ಬಗ್ಗೆ

**ಡಾ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೫೦೮ (೬೫೭) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯದಲ್ಲಿ ಹಾಲಿ ಇರುವ ಸಿ.ಎಲ್–೭ ಸನ್ನದ್ದುಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಮತ್ತು ಜಿಲ್ಲಾವಾರು ವಿವರ ನೀಡುವುದು)

(ಆ) ಸಿ.ಎಲ್–೭ ನೀಡಲು ಸರ್ಕಾರ ಅನುಸರಿಸುತ್ತಿರುವ ಮಾನದಂಡಗಳೇನು;

(ಇ) ಕಳೆದ ೪ ವರ್ಷ ೨೦೧೭–೧೮, ೨೦೧೮–೧೯, ೨೦೧೯–೨೦ ಮತ್ತು ೨೦೨೦–೨೧ ಈ ವರ್ಷದಲ್ಲಿ ಅನುಮತಿಸಲಾದ ಸಿ.ಎಲ್–೭ ಸನ್ನದ್ದುಗಳ ವಿವರಗಳನ್ನು ತಾಲ್ಲೂಕುವಾರು ಮತ್ತು ಜಿಲ್ಲಾವಾರು ನೀಡುವುದು;

(ಈ) ಸದರಿ ಸನ್ನದ್ದುಗಳನ್ನು ಸ್ಥಳಾಂತರ ಮಾಡಲು ನಿಯಮಗಳಲ್ಲಿ ಅವಕಾಶ ಇದೆಯೇ; ಇದ್ದಲ್ಲಿ, ವಿವರಗಳನ್ನು ನೀಡುವುದು ?

## ಬೆಂಗಳೂರು ಪೆರಿಫೆರಲ್ ಹೊರ ವರ್ತುಲ ರಸ್ತೆ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೧೯ (೬೦೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಪೆರಿಫೆರಲ್ ಹೊರ ವರ್ತುಲ ರಸ್ತೆ ನಿರ್ಮಿಸುವ ಬಗ್ಗೆ ಸರ್ಕಾರದ ನಿಲುವೇನು;

(ಆ) ಈ ಕಾಮಗಾರಿಯನ್ನು ಕೈಗೊಳ್ಳಲು ಬಿಡುಗಡೆ ಮಾಡಿರುವ ಅನುದಾನ ಎಷ್ಟು;

(ಇ) ಈ ಹೊರ ವರ್ತುಲ ರಸ್ತೆಗೆ ಬೇಕಾಗಿರುವ ಭೂಮಿಯನ್ನು ಸಾಧೀನಪಡಿಸಿಕೊಳ್ಳಲಾಗಿದೆಯೇ;

(ಈ) ಹಾಗಿದ್ದಲ್ಲಿ, ಎಷ್ಟು ಹೆಕ್ಟೇರ್ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಲಾಗಿದೆಯೇ;

(ಉ) ಭೂ ಮಾಲೀಕರಿಗೆ ಪರಿಹಾರ ಹಣ ಬಿಡುಗಡೆ ಮಾಡಲಾಗಿದೆಯೇ;

(ಊ) ಪೆರಿಫೆರಲ್ ಹೊರ ವರ್ತುಲ ರಸ್ತೆಯನ್ನು ನಿರ್ಮಿಸಲು ಕಾಲಮಿತಿಯನ್ನು ನಿಗದಿ ಮಾಡಲಾಗಿದೆಯೇ ? (ವಿವರ ನೀಡುವುದು)

## ಮುಖ್ಯಮಂತ್ರಿಗಳ ಪರಿಹಾರ ನಿಧಿಗೆ ಹಣ ಸಂಗ್ರಹಣೆ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೧೦ (೭೦೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮುಖ್ಯಮಂತ್ರಿಗಳ ಪರಿಹಾರ ನಿಧಿಗೆ ಕೊರೋನಾ ಕಾರಣಕ್ಕೆ ಈವರೆಗೆ ಸಂಗ್ರಹವಾಗಿರುವ ನಿಧಿ (ಹಣ) ಎಷ್ಟು ;

(ಆ) ಸಂಗ್ರಹವಾದ ಹಣವನ್ನು ಯಾವ ಯಾವ ಇಲಾಖೆಗಳಿಗೆ ಹಾಗೂ ಎಷ್ಟು; ಎಷ್ಟು ಹಣವನ್ನು ಬಳಸಲಾಗಿದೆ; (ವಿವರ ನೀಡುವುದು)

(ಇ) ಪಿ.ಎಂ.ಕೇರ್ ಫಂಡ್ (ಕೇಂದ್ರ) ದಿಂದ ಕೊರೋನಾ ನಿರ್ವಹಣೆಗೆ ರಾಜ್ಯಕ್ಕೆ ಎಷ್ಟು ಹಣ ಬಂದಿದೆ ;

(ಈ) ಬಂದಿದ್ದಲ್ಲಿ, ಆ ಹಣದ ಉಪಯೋಗದ ವಿವರ ನೀಡುವುದು ?

## ಸರ್ಕಾರದ ಜಾಹಿರಾತಿಗಾಗಿ ವೆಚ್ಚವಾದ ಹಣದ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೧೧ (೬೦೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೯–೨೦೨೦ ಹಾಗೂ ೨೦೨೦–೨೧ರ ಅವಧಿಯಲ್ಲಿ ಸರ್ಕಾರ ವಿವಿಧ ಯೋಜನೆಗಳ ಮತ್ತು ಬಹುಮುಖ್ಯವಾಗಿ ಕೋವಿಡ್ ಸಂದರ್ಭದಲ್ಲಿ ನೀಡಿದಂತಹ ಜಾಹಿರಾತುಗಳ ವೆಚ್ಚ ಎಷ್ಟು;

(ಆ) ಜಾಹಿರಾತುಗಳಲ್ಲಿ ಯಾವ ಯಾವ ಅಂಶಗಳು ಒಳಗೊಂಡಿದೆ; (ವಿವರ ನೀಡುವುದು)

(ಇ) ಕೋವಿಡ್ ಜಾಗೃತಿ ಜಾಹಿರಾತಿಗೆ ಕೇಂದ್ರದಿಂದ ಅನುದಾನ ಬಿಡುಗಡೆ ಆಗಿದೆಯೇ;

(ಈ) ಆಗಿದ್ದಲ್ಲಿ, ಇದುವರೆಗೆ ಬಿಡುಗಡೆಗೆ ಮಾಡಿರುವ ಹಣ ಎಷ್ಟು ಮತ್ತು ಅದನ್ನು ಯಾವ ಯಾವ ಬಾಬ್ತಿಗೆ ವೆಚ್ಚ ಮಾಡಲಾಗಿದೆ ? (ವಿವರ ನೀಡುವುದು)

## ಮಹಾರಾಷ್ಟ್ರ ಕೋಯಿನಾ ಅಣೆಕಟ್ಟಿನಿಂದ ಒಳ ಹರಿವಿನ ಪ್ರವಾಹದ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :–**

೫೧೨ (೪೮೧) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಹಾರಾಷ್ಟ್ರ ಕೋಯಿನಾ ಅಣೆಕಟ್ಟಿನಿಂದ ಹಾಗೂ ಇತರೆ ಯಾವ ಮೂಲಗಳಿಂದ ಕೃಷ್ಣ ನದಿಗೆ ನೀರು ಬರುತ್ತಿದೆ ; ಕಳೆದ ೩

ವರ್ಷಗಳಿಂದ ಬಿಡುಗಡೆಯಾದ ನೀರಿನ ಪ್ರಮಾಣ ಎಷ್ಟು; ಒಳ ಹರಿವಿನ ಪ್ರಮಾಣ ಎಷ್ಟು;

(ಆ) ಬಿಡುಗಡೆಯಾದ ನೀರಿನಿಂದ ಪ್ರವಾಹಕ್ಕೆ ಮುಳಗಡೆಯಾಗಿ ಹಾನಿಗೊಳಗಾದ ಹಳ್ಳಿಗಳು ಹಾಗೂ ಭೂ ಪ್ರದೇಶಗಳೆಷ್ಟು ; (ವಿವರ ನೀಡುವುದು)

(ಇ) ವಿಜಯಪುರ ಜಿಲ್ಲೆಯ ಯಾವ ಯಾವ ಪ್ರದೇಶಗಳು ಮುಳಗಡೆಯಾಗುತ್ತವೆ; (ವಿವರ ನೀಡುವುದು)

(ಈ) ಸಂತ್ರಸ್ತರಿಗೆ ಕೇಂದ್ರ ಸರ್ಕಾರದಿಂದ ಹಾಗೂ ರಾಜ್ಯ ಸರ್ಕಾರದಿಂದ ಬಿಡುಗಡೆಯಾದ ಹಣ ಎಷ್ಟು; ಕೇಂದ್ರ ಸರ್ಕಾರದಿಂದ ಯಾವುದಾದರೂ ಟೀಮ್ ಬಂದಿದೆಯೇ ? (ವಿವರ ನೀಡುವುದು)

## ಬೆಂಗಳೂರು ನಗರದಲ್ಲಿ ವಾಹನ ದಟ್ಟಣೆ ಕಡಿಮೆಗೊಳಿಸುವುದರ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :–**

೫೧೩ (೪೮೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರದಲ್ಲಿ ವಾಹನ ದಟ್ಟಣೆ ಕಡಿಮೆಗೊಳಿಸಲು ಪ್ರಾರಂಭಿಸಿರುವ ಪೆರಿಫೆರಲ್ ರಿಂಗ್ ರಸ್ತೆ ಹಾಗೂ ಎಲಿವೇಟೆಡ್ ಕಾಮಗಾರಿಗಳು ಯಾವ ಹಂತದಲ್ಲಿದೆ ; (ವಿವರ ನೀಡುವುದು)

(ಆ) ಪೆರಿಫೆರಲ್ ರಿಂಗ್ ರಸ್ತೆ ಹಾಗೂ ಎಲಿವೇಟೆಡ್ ರಸ್ತೆಯ ಯೋಜನೆಯ ಅಂದಾಜು ವೆಚ್ಚ ಎಷ್ಟು ;

(ಇ) ಯಾವ ಯಾವ ಪ್ರದೇಶಗಳಲ್ಲಿ ಎಷ್ಟು; ಕಿ.ಮೀ. ರಸ್ತೆ ನಿರ್ಮಾಣ ಮಾಡಲಾಗುವುದು; ಯೋಜನೆ ಯಾವಾಗ ಪೂರ್ಣಗೊಳ್ಳುವುದು ? (ವಿವರ ನೀಡುವುದು)

(ಈ) ಹೆಬ್ಬಾಳದಿಂದ ಬೆಂಗಳೂರು ಗಾಲ್ಫ್ ಕ್ಲಬ್ ರಸ್ತೆ ಮೇಲ್ಸೇತುವೆ ನಿರ್ಮಾಣ ಮಾಡುವ ಬಗ್ಗೆ ಸರ್ಕಾರದ ಮುಂದೆ ಪ್ರಸ್ತಾವನೆ ಇದೆಯೇ? (ವಿವರ ನೀಡುವುದು)

## ವಿಜಯಪುರ ಜಿಲ್ಲೆಯ ಕೆರೆಗಳಿಗೆ ನೀರು ತಲುಪಿಸುವ ಯೋಜನೆಯ ಕುರಿತು

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :–**

೫೧೪ (೪೮೨) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಜಯಪುರ ಜಿಲ್ಲೆಯ ಕೆರೆಗಳಿಗೆ ನೀರು ತುಂಬಿಸುವ ಯೋಜನೆ ಸರ್ಕಾರದ ಮುಂದಿದೆಯೇ; (ಜಿಲ್ಲೆಯಲ್ಲಿರುವ ಕೆರೆಗಳ ವಿವರ ನೀಡುವುದು)

(ಆ) ಹಾಗಿದ್ದಲ್ಲಿ, ಎಷ್ಟು ಕೆರೆಗಳಿಗೆ ನೀರು ತುಂಬಿಸುವ ಕಾರ್ಯ ಪೂರ್ಣಗೊಂಡಿದೆ; (ವಿವರ ನೀಡುವುದು)

(ಇ) ಉಳಿದಿರುವ ಕೆರೆಗಳಿಗೆ ನೀರು ತುಂಬಿಸುವ ಯೋಜನೆಯನ್ನುಎಷ್ಟು ದಿನಗಳಲ್ಲಿ ಪೂರ್ಣಗೊಳಿಸಲಾಗುವುದು ? (ವಿವರ ನೀಡುವುದು)

## ಆಲಮಟ್ಟಿ ಅಣೆಕಟ್ಟು ೫೨೪ ಅಡಿಗೆ ಹೆಚ್ಚಿಸುವ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :–**

೫೧೫ (೪೭೮) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಆಲಮಟ್ಟಿ ಅಣೆಕಟ್ಟನ್ನು ೫೨೪ ಅಡಿಗೆ ಹೆಚ್ಚಿಸುವ ಯೋಜನೆ ಸರ್ಕಾರಕ್ಕಿದೆಯೇ;

(ಆ) ಹಾಗಿದ್ದಲ್ಲಿ, ಅಣೆಕಟ್ಟು ಎತ್ತರಿಸುವ ಕಾರ್ಯ ಯಾವ ಹಂತದಲ್ಲಿದೆ; (ವಿವರ ನೀಡುವುದು)

(ಇ) ಆಲಮಟ್ಟಿ ಅಣೆಕಟ್ಟು ಎತ್ತರವನ್ನು ಹೆಚ್ಚಿಸುವುದರಿಂದ ಮುಳಗಡೆಯಾಗುವ ಭೂಮಿಯನ್ನು ಸ್ವಾಧೀನ ಪಡಿಸಿಕೊಳ್ಳಲಾಗಿದೆಯೇ; (ವಿವರ ನೀಡುವುದು)

(ಈ) ಆಲಮಟ್ಟಿ ಅಣೆಕಟ್ಟಿನ ಎತ್ತರದಿಂದ ಮುಳುಗಡೆಯಾಗಿರುವ ಊರು ಹಾಗೂ ಜಮೀನುಗಳ ವಿವರ ನೀಡುವುದು;

(ಉ) ಮುಳಗಡೆಯಾಗುವ ಜಮೀನುಗಳಿಗೆ ಹಾಗೂ ಮನೆಗಳಿಗೆ ಹಣ ನಿಗಧಿ ಪಡಿಸಲಾಗಿದೆಯೇ; ಬೇಕಾಗಿರುವ ಪರಿಹಾರದ ಮೊತ್ತ ಎಷ್ಟು ?

## ರಾಜ್ಯದಲ್ಲಿ ಮದ್ಯ ಮಾರಾಟ ಮಳಿಗೆಯನ್ನು ಹೊಸದಾಗಿ ಸ್ಥಾಪಿಸುವ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :–**

೫೧೬ (೪೭೯) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯದಲ್ಲಿ ಮದ್ಯ ಮಾರಾಟ ಮಳಿಗೆಯನ್ನು ಹೊಸದಾಗಿ ಆರಂಭಿಸುವ ಯೋಜನೆ ಸರ್ಕಾರದ ಮುಂದಿದೆಯೇ; (ವಿವರ ನೀಡುವುದು)

(ಆ) ಇದ್ದಲ್ಲಿ, ಯಾವ ಆಧಾರದ ಮೇಲೆ ಮದ್ಯದಂಗಡಿಗಳು ಮತ್ತು M.S.I.L. ಆರಂಭಿಸಲಾಗುವುದು ; (ವಿವರ ನೀಡುವುದು)

(ಇ) ಬಾರ್ ಅಂಡ್ ರೆಸ್ಟೋರೆಂಟ್ ಮತ್ತು ಕ್ಲಬ್‌ಗಳು ಮಾರ್ಚ್‌ನಿಂದ ಆಗಸ್ಟ್ ಅಂತ್ಯದವರೆಗೂ ಮುಚ್ಚಲ್ಪಟ್ಟಿದ್ದು, ಪ್ರಸ್ತುತ ವಹಿವಾಟು ಇಲ್ಲದಿರುವುದರಿಂದ ಪುನರ್ ನವೀಕರಣವನ್ನು ತಾತ್ಕಾಲವಧಿಗೆ ಮುಂದುವರೆಸುವ ಬಗ್ಗೆ ಸರ್ಕಾರ ಕ್ರಮಕೈಗೊಳ್ಳುವುದೇ ? (ವಿವರ ನೀಡುವುದು)

## ವೈನ್‌ಶಾಪ್/ಪಬ್‌ಗಳನ್ನು ತೆರೆಯಲು ಇರುವ ಮಾನದಂಡ ಕುರಿತು

**ಶ್ರೀ ಕೆ. ಪ್ರತಾಪ್ ಸಿಂಹ ನಾಯಕ್ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೫೧೭ (೫೪೭) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಶಿಕ್ಷಣ ಸಂಸ್ಥೆಗಳ ಸುತ್ತಮುತ್ತ ವೈನ್ ಶಾಪ್ ಮತ್ತು ಪಬ್‌ಗಳನ್ನು ತೆರೆಯಲು ಯಾವ ಮಾನದಂಡಗಳನ್ನು ಅನುಸರಿಸಿ ಅನುಮತಿ ನೀಡಲಾಗುತ್ತಿದೆ; ಈ ಮಾನದಂಡಗಳನ್ನು ಅನುಸರಿಸಲು ಯಾವ ವೈಜ್ಞಾನಿಕ ಕಾರಣಗಳನ್ನು ಅನುಸರಿಸಲಾಗಿದೆ;

(ಆ) ಇತ್ತೀಚಿನ ದಿನಗಳಲ್ಲಿ ಪತ್ರಿಕೆ ಮತ್ತು ಮಾಧ್ಯಮಗಳಲ್ಲಿ ವ್ಯಾಪಕವಾಗಿ ಚರ್ಚಿಸಲ್ಪಟ್ಟಂತೆ ಶಾಲಾ ಕಾಲೇಜುಗಳ ವಿದ್ಯಾರ್ಥಿಗಳನ್ನು ಕೇಂದ್ರವಾಗಿಸಿ ಮಾಧಕದ್ರವ್ಯ ಜಾಲ ತನ್ನ ಚಟುವಟಿಕೆಯನ್ನು ವಿಸ್ತರಿಸುತ್ತಿರುವುದು ನಿಜವೇ;

(ಇ) ಈ ಹಿನ್ನೆಲೆಯಲ್ಲಿ ಶಾಲಾ ಕಾಲೇಜುಗಳ ಸುತ್ತಮುತ್ತ ಈ ರೀತಿಯ ಚಟುವಟಿಕೆಗಳಿಗೆ ಆಸ್ಪದಕೊಡದಂತೆ ಸರ್ಕಾರ ಹೊಸ ಮಾನದಂಡಗಳನ್ನು ಸಿದ್ದಪಡಿಸಿ, ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಂಡು ಮಾಧಕದ್ರವ್ಯ ಜಾಲವನ್ನು ಮಟ್ಟಹಾಕಲು ಮುಂದಾಗುವುದೇ ?

## ರಾಜ್ಯದ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ಸೈನಿಕ ಸ್ಮಾರಕ ನಿರ್ಮಿಸುವ ಕುರಿತು

**ಶ್ರೀ ಕೆ. ಪ್ರತಾಪ್ ಸಿಂಹ ನಾಯಕ್ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೫೧೮ (೬೫೬) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ಸಮರ ಸ್ಮಾರಕ/ಸೈನಿಕ ಸ್ಮಾರಕ/ವಾರ್ ಮೆಮೋರಿಯಲ್ ಸ್ಥಾಪನೆ ಮಾಡುವ ಯೋಚನೆ ಮತ್ತು ಯೋಜನೆ ಸರ್ಕಾರದ ಮುಂದಿದೆಯೇ;

(ಆ) ರಾಜ್ಯದ ಎಷ್ಟು ಜಿಲ್ಲೆಗಳಲ್ಲಿ ಈಗಾಗಲೇ ಸಮರ ಸ್ಮಾರಕ/ಸೈನಿಕ ಸ್ಮಾರಕ/ವಾರ್ ಮೆಮೋರಿಯಲ್ ಸ್ಥಾಪಿಸಲಾಗಿದೆ;

(ಇ) ರಾಜ್ಯದ ಜನತೆಯಲ್ಲಿ ರಾಷ್ಟ್ರಭಕ್ತಿ, ದೇಶಪ್ರೇಮವನ್ನು ಜಾಗೃತಗೊಳಿಸುವ ನಿಟ್ಟಿನಲ್ಲಿ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ಸಮರ ಸ್ಮಾರಕಗಳನ್ನು ಸ್ಥಾಪಿಸಿ ಜುಲೈ ೨೬ರಂದು ಕಾರ್ಗಿಲ್ ವಿಜಯ ದಿವಸ ಮತ್ತು ಡಿಸೆಂಬರ್ ೧೬ ರಂದು ಬಾಂಗ್ಲಾ ವಿಮೋಚನಾ ಯುದ್ಧದ ಸವಿನೆನಪಿನಲ್ಲಿ ವಿಜಯ ದಿವಸ ಆಚರಿಸಲು ಸರ್ಕಾರ ಕೈಗೊಳ್ಳಲಿರುವ ಕ್ರಮವೇನು ?

## ೨೦೧೯-೨೦ನೇ ಸಾಲಿನಲ್ಲಿ ಸಣ್ಣ ನೀರಾವರಿ ಇಲಾಖೆಯಿಂದ ಹೊಸದಾಗಿ ನಿರ್ಮಿಸಿರುವ ಕೆರೆ ಕಟ್ಟೆಗಳ ವಿವರ ನೀಡುವ ಬಗ್ಗೆ

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು ):-**

೫೧೯ (೫೪೪) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೧೯-೨೦ನೇ ಸಾಲಿನಲ್ಲಿ ಸಣ್ಣ ನೀರಾವರಿ ಇಲಾಖೆಯ ವತಿಯಿಂದ ಹೊಸದಾಗಿ ರಾಜ್ಯದಲ್ಲಿ ನಿರ್ಮಿಸಲ್ಪಡುತ್ತಿರುವ ಕೆರೆ ಕಟ್ಟೆಗಳು, ಹೂಳು ತೆಗೆಯಲ್ಪಡುತ್ತಿರುವ ಕೆರೆಕಟ್ಟೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ೨೦೧೬-೧೭, ೨೦೧೭-೧೮, ೨೦೧೮-೧೯ನೇ ಸಾಲಿನಲ್ಲಿ ಕೆರೆಗಳ ಹೂಳು ತೆಗೆಯಲು ಖರ್ಚಾಗಿರುವ ಅನುದಾನವೆಷ್ಟು ? (ಜಿಲ್ಲಾವಾರು ವಿವರ ನೀಡುವುದು)

## ಪಾನೀಯ ನಿಗಮದಲ್ಲಿ ಅಬಕಾರಿ ಸನ್ನದ್ದುದಾರರು ೨೦೧೬-೧೭, ೨೦೧೮ನೇ ಸಾಲಿನಲ್ಲಿ ಖರೀದಿ ಮಾಡಲ್ಪಟ್ಟಿರುವ ಮದ್ಯದ ಮಾದರಿಗಳ ಬಗ್ಗೆ

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) :-**

೫೨೦ (೯೫೩) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೧೬-೧೭, ೨೦೧೮ ಸಾಲಿನಿಂದ ಪಾನೀಯ ನಿಗಮದಲ್ಲಿ ಅಬಕಾರಿ ಸನ್ನದ್ದುದಾರರು ಖರೀದಿ ಮಾಡಲ್ಪಟ್ಟಿರುವ ವಿವಿಧ ಮದ್ಯದ ಮಾದರಿಗಳ ವಿವರ ನೀಡುವುದು;

(ಆ) ರಾಜ್ಯದಲ್ಲಿ ಪರವಾನಿಗೆ ಪಡೆದು ನಡೆಸುತ್ತಿರುವ ಮದ್ಯದ ಅಂಗಡಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಇ) ಎಂ.ಎಸ್.ಐ.ಎಲ್. ವತಿಯಿಂದ ನಡೆಯಲ್ಪಡುತ್ತಿರುವ ಮದ್ಯದ ಅಂಗಡಿಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಈ) ರಾಜ್ಯದಲ್ಲಿ ಮದ್ಯ ಉತ್ಪಾದನೆ ಮಾಡುವ ಡಿಸ್ಟಲರಿಗಳ ಸಂಖ್ಯೆ ಎಷ್ಟು ? (ವಿವರ ನೀಡುವುದು)

# ರಾಜ್ಯದಲ್ಲಿ ವಶಪಡಿಸಿಕೊಂಡಿರುವ ಮಾಧಕ ವಸ್ತುಗಳ ಜಿಲ್ಲಾವಾರು ವಿವರ ನೀಡುವುದು

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) :–**

೫೨೧ (೫೯೨) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೫–೧೬ ರಿಂದ ೨೦೧೯–೨೦ ರವರೆಗೆ ರಾಜ್ಯದಲ್ಲಿ ವಶಪಡಿಸಿಕೊಂಡಿರುವ ಮಾಧಕ ವಸ್ತುಗಳಾವುವು (ಡ್ರಗ್ಸ್) (ಜಿಲ್ಲಾವಾರು ವಿವರ ನೀಡುವುದು)

(ಆ) ಅಂಚೆ ಕಛೇರಿಯ ಖಾಸಗಿ ಕೊರಿಯರ್ಸ್ ಮತ್ತು ವಿಮಾನಯಾನದ ಮೂಲಕ ಡ್ರಗ್ಸ್ ಪಾರ್ಸಲ್ ಬರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಎಷ್ಟು ಪ್ರಕರಣಗಳು ದಾಖಲಾಗಿವೆ; (ವಿವರ ನೀಡುವುದು)

(ಇ) ಮಾಧಕ ವಸ್ತುಗಳ ಮಾರಾಟ ದಂಧೆಯಲ್ಲಿ ತೊಡಗಿರುವ ಅಂಚೆ ಅಧಿಕಾರಿಗಳು ಸೇರಿದಂತೆ ಬೇರೆ ಬೇರೆ ಅಧಿಕಾರಿಗಳು ಶಾಮೀಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕೈಗೊಂಡ ಕ್ರಮಗಳೇನು;

(ಈ) ಸರ್ಕಾರಿ / ಖಾಸಗಿ ಇಂಜಿನಿಯರಿಂಗ್, ಮೆಡಿಕಲ್ ಕಾಲೇಜು ಪದವಿ ಕಾಲೇಜುಗಳ ಕ್ಯಾಂಪಸ್‌ಗಳಲ್ಲಿ ಡ್ರಗ್ಸ್ ಬಳಕೆ ಮಾಡಲಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇದುವರೆವಿಗೆ ಎಷ್ಟು ಕಡೆಗಳಲ್ಲಿ ಪ್ರಕರಣಗಳನ್ನು ದಾಖಲಿಸಲಾಗಿದೆ; (ವಿವರ ನೀಡುವುದು)

(ಉ) ಇತರೆ ಖಾಸಗಿ ಕಾಲೇಜು ಆಡಳಿತ ಮಂಡಳಿಗಳ ಮೇಲೆ ಏನು ಕ್ರಮ ಕೈಗೊಳ್ಳಲಾಗಿದೆ?

## ೨೦೧೯–೨೦ನೇ ಸಾಲಿನ ಕರ್ನಾಟಕ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯ ಅನುದಾನವು ಎಲ್ಲಾ ಶಾಸಕರಿಗೂ ಬಿಡುಗಡೆಯಾಗಿರುವ ವಿವರ ನೀಡುವುದು

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) :–**

೫೨೨ (೫೯೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೯–೨೦ನೇ ಸಾಲಿನ ಕರ್ನಾಟಕ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯ ಅನುದಾನವು ಪ್ರತಿ ಶಾಸಕರಿಗೂ ಬಿಡುಗಡೆಯಾಗಿದೆಯೇ; (ವಿವರ ನೀಡುವುದು)

(ಆ) ಬಿಡುಗಡೆಯಾಗದಿದ್ದಲ್ಲಿ, ಬಿಡುಗಡೆ ಆಗದಿರಲು ಕಾರಣವೇನು ;

(ಇ) ಅನುದಾನ ಬಿಡುಗಡೆ ಮಾಡಲು ಇರುವ ಅಡತಡೆಗಳೇನು ಯಾವಾಗ ಬಿಡುಗಡೆ ಮಾಡಲಾಗುವುದು ? (ಸಂಪೂರ್ಣ ಮಾಹಿತಿ ನೀಡುವುದು)

## ರಾಜ್ಯದಲ್ಲಿರುವ ಬೃಹತ್ ಮತ್ತು ಮಧ್ಯಮ ಜಲಾಶಯಗಳ ಸಂಖ್ಯೆ ಎಷ್ಟು

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) :–**

೫೨೩ (೪೭೨) ವಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಒಟ್ಟು ಬೃಹತ್ ಮತ್ತು ಮಧ್ಯಮ ಜಲಾಶಯಗಳೆಷ್ಟು; (ಜಿಲ್ಲಾವಾರು ಜಲಾಶಯಗಳ ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿರುವ ಜಲಾಶಯಗಳನ್ನು ಯಾವಾಗ ನಿರ್ಮಿಸಲಾಗಿದೆ; ಮತ್ತು ಅವುಗಳು ಎಷ್ಟು ನೀರಿನ ಸಂಗ್ರಹ ಸಾಮರ್ಥ್ಯ ಹೊಂದಿವೆ;

(ಇ) ಜಲಾಶಯಗಳಲ್ಲಿ ಇಲ್ಲಿಯವರೆಗೆ ಎಷ್ಟು ಬಾರಿ ಹೂಳನ್ನು ತೆಗೆಯಲಾಗಿದೆ; ಹೂಳು ತುಂಬಿರುವುದರಿಂದ ನೀರಿನ ಸಂಗ್ರಹ ಸಮರ್ಪಕ ಬಳಕೆಗೆ ಧಕ್ಕೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಜಲಾಶಯಗಳಲ್ಲಿ ಹೂಳು ತೆಗೆಯಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು;

(ಉ) ಹೊಸ ಜಲಾಶಯಗಳನ್ನು ನಿರ್ಮಾಣ ಮಾಡುವ ಉದ್ದೇಶ ಸರ್ಕಾರಕ್ಕಿದೆಯೇ ? (ವಿವರ ನೀಡುವುದು)

## ಸರಣಿ ಬ್ಯಾರೇಜ್ ಕಾಮಗಾರಿಯಲ್ಲಿ ವ್ಯಾಪಕ ಭ್ರಷ್ಟಾಚಾರ ಕುರಿತು

**ಶ್ರೀ ರಘುನಾಥ್ ರಾವ್ ಮಲ್ಕಾಪುರೆ (ವಿಧಾನಸಭೆಯಿಂದ ಚುನಾಯಿತರಾದವರು ):–**

೫೨೪ (೬೫೪) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯ ಮಾಂಜ್ರಾ ಸರಣಿ ಬ್ಯಾರೇಜ್‌ಗಳಲ್ಲಿ ಗೇಟ್ ಸಮಸ್ಯೆಯಾಗಿ ನೀರು ಇಲ್ಲದಿರುವುದರ ಬಗ್ಗೆ ತನಿಖೆಗೆ ಹೈಕೋರ್ಟ್ ಆದೇಶಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ವಿವರವಾದ ಮಾಹಿತಿ ನೀಡುವುದು;

(ಆ) ೧೪ ಬ್ಯಾರೇಜ್‌ಗಳ ನಿರ್ಮಾಣಕ್ಕೆ ಖರ್ಚು ಮಾಡಲಾಗಿರುವ ಹಣವೆಷ್ಟು; ಮತ್ತು ಯಾವ ಯಾವ ವರ್ಷದಲ್ಲಿ ಬ್ಯಾರೇಜ್‌ಗಳನ್ನು ನಿರ್ಮಾಣ ಮಾಡಲಾಗಿದೆ; (ವಿವರ ನೀಡುವುದು)

(ಇ) ಈ ಸರಣಿ ಬ್ಯಾರೇಜ್‌ಗಳ ನಿರ್ಮಾಣದಿಂದ ಒಟ್ಟು ಎಷ್ಟು ಎಕರೆ ಪ್ರದೇಶಕ್ಕೆ ನೀರಾವರಿ ಸೌಲಭ್ಯ ಕಲ್ಪಿಸಲಾಗಿದೆ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ನೂರಾರು ಕೋಟಿ ರೂಪಾಯಿ ವೆಚ್ಚ ಮಾಡಿ ನಿರ್ಮಾಣ ಮಾಡಲಾದ ಯೋಜನೆಯಲ್ಲಿ ಅಕ್ರಮ ಮತ್ತು ಲೋಪದೋಷಗಳು ಉಂಟಾಗಲು ಕಾರಣವೇನು ; ಇದಕ್ಕೆ ಕಾರಣರಾದವರುಗಳ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗುವುದು ; (ಸಂಪೂರ್ಣ ಮಾಹಿತಿ ನೀಡುವುದು)

(ಉ) ಕೂಡಲೇ ೪ ಬ್ಯಾರೇಜ್ ಗೇಟುಗಳನ್ನು ಸರಿಪಡಿಸಿ ರೈತರಿಗೆ ನೀರು ಸರಬರಾಜು ಮಾಡಲು ಸರ್ಕಾರ ಕೈಗೊಳ್ಳುವ ಕ್ರಮಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

## ಬೀದರ್ ಜಿಲ್ಲೆಯಲ್ಲಿ ಸಣ್ಣ ನೀರಾವರಿಯ ಕಾಮಗಾರಿಗಳು

**ಶ್ರೀ ರಘುನಾಥ್ ರಾವ್ ಮಲ್ಕಾಪುರೆ (ವಿಧಾನಸಭೆಯಿಂದ ಚುನಾಯಿತರಾದವರು ):–**

೫೨೫ (೫೨೫) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ಕಳೆದ ೩ ವರ್ಷಗಳಿಂದ ಸಣ್ಣ ನೀರಾವರಿ ಇಲಾಖೆಯಿಂದ ಕೈಗೆತ್ತಿಕೊಂಡಿರುವ ಯೋಜನೆಗಳು ಯಾವುವು; (ಪ್ರತ್ಯೇಕ ಕಾಮಗಾರಿವಾರು, ಯೋಜನೆವಾರು, ವರ್ಷವಾರು ಸಂಪೂರ್ಣ ವಿವರ ನೀಡುವುದು)

(ಆ) ಈ ಯೋಜನೆಗಳಿಗೆ ಮಂಜೂರು ಮಾಡಿರುವ /ಬಿಡುಗಡೆ ಮಾಡಿರುವ ಮತ್ತು ವೆಚ್ಚ ಮಾಡಿರುವ ಹಣ ಎಷ್ಟು; (ಗುತ್ತಿಗೆದಾರರವಾರು, ಯೋಜನೆವಾರು, ಕಾಮಗಾರಿವಾರು ಸ್ಪಷ್ಟ ಮಾಹಿತಿ ನೀಡುವುದು)

(ಇ) ಹಾಗಿದ್ದಲ್ಲಿ, ಕೈಗೊಂಡ ಯೋಜನೆಗಳನ್ನು ಯಾವಾಗ ಪೂರ್ಣಗೊಳಿಸಬೇಕಾಗಿತ್ತು; ಈಗ ಯಾವ ಹಂತದಲ್ಲಿವೆ; (ಯೋಜನೆವಾರು ವಿವರ ಒದಗಿಸುವುದು)

(ಈ) ಯೋಜನೆಗಳನ್ನು ತ್ವರಿತವಾಗಿ ಪೂರ್ಣಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಶರಾವತಿ ಭೂಗರ್ಭ ಜಲ ವಿದ್ಯುತ್ ಯೋಜನೆ ಕುರಿತು

**ಶ್ರೀ ಹೆಚ್.ಎಂ. ರಮೇಶಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೨೬ (೪೭೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶರಾವತಿ ಭೂಗರ್ಭ ಜಲವಿದ್ಯುತ್ ಯೋಜನೆಯ ಡಿ.ಪಿ.ಆರ್ ನಡೆಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಇದ್ದಲ್ಲಿ, ಈ ಯೋಜನೆಯ ವಿವರಗಳೇನು ;

(ಆ) ಶರಾವತಿ ಅಂತರ್ಗತ ಜಲವಿದ್ಯುತ್ ಯೋಜನೆಯಿಂದ ಎಷ್ಟು ಮೇಗಾ ವ್ಯಾಟ್ ವಿದ್ಯುತ್ ಉತ್ಪಾದನೆಯಾಗಲಿದೆ ; ಈ ಯೋಜನೆಗೆ ಎಷ್ಟು ಖರ್ಚಾಗಲಿದೆ ; (ವಿವರ ನೀಡುವುದು)

(ಇ) ಶರಾವತಿ ಅಂತರ್ಗತ ಜಲವಿದ್ಯುತ್ ಯೋಜನೆಯ ಜಿಯೋ ಟೆಕ್ನಿಕಲ್ ಸರ್ವೆ ನಡೆಸಲಾಗಿದೆಯೇ ; ನಡೆಸಿದ್ದಲ್ಲಿ, ಅದರ ತಾಂತ್ರಿಕ ವರದಿಗಳೇನು ;

(ಈ) ಶರಾವತಿ ಭೂಗರ್ಭ ಜಲವಿದ್ಯುತ್ ಯೋಜನೆಗೆ ಸ್ಥಳೀಯ ಜನರು ಮತ್ತು ಪರಿಸರವಾದಿಗಳಿಂದ ತೀವ್ರ ವಿರೋಧ ವ್ಯಕ್ತವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

## B.B.M.P ದಾನಪತ್ರ, ಕ್ರಯಪತ್ರ ಮತ್ತು ವಿಭಾಗ ಪತ್ರಗಳ ಕುರಿತು

**ಶ್ರೀ ಹೆಚ್.ಎಂ. ರಮೇಶಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೨೭ (೪೭೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಿ.ಬಿ.ಎಂ.ಪಿ ದಾನಪತ್ರ, ಕ್ರಯಪತ್ರ ಮತ್ತು ವಿಭಾಗ ಪತ್ರಗಳ ಅನ್ವಯ ಆಸ್ತಿ ವಿಭಜನೆ ಕಾನೂನುಬಾಹಿರ ಎಂದು ೨೦ ಅಕ್ಟೋಬರ್ ೨೦೧೪ರಲ್ಲಿ ಸುತ್ತೋಲೆ ಹೊರಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಸುತ್ತೋಲೆಯ ಕುರಿತು ಸರ್ಕಾರದ ಸ್ಪಷ್ಟ ನಿಲುವೇನು ;

(ಆ) ಕೇವಲ ಆಸ್ತಿ ತೆರಿಗೆ ಶುಲ್ಕ ಮಾತ್ರ ವಸೂಲಿ ಮಾಡುವ ಮಹಾನಗರ ಪಾಲಿಕೆ ಆಸ್ತಿ ವಿಭಜನೆಯ ಕುರಿತು ಯಾವ ನಿಯಮಾವಳಿ ಅನ್ವಯ ಈ ಸುತ್ತೋಲೆ ಹೊರಡಿಸಿದೆ ;

(ಇ) ಬಿ.ಬಿ.ಎಂ.ಪಿ ಸುತ್ತೋಲೆಯ ಪ್ರಕಾರ ಖಾತಾ ನೋಂದವಣೆ ವಿಭಜನೆಗಳು ಯಾವ ಆಸ್ತಿಗೆ ಅನ್ವಯಿಸುತ್ತವೆ ; ಪಾಲಿಕೆಯ ಸುತ್ತೋಲೆಯಿಂದ ಪಿತ್ರಾರ್ಜಿತ ಆಸ್ತಿ ಹಂಚಿಕೆಯಲ್ಲಿ ಜನಸಾಮಾನ್ಯರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಎ ಖಾತಾ ಮತ್ತು ಬಿ ಖಾತಾ ನಡುವಿನ ವ್ಯತ್ಯಾಸಗಳೇನು ; ಬಿ ಖಾತಾ ಹೆಸರಿನಲ್ಲಿ ದಂದೆ ನಡೆಯುತ್ತಿರುವುದು ಮತ್ತು ಜನರನ್ನು ಬಿ.ಬಿ.ಎಂ.ಪಿ ಖಾತೆಯ ಹೆಸರಲ್ಲಿ ಶೋಷಣೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ರಾಜ್ಯದಲ್ಲಿ ನೆಲೆಸಿರುವ ನೈಜೀರಿಯನ್ ಪ್ರಜೆಗಳ ಕುರಿತು

**ಶ್ರೀ ಹೆಚ್.ಎಂ. ರಮೇಶಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೨೮ (೪೭೭) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರಿನಲ್ಲಿರುವ ನೈಜೀರಿಯನ್ ಪ್ರಜೆಗಳ ಸಂಪೂರ್ಣ ಮಾಹಿತಿ ಸರ್ಕಾರದ ಬಳಿ ಇದೆಯೇ ; ಇವರಲ್ಲಿ ವೀಸಾ ಅವಧಿ ಮುಗಿದಿದ್ದರೂ ಇಲ್ಲೆ ವಾಸವಿರುವ ನೈಜೀರಿಯನ್ ಪ್ರಜೆಗಳು ಎಷ್ಟು ;

(ಆ) ಈ ನೈಜೀರಿಯನ್ ಪ್ರಜೆಗಳು ಹಿಂದಿನಿಂದಲೂ ಡ್ರಗ್ಸ್ ದಂದೆಯಲ್ಲಿ ಸಕ್ರಿಯರಾಗಿದ್ದಾರೆನ್ನುವ ಆರೋಪ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದರೆ ಈವರೆಗೆ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ;

(ಇ) ಹೆಣ್ಣೂರು ಮತ್ತು ಬಾಣಸವಾಡಿ ಸುತ್ತಮುತ್ತ ಹೆಚ್ಚು ನೈಜೀರಿಯನ್ ಪ್ರಜೆಗಳು ವಾಸವಿದ್ದು, ಸ್ಥಳೀಯ ಯುವಕ ಯುವತಿಯವರನ್ನು ಡ್ರಗ್ಸ್ ವ್ಯಸನಕ್ಕೆ ಗುರಿಪಡಿಸುತ್ತಿರುವುದು ಸರ್ಕಾರ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಈ) ನೈಜೀರಿಯನ್ ಪ್ರಜೆಗಳ ಬಳಿ ಎಲ್.ಎಸ್.ಡಿ. ಕೊಕೇನ್, ಹೆರಾಯಿನ್, ಕೋಬ್ರಾ ಪಾಯ್ಸನ್ ನಂತಹ ಅತ್ಯಂತ ಭಯಾನಕ ಡ್ರಗ್ಸ್‌ಗಳಿವೆ ಎನ್ನುವ ಮಾಹಿತಿ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಡ್ರಗ್ಸ್ ಹೇಗೆ ನೈಜೀರಿಯನ್ ಪ್ರಜೆಗಳನ್ನು ತಲುಪುತ್ತಿದೆ ; ಇವರ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ ?

## ರಾಜ್ಯದಾದ್ಯಂತ ಈವರೆಗೆ ನವೀಕರಿಸಲಾಗದ ಅಬಕಾರಿ ಪರವಾನಿಗೆಗಳ ಕುರಿತು

**ಶ್ರೀ ಹೆಚ್.ಎಂ. ರಮೇಶಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೨೯ (೪೭೬) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಾದ್ಯಂತ ಈವರೆಗೆ ನಮೀಕರಿಸದೆ ಉಳಿಸಿಕೊಂಡಿರುವ ಅಬಕಾರಿ ಪರವಾನಗಿಗಳ ಸಂಖ್ಯೆ ಎಷ್ಟು ; ಈ ಪರವಾನಗಿಯಲ್ಲಿ ಕಾರ್ಯಾಚರಿಸುತ್ತಿರುವ ವರ್ತಕರ ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಆ) ರಾಜ್ಯದಲ್ಲಿ ಹೊಸದಾಗಿ ನೀಡಲಾಗುತ್ತಿರುವ ಎಂ.ಎಸ್.ಐ.ಎಲ್ ಮಳಿಗೆಗಳ ಸಂಖ್ಯೆ ಎಷ್ಟು ; ಹೊಸ ಎಂ.ಎಸ್.ಐ.ಎಲ್. ಮಳಿಗೆಗಳನ್ನು ಸ್ಥಾಪಿಸಲು ಇರುವ ಮಾನದಂಡಗಳೇನು ; ಎಂ.ಎಸ್.ಐ.ಎಲ್ ನಿಂದ ಸರ್ಕಾರಕ್ಕೆ ಮತ್ತು ಮಳಿಗೆ ನಡೆಸುವವರಿಗೆ ಇರುವ ಲಾಭಗಳೇನು ;

(ಇ) ರಾಜ್ಯದಲ್ಲಿ ಲಾಕ್‌ಡೌನ್ ಸಂದರ್ಭದಲ್ಲಿ ಅಬಕಾರಿ ಇಲಾಖೆಗೆ ಆದ ನಷ್ಟವೆಷ್ಟು ; ಮದ್ಯದಂಗಡಿಗಳನ್ನು ತೆರೆದು ನಂತರ ಇಲ್ಲಿಯವರೆಗೆ ಸರ್ಕಾರದ ಬೊಕ್ಕಸಕ್ಕೆ ಬಂದ ಹಣವೆಷ್ಟು ; (ಅಂಕಿಅಂಶ ಸಹಿತ ಮಾಹಿತಿ ನೀಡುವುದು)

(ಈ) ಆನ್‌ಲೈನ್ ಮದ್ಯ ಮಾರಾಟದ ಪ್ರಸ್ತಾವನೆ ಈಗಲೂ ಸರ್ಕಾರದ ಮುಂದೆ ಇದೆಯೇ ; ಇದ್ದಲ್ಲಿ, ಸರ್ಕಾರ ಆನ್‌ಲೈನ್ ಮದ್ಯ ಮಾರಾಟ ಆರಂಭಿಸುತ್ತದೆಯೇ ?

## ನ್ಯಾಯ ವಿಜ್ಞಾನ ಪ್ರಯೋಗಾಲಯದಲ್ಲಿ ಅನರ್ಹರು ಕರ್ತವ್ಯ ನಿರ್ವಹಿಸುವ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೫೩೦ (೬೪೯) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಿ ಎ ಜಿ ವರದಿಯಲ್ಲಿ ನ್ಯಾಯ ವಿಜ್ಞಾನ ಪ್ರಯೋಗಾಲಯದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸೈಬರ್ ವಿಭಾಗದ ವರದಿ ನೀಡುವ ಅಧಿಕಾರಿಗಳು ಅರ್ಹ ವಿದ್ಯಾಭ್ಯಾಸವನ್ನು ಹೊಂದಿಲ್ಲ ಎಂಬುದಾಗಿ ವರದಿ ನೀಡುರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಅರ್ಹ ವಿದ್ಯಾರ್ಹತೆಯನ್ನು ಹೊಂದಿರದ ಈ ನೌಕರರ ಮೇಲೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಆ) ಅರ್ಹ ವಿದ್ಯಾರ್ಹತೆ ಪಡೆಯದೆ ಕೇವಲ ೩ ತಿಂಗಳ ತರಬೇತಿ ಪಡೆದಿರುವ ಯಾವುದೇ ವ್ಯಕ್ತಿಯು, ಸೈಬರ್ ವಿಭಾಗದಲ್ಲಿ ಕರ್ತವ್ಯ ನಿರ್ವಹಿಸಲು ಅರ್ಹರೆ ; ಹಾಗಿದ್ದಲ್ಲಿ, ನೇಮಕ ಪ್ರಕ್ರಿಯೆ ಸಂದರ್ಭದಲ್ಲಿ ಅರ್ಹ ವಿದ್ಯಾಭ್ಯಾಸದ ಕುರಿತು ಮಾಹಿತಿ ಪಡೆಯುವ ಅವಶ್ಯಕತೆ ಇದೆಯೇ ; ಯಾವುದೇ ಅರ್ಹತೆ ಇಲ್ಲದ ವ್ಯಕ್ತಿಯನ್ನು ನೇಮಕ ಮಾಡಿ ಆ ಬಳಿಕ ೩ ತಿಂಗಳ ತರಬೇತಿ ನೀಡಿದಲ್ಲಿ ಎಂ.ಎಸ್.ಸಿ. ಕಂಪ್ಯೂಟರ್ ಸೈನ್ಸ್ ಪದವಿಗೆ ಸರಿಸಮ ಎಂದಂತಾಗಲಿಲ್ಲವೇ ; ಈ ಕುರಿತು ಸರ್ಕಾರದ ನಿಲುವೇನು ;

(ಇ) ಸಿಬ್ಬಂದಿಗಳ ಕೊರತೆಯ ನೆಪಮೊಡ್ಡಿ ಅನರ್ಹರನ್ನು ಸೈಬರ್ ವಿಭಾಗಕ್ಕೆ ನೇಮಕ ಮಾಡಿ ೩ ತಿಂಗಳ ತರಬೇತಿ ನೀಡಲಾಗಿದೆ ಎಂದರೆ ಸೈಬರ್ ವಿಭಾಗದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವವರು ನೇಮಕಾತಿ ಸಂದರ್ಭದಲ್ಲಿ ಅರ್ಹ ವಿದ್ಯಾಭ್ಯಾಸ ಹೊಂದಿಲ್ಲ

ಎಂಬುದನ್ನು ಒಪ್ಪಿಕೊಂಡಂತಾಗಿದ್ದು, ಈ ರೀತಿಯಾಗಿ ಅನರ್ಹರನ್ನು ನೇಮಕ ಮಾಡಿದವರ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಈ) ೧೪.೧೨.೨೦೧೮ರ ಪ್ರಶ್ನೆ ಸಂಖ್ಯೆ ೬೯೫ ಮತ್ತು ೧೯.೦೭.೨೦೧೯ರ ಪ್ರಶ್ನೆ ಸಂಖ್ಯೆ: ೨೧೫ಕ್ಕೆ ನೀಡಿರುವ ಉತ್ತರದಲ್ಲೂ ಸ್ಪಷ್ಟವಾಗಿ ಸಿಬ್ಬಂದಿಗಳು ಅರ್ಹ ವಿದ್ಯಾಭ್ಯಾಸ ಹೊಂದಿಲ್ಲ ಎಂಬುದಾಗಿ ಸದನಕ್ಕೆ ಲಿಖಿತ ಉತ್ತರ ನೀಡಿದ್ದು, ಇಲಾಖೆ ಅನರ್ಹರಿಂದಲೇ ಕ್ರೈಂ ಕುರಿತ ವಿಶ್ಲೇಷಣೆಗಳನ್ನು ನಡೆಸುತ್ತಿರುವುದಾಗಿ ಸ್ಪಷ್ಟವಾಗಿ ಲಿಖಿತ ಹೇಳಿಕೆ ನೀಡಿರುವುದು ಗಂಭೀರ ವಿಷಯವಾಗಿದ್ದು, ಈ ಕುರಿತು ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

## ಮಾಹಿತಿ ತಂತ್ರಜ್ಞಾನ ಕಾಯ್ದೆಯ ಅನ್ವಯ ದಾಖಲು ಮಾಡಿದ ಪ್ರಕರಣಗಳ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೫೩೧ (೭೫೦) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೫ ವರ್ಷಗಳಲ್ಲಿ ಮಾಹಿತಿ ತಂತ್ರಜ್ಞಾನ ಕಾಯ್ದೆಯ ಅಡಿಯಲ್ಲಿ ದಾಖಲು ಮಾಡಿರುವ ಪ್ರಕರಣಗಳ ಸಂಖ್ಯೆ ಎಷ್ಟು ;

(ಆ) ಮಾಹಿತಿ ತಂತ್ರಜ್ಞಾನ ಕಾಯ್ದೆ ೬೬ಎ ಯ ಅನ್ವಯ ಎಷ್ಟು ಪಕ್ರರಣಗಳನ್ನು ದಾಖಲಿಸಲಾಗಿದೆ ; ಪ್ರಸ್ತುತ ಈ ಪ್ರಕರಣಗಳು ಯಾವ ಹಂತದಲ್ಲಿವೆ ; ದಿನಾಂಕ: ೨೪.೦೩–೨೦೧೫ರ ಬಳಿಕ ಈ ಕಾಯ್ದೆಯ ಅನ್ವಯ ದಾಖಲಾದ ಪ್ರಕರಣಗಳ ಸ್ಥಿತಿಗತಿಗಳೇನು ;

(ಇ) ದಿನಾಂಕ: ೨೪.೦೩.೨೦೧೫ರ ಬಳಿಕ ಮಾಹಿತಿ ತಂತ್ರಜ್ಞಾನ ಕಾಯ್ದೆಯ ಅನ್ವಯ ಎಷ್ಟು ಪ್ರಕರಣಗಳನ್ನು ದಾಖಲಿಸಲಾಗಿದೆ ; ಯಾವ ಸೆಕ್ಷನ್‌ಗಳ ಅಡಿಯಲ್ಲಿ ದಾಖಲಿಸಲಾಗಿದೆ ; (ಪ್ರಕರಣವಾರು, ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಇತ್ತೀಚಿನ ದಿನಗಳಲ್ಲಿ ಸಾಮಾಜಿಕ ಜಾಲತಾಣಗಳಲ್ಲಿ ಕೋಮು ಪ್ರಚೋದನೆ/ಎರಡು ಸಮುದಾಯಗಳ ನಡುವೆ ಘರ್ಷಣೆಯನ್ನು ಪ್ರಚೋದಿಸುವ ಲೇಖನ ಬರೆದಿರುವ ಕಾರಣಕ್ಕಾಗಿ ಎಷ್ಟು ಪ್ರಕರಣಗಳನ್ನು ಕಳೆದ ೬ ತಿಂಗಳಲ್ಲಿ ದಾಖಲಿಸಲಾಗಿದೆ ; ಈ ಪ್ರಕರಣಗಳಲ್ಲಿ ಯಾವ ಯಾವ ಸೆಕ್ಷನ್ ಯಾರ ಯಾರ ವಿರುದ್ಧ ಪ್ರಕರಣ ದಾಖಲಾಗಿದೆ ; ಪ್ರಸ್ತುತ ಈ ಪ್ರಕರಣಗಳು ಯಾವ ಹಂತದಲ್ಲಿವೆ ? (ವಿವರ ನೀಡುವುದು)

## ಮದ್ಯ ಮಾರಾಟ ಮಾಡಲು ನೀಡುವ ಪರವಾನಿಗೆಯ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೫೩೨ (೬೫೧) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅಬಕಾರಿ ಇಲಾಖೆಯಿಂದ ಮದ್ಯ ಮಾರಾಟ ಮಾಡಲು ಎಷ್ಟು ವಿಧದ ಪರವಾನಿಗೆಗಳನ್ನು ನೀಡಲಾಗುತ್ತದೆ ;

(ಆ) ಇದುವರೆಗೆ ಅಬಕಾರಿ ಇಲಾಖೆಯಿಂದ ಮದ್ಯ ಮಾರಾಟ ಮಾಡಲು ಅನುಮತಿ ಪಡೆದ ಮಾರಾಟಗಾರರ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವಿಧ ಲೈಸೆನ್ಸ್‌ವಾರು ಮಾಹಿತಿ ನೀಡುವುದು)

(ಇ) ಕಳೆದ ಎರಡು ವರ್ಷಗಳಲ್ಲಿ ನಕಲಿ ಮದ್ಯ ಮಾರಾಟ, ಸೆಕೆಂಡ್ಸ್ ಮದ್ಯ ಮಾರಾಟ, ಕಳ್ಳ ಬಟ್ಟಿ ಸರಾಯಿ ಮಾರಾಟದ ವಿರುದ್ಧ ದಾಖಲಾದ ಮೊಕದ್ದಮೆಗಳು ಎಷ್ಟು ; ಅಬಕಾರಿ ಅಧಿಕಾರಿಗಳು ಅಕ್ರಮ ಮದ್ಯ ಮಾರಾಟ, ನಕಲಿ ಮದ್ಯ ಮಾರಾಟ, ಸೆಕೆಂಡ್ಸ್

ಮದ್ಯ ಮಾರಾಟ, ಕಳ್ಳ ಬಟ್ಟಿ ಸರಾಯಿ ಮಾರಾಟದ ಮೇಲೆ ನಡೆಸಿದ ದಾಳಿಯಿಂದ ಜಪ್ತಿ ಮಾಡಿದ ಸ್ವತ್ತುಗಳ ಮೊತ್ತವೆಷ್ಟು ;

(ಈ) ಹೊಸದಾಗಿ ಮದ್ಯ ಮಾರಾಟದ ಪರವಾನಿಗೆ ನೀಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ; ಮದ್ಯ ಮಾರಾಟ ನಿಲ್ಲಿಸುವ ಬಗ್ಗೆ ಸರ್ಕಾರದ ನಿಲುವೇನು ?

## ವಿಕಾಸ ಸೌಧ, ವಿಧಾನ ಸೌಧ ಪ್ರವೇಶಕ್ಕಾಗಿ ಪಾಸ್ ವಿತರಿಸುವ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೫೩೩ (೬೫೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಾಹನಗಳಿಗೆ ವಿಧಾನ ಸೌಧ, ವಿಕಾಸ ಸೌಧ ಪ್ರವೇಶಿಸಲು ಅನುವಾಗುವಂತೆ ಎಷ್ಟು ವಿಧದ ಪಾಸುಗಳನ್ನು ನೀಡಲಾಗುತ್ತದೆ; ಅದಕ್ಕೆ ಇರುವ ನಿಯಮಗಳೇನು ; (ನಿಯಮದ ಪ್ರತಿಯೊಂದಿಗೆ ವಿವರ ನೀಡುವುದು)

(ಆ) ವಾಹನಗಳಿಗೆ ವಿಧಾನ ಸೌಧ, ವಿಕಾಸ ಸೌಧ ಪ್ರವೇಶಿಸಲು ಅನುವಾಗುವಂತೆ ಪಾಸುಗಳನ್ನು ನೀಡಲು ಇರುವ ಮಾನದಂಡಗಳೇನು ; ಯಾವ ಯಾವ ವ್ಯಕ್ತಿಗಳಿಗೆ ವಾಹನ ಪಾಸ್ ನೀಡಲಾಗುತ್ತದೆ ;

(ಇ) ೨೦೨೦ರ ಜನವರಿ ತಿಂಗಳಿನಿಂದ ಇದುವರೆಗೆ ಎಷ್ಟು ವಾಹನಗಳಿಗೆ ವಾಹನ ಪಾಸ್ ವಿತರಿಸಲಾಗಿದೆ ; ಸರ್ಕಾರಿ ಅಧಿಕಾರಿಗಳು ಸರ್ಕಾರದ ವಾಹನಗಳನ್ನು ಹೊರತುಪಡಿಸಿ ವಾಹನ ಪಾಸ್ ಪಡೆದ ಖಾಸಗಿ ವ್ಯಕ್ತಿಗಳ ಹೆಸರು, ವಾಹನದ ಸಂಖ್ಯೆಯೊಂದಿಗೆ ಮಾಹಿತಿ ನೀಡುವುದು ;

(ಈ) ಗಣ್ಯ ವ್ಯಕ್ತಿಗಳಿಗೆ ವಾಹನ ಪಾಸ್‌ನ್ನು ಯಾವ ಆಧಾರದಲ್ಲಿ ನೀಡಲಾಗುತ್ತದೆ ; ಪಾಸ್ ಪಡೆಯುವ ವ್ಯಕ್ತಿಯನ್ನು ಗಣ್ಯ ವ್ಯಕ್ತಿ ಎಂಬುದಾಗಿ ಶಿಫಾರಸ್ಸು ಮಾಡುವವರು ಯಾರು ; ಒಬ್ಬ ವ್ಯಕ್ತಿಯನ್ನು ಗಣ್ಯ ವ್ಯಕ್ತಿ ಎಂದು ಪರಿಗಣಿಸಬೇಕಾದಲ್ಲಿ ಆ ವ್ಯಕ್ತಿಗೆ ಇರಬೇಕಾದ ಅರ್ಹತೆಗಳೇನು ;

(ಉ) ಸಿ.ಆ.ಸು. ಇಲಾಖೆಯ ಕಾರ್ಯಕಾರಿ ಕಛೇರಿಯಲ್ಲಿ ವಾಹನ ಪಾಸುಗಳ ವಿತರಣೆಯಲ್ಲಿ ಅಕ್ರಮವೆಸಗಿರುವ ಕುರಿತು ತನಿಖೆ ನಡೆಸಲಾಗಿದೆಯೇ ; ಯಾವ ತಪ್ಪಿತಸ್ಥ ಅಧಿಕಾರಿಯ ಮೇಲೆ ಕ್ರಮ ಕೈಗೊಳ್ಳಲಾಗಿದೆ ?

## ಇಸ್ಲಾಮಿಯಾ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಕಾಲೇಜಿನ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೫೩೪ (೬೩೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರ ಜಿಲ್ಲೆಯ ಬೆಂಗಳೂರು ದಕ್ಷಿಣ ತಾಲ್ಲೂಕಿನ ಬೇಗೂರು ಹೋಬಳಿಯ ಹುಳಿಮಾವು ಗ್ರಾಮದ ಸರ್ವೇ, ೬೩ರಲ್ಲಿನ ಇಸ್ಲಾಮಿಯಾ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಕಾಲೇಜಿಗೆ ವಿದ್ಯುತ್ ಮತ್ತು ನೀರಿನ ಸಂಪರ್ಕವನ್ನು ನೀಡಲಾಗಿತ್ತೇ ; ನೀಡಿದ್ದಲ್ಲಿ, ಯಾವ ಆಧಾರದಲ್ಲಿ ಯಾರ ಆದೇಶದ ಮೇರೆಗೆ ಒದಗಿಸಲಾಗಿತ್ತು ; ವಿದ್ಯುತ್ ಮತ್ತು ನೀರಿನ ಸಂಪರ್ಕ ಒದಗಿಸಲು ಅನುಮತಿಸಿದ ಆದೇಶದ ಪ್ರತಿ ಒದಗಿಸುವುದು ;

(ಆ) ಸದರಿ ಕಾಲೇಜನ್ನು ಒತ್ತುವರಿ ಜಾಗದಲ್ಲಿ ನಿರ್ಮಿಸಲಾಗಿದ್ದು, ತೆರವುಗೊಳಿಸಲು ಆದೇಶ ಹೊರಡಿಸಿದ ಮೇಲೆ ವಿದ್ಯುತ್ ಮತ್ತು ನೀರಿನ ಸಂಪರ್ಕವನ್ನು ಕಡಿತಗೊಳಿಸಲಾಗಿದೆಯೇ ; ಇಲ್ಲವಾದಲ್ಲಿ ಯಾವಾಗ ಕಡಿತಗೊಳಿಸಲಾಗುವುದು ; ಇದುವರೆವಿಗೂ ಅಕ್ರಮವಾಗಿ ನೀಡಿರುವ ಸಂಪರ್ಕಗಳನ್ನು ಕಡಿತಗೊಳಿಸದ ಅಧಿಕಾರಿಗಳ ಮೇಲೆ ಯಾವ ಕ್ರಮಕೈಗೊಳ್ಳಲಾಗಿದೆ ;

(ಇ) ಈ ಕಾಲೇಜಿನ ಆಡಳಿತ ಮಂಡಳಿಯವರು ಬೆಂಗಳೂರು ನಗರ ಜಿಲ್ಲೆಯ ಬೆಂಗಳೂರು ದಕ್ಷಿಣ ತಾಲ್ಲೂಕಿನ ಬೇಗೂರು ಹೋಬಳಿಯ ಹುಳಿಮಾವು ಗ್ರಾಮದ ಸರ್ವೇ ೬೩ರ ಒತ್ತುವರಿ ಮಾಡಿಕೊಂಡಿರುವ ೫ ಎಕರೆ ಸ್ಥಳದಲ್ಲಿ ಕಟ್ಟಡ ನಿರ್ಮಿಸಲು ಅನುಮತಿ ನೀಡಲಾಗಿತ್ತೇ ; ಅನುಮಾತಿ ನೀಡಿದವರು ಯಾರು ; ಕಟ್ಟಡ ನಿರ್ಮಿಸಲು ಅನುಮತಿ ಕೋರಿ ಸಲ್ಲಿಸಿದ ದಾಖಲೆಗಳ ಪ್ರತಿ ಒದಗಿಸುವುದು ;

(ಈ) ಜಾಗದ ಅಕ್ರಮ ಒತ್ತುವರಿ ಮತ್ತು ಕಟ್ಟಡ ನಿರ್ಮಾಣದಲ್ಲಿ ಸಹಕರಿಸಿದ ಅಧಿಕಾರಿಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ?

## ಬೆಂಗಳೂರು ನಗರದ ಜಯಪ್ರಕಾಶ್ ನಾರಾಯಣ್ ಲನೇ ಹಂತದ ಬಡಾವಣೆ ಕುರಿತು

**ಶ್ರೀ ಪಿ.ಆರ್.ರಮೇಶ್ (ನಾಮನಿರ್ದೇಶನ ಹೊಂದಿದವರು) :–**

೫೩೫ (೫೫೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ/ಸರ್ಕಾರದಿಂದ ಬೆಂಗಳೂರು ನಗರದ ಜಯಪ್ರಕಾಶ್ ನಾರಾಯಣ್ ೮ನೇ ಹಂತದ ಬಡಾವಣೆಯ ನಿರ್ಮಾಣ ಯಾವ ಹಂತದಲ್ಲಿದೆ ; (ಈ ಕುರಿತು ಯಾವುದೇ ನ್ಯಾಯಾಲಯದ ಆದೇಶಗಳು ಇದ್ದಲ್ಲಿ, ಅದರ ಬಗ್ಗೆ ಸಂಕ್ಷಿಪ್ತವಾಗಿ ಮಾಹಿತಿ ನೀಡುವುದು)

(ಆ) ಕೊತ್ತನೂರು ಗ್ರಾಮದ ಸರ್ವೇ ನಂ.೮೭ ಒಟ್ಟು ೫೭ ಎಕರೆ ೧೧ ಗುಂಟೆ ಜಮೀನನ್ನು ಸರ್ಕಾರದ ರಿಸರ್ವ್ ಕಾವಲ್ ಎಂದು ಇರುವುದರ ಬಗ್ಗೆ ಪ್ರಾಧಿಕಾರದಿಂದ ಯಾವ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ ; (ಈ ಕುರಿತು ಸಂಕ್ಷಿಪ್ತ ಮಾಹಿತಿಯನ್ನು ನೀಡುವುದು)

(ಇ) OS No: ೮೯೫೭/೧೯೯೬ ಸಿವಿಲ್ ನ್ಯಾಯಾಲಯದಲ್ಲಿ ಸರ್ವೇ ನಂ.೮೭ಕ್ಕೆ ಸಂಬಂಧಿಸಿದ ಆದೇಶ ಪ್ರಕಾರ ಪ್ರಾಧಿಕಾರ ಯಾವ ಕ್ರಮಗಳನ್ನು ಜರುಗಿಸಿದೆ ; (ಈ ಸಂಬಂಧ ಕೈಗೊಂಡ ಕ್ರಮಗಳ ಕುರಿತು ಸಂಕ್ಷಿಪ್ತ ಮಾಹಿತಿಯನ್ನು ನೀಡುವುದು)

(ಈ) ಬೆಂಗಳೂರು ದಕ್ಷಿಣ ತಾಲ್ಲೂಕು ಹಿಂದುಳಿದ ವರ್ಗ, ಹಿಂದುಳಿದ ಜಾತಿ ಮತ್ತು ಹಿಂದುಳಿದ ಪಂಗಡಗಳ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ಕೊತ್ತನೂರು ಗ್ರಾಮದ ಸರ್ವೇ ನಂ.೮೭/೫ರ ಪರವಾಗಿ ೧೯೮೯ನೇ ಇಸವಿಯಲ್ಲಿ ನೀಡಿದ ಆಕ್ಷೇಪಣೆಗಳ ಪ್ರಕಾರ ಪ್ರಾಧಿಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ? (ಮಾಹಿತಿಯನ್ನು ಒದಗಿಸುವುದು)

## ರಾಜ್ಯದಲ್ಲಿ ಅಂತರ್ಜಾಲದ ಅಪರಾಧಗಳು (CYBER CRIME) ಹೆಚ್ಚುತ್ತಿರುವ ಕುರಿತು

**ಶ್ರೀ ಪಿ.ಆರ್.ರಮೇಶ್ (ನಾಮನಿರ್ದೇಶನ ಹೊಂದಿದವರು) :–**

೫೩೬ (೫೪೯) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಅಂತರ್ಜಾಲದ ಮುಖಾಂತರ ಅಪರಾಧ ಪ್ರಕರಣಗಳು (Cyber Crime) ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರದ ಕ್ರಮವೇನು ;

(ಆ) ಕಳೆದ ೫ ವರ್ಷಗಳಲ್ಲಿ ಅಂತರ್ಜಾಲದ ಮುಖಾಂತರ ದಾಖಲಾಗಿರುವ ಅಪರಾಧ (Cyber Crime) ಪ್ರಕರಣಗಳೆಷ್ಟು; ಎಷ್ಟು ಪ್ರಕರಣಗಳೆಷ್ಟು ; ಎಷ್ಟು ಪ್ರಕರಣಗಳಿಗೆ ನ್ಯಾಯ ಒದಗಿಸಲಾಗಿದೆ ; (ವಿವರ ನೀಡುವುದು)

(ಇ) ಆಧುನಿಕ ಮಟ್ಟದ ತಾಂತ್ರಿಕತೆಯ ಮೂಲಕ ಈ ಅಪರಾಧಗಳ (Cyber Crime) ಸ್ವರೂಪ ಬದಲಾಗುತ್ತಿರುವ ಪ್ರಕರಣಗಳನ್ನು ಪತ್ತೆಹಚ್ಚಲು ಮತ್ತು ತಡೆಗಟ್ಟಲು ಸರ್ಕಾರ ತೆಗೆದುಕೊಂಡ ಕ್ರಮವೇನು ; (ವಿವರ ನೀಡುವುದು)

(ಈ) ದೂರವಾಣಿ ಕರೆ ಅಥವಾ ಸಂದೇಶಗಳ ಮುಖಾಂತರ ಹಲವು ಅಮಾಯಕ ಸಾರ್ವಜನಿಕರ ಹಣವನ್ನು ಅಂತರರಾಜ್ಯ ಮತ್ತು ವಿದೇಶಿಕಳ್ಳರು ಲಪಟಾಯಿಸಿರುವ ಬಗ್ಗೆ ದಾಖಲಾದ ಪ್ರಕರಣಗಳೆಷ್ಟು ; (ವಿವರ ನೀಡುವುದು)

(ಉ) ಇಂತಹ ಪ್ರಕರಣಗಳನ್ನು ತಡೆಯಲು ಸರ್ಕಾರದ ಕ್ರಮಗಳೇನು ? (ವಿವರ ನೀಡುವುದು)

## ರಾಜ್ಯದಲ್ಲಿ ಸಂಗ್ರಹವಾದ GST ತೆರಿಗೆ ಮೊತ್ತದ ಕುರಿತು

**ಶ್ರೀ ಪಿ.ಆರ್.ರಮೇಶ್ (ನಾಮನಿರ್ದೇಶನ ಹೊಂದಿದವರು) :–**

೫೩೭ (೫೪೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೭–೧೮ನೇ ಸಾಲಿನಿಂದ ಇಲ್ಲಿಯವರೆಗೆ ರಾಜ್ಯದಲ್ಲಿ ಸಂಗ್ರಹವಾದ SGST, CGST ಮತ್ತು IGST ಮೊತ್ತವೆಷ್ಟು ; (ವಿವರ ನೀಡುವುದು)

(ಆ) ೨೦೧೭–೧೮ನೇ ಸಾಲಿನಿಂದ ಇಲ್ಲಿಯವರೆಗೆ ನೇರ GST ಮತ್ತು ಕೇಂದ್ರ ಸರ್ಕಾರದ ಮೂಲಕ ರಾಜ್ಯದ ಬೊಕ್ಕಸಕ್ಕೆ ಸಂದಾಯವಾದ ಮೊತ್ತವೆಷ್ಟು ; (ವಿವರ ನೀಡುವುದು)

(ಇ) ೨೦೧೦–೧೧ ರಿಂದ ೨೦೧೬–೧೭ನೇ ಸಾಲಿನವರೆಗೆ ರಾಜ್ಯ ಸರ್ಕಾರದ ಬೊಕ್ಕಸಕ್ಕೆ ತೆರಿಗೆ ಮುಖಾಂತರ ಆರ್ಥಿಕ ಇಲಾಖೆಗೆ ಸಂದಾಯವಾದ ಒಟ್ಟು ಮೊತ್ತವೆಷ್ಟು ; (ತೆರಿಗೆವಾರು, ವರ್ಷವಾರು ವಿವರ ನೀಡುವುದು)

(ಈ) GST ಪೂರ್ವ ಮತ್ತು GST ನಂತರದ ರಾಜ್ಯ ಸರ್ಕಾರದ ತೆರಿಗೆ ಆದಾಯದ ಕುರಿತು ಸರ್ಕಾರದ ನಿಲುವೇನು ; (ಮಾಹಿತಿ ನೀಡುವುದು)

(ಉ) ಕೇಂದ್ರ ಸರ್ಕಾರದಿಂದ ೨೦೧೭–೧೮ನೇ ಸಾಲಿನಿಂದ ಇಲ್ಲಿಯವರೆಗೆ ಬರಬೇಕಾದ GST ಬಾಕಿ ಮೊತ್ತ ಎಷ್ಟು ; (ವರ್ಷವಾರು ವಿವರ ನೀಡುವುದು)

(ಊ) ಪ್ರಸಕ್ತ ವರ್ಷದ ಕರೋನ ಮಹಾಮಾರಿ ಹಿನ್ನೆಲೆಯಲ್ಲಿ ರಾಜ್ಯದಲ್ಲಿನ ತೆರಿಗೆ ಶೇಖರಣೆ ಕುಂಠಿತವಾಗಿದೆಯೇ ; ಹಾಗಿದ್ದಲ್ಲಿ, GST

ಒಪ್ಪಂದದಂತೆ ಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ ಸಂದಾಯವಾಗಬೇಕಿದ್ದ ಪರಿಹಾರ ಮೊತ್ತವೆಷ್ಟು ; ಇಲ್ಲಿವರೆಗೆ ಎಷ್ಟು ಸಂದಾಯವಾಗಿದೆ ? (ಸಂಪೂರ್ಣ ವಿವರ ನೀಡುವುದು)

## The Great Trigonometric Survey ಸ್ಮಾರಕ ಹಾಳಾಗಿರುವ ಕುರಿತು

**ಶ್ರೀ ಪಿ.ಆರ್.ರಮೇಶ್ (ನಾಮನಿರ್ದೇಶನ ಹೊಂದಿದವರು) :–**

೫೩೮ (೬೧೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರದ ಹೆಣ್ಣೂರು ಬಾಗಲೂರು ರಸ್ತೆಯ ಸಮೀಪದಲ್ಲಿ ಸನ್ ೧೮೬೮ನೇ ಇಸವಿಯಲ್ಲಿ ವೈಜ್ಞಾನಿಕ ಇತಿಹಾಸ ಸೃಷ್ಠಿಸಿದ The Great Trigonometric Survey ದ ಭಾಗವಾಗಿ ಸ್ಥಾಪನೆಯಾದ ಸ್ಮಾರಕ ಇಂದು ಕಸದ ಗುಂಡಿಯಾಗಿ ಮತ್ತು ತ್ಯಾಜ್ಯದ ರಾಶಿಯಲ್ಲಿ ಮರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಸ್ಮಾರಕವನ್ನು ಉಳಿಸಲು ಸರ್ಕಾರದ ಪ್ರಯತ್ನವೇನು ;

(ಆ) ಶ್ರೀ ಲಾಂಬ್ಟನ್‌ರವರು ಕೈಗೊಂಡ ಈ ಅಭೂತಪೂರ್ವ ಸರ್ವೆಯ ಭಾಗಿಯಾಗಿ ಬೆಂಗಳೂರಿನಲ್ಲಿ ಸ್ಥಾಪನೆಯಾಗಿರುವ ಇತರೆ ಸ್ಮಾರಕಗಳ ಕುರಿತು ಸರ್ಕಾರ ತೆಗೆದುಕೊಂಡ ಕ್ರಮವೇನು ?

## ರಾಜ್ಯದಲ್ಲಿ ರಸ್ತೆ ಅಪಘಾತಗಳು ಹೆಚ್ಚುತ್ತಿರುವ ಕುರಿತು

**ಶ್ರೀ ಪಿ.ಆರ್.ರಮೇಶ್ (ನಾಮನಿರ್ದೇಶನ ಹೊಂದಿದವರು) :–**

೫೩೯ (೬೧೫) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಇತೀಚೆಗೆ ರಾಷ್ಟ್ರೀಯ ಅಪರಾಧ ಪ್ರಕರಣಗಳ ಸಂಸ್ಥೆ(ಎನ್.ಸಿ.ಆರ್.ಬಿ) ಬಿಡುಗಡೆ ಮಾಡಿದ ವರದಿಯಲ್ಲಿ ರಸ್ತೆ ಅಪಘಾತದಿಂದ ಮಡಿದವರ ಸಂಖ್ಯೆಯಲ್ಲಿ ರಾಜ್ಯವು ಅಗ್ರಸ್ಥಾನದಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ರಸ್ತೆ ಅಪಘಾತಗಳ ಮುಖಾಂತರ ಮಡಿದವರ ಸಂಖ್ಯೆ ಎಷ್ಟು ; (ಜಿಲ್ಲಾವಾರು, ತಾಲ್ಲೂಕುವಾರು ವಿವರ ನೀಡುವುದು)

(ಆ) ಈ ರಸ್ತೆ ಅಪಘಾತಗಳನ್ನು ತಡೆಯಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ? (ವಿವರ ನೀಡುವುದು)

## ಬಿಬಿಎಂಪಿ ರಸ್ತೆಗಳ ದುರಸ್ತಿ ಬಗ್ಗೆ

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೪೦ (೫೪೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೃಹತ್ ಬೆಂಗಳೂರು ನಗರ ಪಾಲಿಕೆ ವ್ಯಾಪ್ತಿಯಲ್ಲಿ ಬರುವ ರಸ್ತೆಗಳು ಹದಗೆಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಅದರ ನಿರ್ವಹಣೆಗೆ ಕೈಗೊಂಡಿರುವ ಕ್ರಮಗಳೇನು ; (ಮಾಹಿತಿ ಒದಗಿಸುವುದು)

(ಇ) ಕಳೆದ ೨ ವರ್ಷಗಳಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರಸ್ತೆಗಳ ಪ್ಯಾಚ್ ವರ್ಕ್‌ಗೆ ಮೀಸಲಿಟ್ಟ ಅನುದಾನ ಎಷ್ಟು ; ಅದರಲ್ಲಿ ಖರ್ಚು ಮಾಡಲಾದ ಅನುದಾನ ಎಷ್ಟು ? (ಮಾಹಿತಿ ಒದಗಿಸುವುದು)

## ರಸ್ತೆ ದುರಸ್ತಿ ಬಗ್ಗೆ

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೪೧ (೫೪೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಿಬಿಎಂಪಿ ವ್ಯಾಪ್ತಿಗೆ ಬರುವ ಬೆಳ್ಳಂದೂರು ಔಟರ್‌ರಿಂಗ್ ರಸ್ತೆಯಿಂದ ಅಂಬಲೀಪುರಕ್ಕೆ ಹೋಗುವ ರಸ್ತೆ ಹದಗೆಟ್ಟಿದ್ದು ಅಪಘಾತ ಸಂಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಅದರ ದುರಸ್ತಿಗೆ ಸರ್ಕಾರ ವಹಿಸಿರುವ ಕ್ರಮವೇನು ;

(ಆ) ಬಿಬಿಎಂಪಿ ಮುಂದೆ ರಸ್ತೆ ದುರಸ್ತಿಯ ಪ್ರಸ್ತಾವನೆ ಇದೆಯೇ ; ಇದ್ದಲ್ಲಿ, ಅನುಷ್ಠಾನ ಮಾಡುವುದು ಯಾವಾಗ ? (ಮಾಹಿತಿ ಒದಗಿಸುವುದು)

## ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳ ಪ್ರವಾಸದ ಬಗ್ಗೆ

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೪೨ (೫೪೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಸರ್ಕಾರದಿಂದ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳ ನೇಮಕವಾಗಿದೆಯೇ ; (ಮಾಹಿತಿ ನೀಡುವುದು)

(ಆ) ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ಕಳೆದ ೨ ವರ್ಷದ ಅವಧಿಯಲ್ಲಿ ಎಷ್ಟು ಜಿಲ್ಲಾವಾರು ಸಭೆ ನಡೆಸಿದ್ದಾರೆ ; ಹಾಗೂ ಎಷ್ಟು ಜಿಲ್ಲಾ ಪ್ರವಾಸ ಕೈಗೊಂಡಿದ್ದಾರೆ ? (ಮಾಹಿತಿ ಒದಗಿಸುವುದು)

## ಬೀದಿ ದೀಪಗಳಿಗೆ ಎಲ್ಇಡಿ ಬಲ್ಬ್ ಅಳವಡಿಕೆ ಬಗ್ಗೆ

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೪೩ (೫೪೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಬೃಹತ್ ನಗರಪಾಲಿಕೆ ವ್ಯಾಪ್ತಿಯಲ್ಲಿ ಬರುವ ಬೀದಿ ದೀಪಗಳಿಗೆ ಎಲ್ಇಡಿ ಬಲ್ಬ್ ಅಳವಡಿಕೆ ಯೋಜನೆ ಯಾವ ಹಂತದಲಿದೆ ; (ಮಾಹಿತಿ ಒದಗಿಸುವುದು)

(ಆ) ಸದರಿ ಯೋಜನೆಗೆ ಬಿಬಿಎಂಪಿ ವತಿಯಿಂದ ಅಂದಾಜಿಸಲಾದ ಅನುದಾನ ಎಷ್ಟು ? (ಮಾಹಿತಿ ಒದಗಿಸುವುದು)

## ಬಿಎಂಆರ್‌ಡಿಎ ಪ್ರಾಧಿಕಾರಗಳ ಸಭೆ ಕುರಿತು

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೪೪ (೫೪೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ಬಿಎಂಆರ್‌ಡಿಎ ವ್ಯಾಪ್ತಿಗೆ ಬರುವ ವಿವಿಧ ಅಭಿವೃದ್ಧಿ ಪ್ರಾಧಿಕಾರಿಗಳ ಸಭೆಗಳು ಕಾಲ ಕಾಲಕ್ಕೆ ನಡೆಯದೆ ವಿಳಂಬವಾಗುತ್ತಿರಲು ಕಾರಣವೇನು ? (ಮಾಹಿತಿ ಒದಗಿಸುವುದು)

## ಶ್ರೀರಂಗ ಏತ ನೀರಾವರಿ ಯೋಜನೆಯ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) :–**

೫೪೫ (೬೫೩) ವಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶ್ರೀರಂಗ ಏತ ನೀರಾವರಿ ಯೋಜನೆ ಜಾರಿಗೆ ರಾಜ್ಯ ಸರ್ಕಾರ ಇಲ್ಲಿಯವರೆಗೂ ಯಾವ ಕ್ರಮಗಳನ್ನು ಕೈಗೊಂಡಿದೆ ;

(ಆ) ಶ್ರೀರಂಗ ಯೋಜನೆಯಿಂದ ರಾಮನಗರ ಜಿಲ್ಲೆಯ ಮಾಗಡಿ ಮತ್ತು ತುಮಕೂರು ಜಿಲ್ಲೆಯ ಕುಣಿಗಲ್ ತಾಲ್ಲೂಕುಗಳ ಎಷ್ಟು ಕೆರೆಗಳಿಗೆ ಅನುಕೂಲವಾಗಲಿದೆ ; (ವಿವರ ನೀಡುವುದು)

(ಇ) ಈ ಯೋಜನೆಗೆ ನಿಗದಿಪಡಿಸಿರುವ ಪರಿಷ್ಕೃತ ಹಣವೆಷ್ಟು ; ಈಗಾಗಲೇ ಈ ಯೋಜನೆಗೆ ಬಿಡುಗಡೆಯಾಗಿ ಖರ್ಚಾಗಿರುವ ಹಣವೆಷ್ಟು ;

(ಈ) ಈ ಯೋಜನೆಯ ಕಾಮಗಾರಿ ಪೂರ್ಣಗೊಳಿಸಲು ನಿಗದಿಪಡಿಸಲಾದ ಸಮಯ ಎಷ್ಟು ;

(ಉ) ಈ ಯೋಜನೆಗೆ ಒಟ್ಟು ಭೂಸ್ವಾಧೀನ ಪ್ರದೇಶ ಎಷ್ಟು ; ಹಾಗೂ ಭೂಸ್ವಾಧಿನ ಪ್ರಕ್ರಿಯೆ ಪೂರ್ಣಗೊಂಡಿದೆಯೇ ? ಇಲ್ಲವಾದಲ್ಲಿ ಕಾರಣಗಳೇನು ;

(ಊ) ಈ ಯೋಜನೆಯಿಂದ ಒಟ್ಟು ಎಷ್ಟು ಕ್ಯೂಸೆಕ್ಸ್ ನೀರು ಹರಿಸಲಾಗುವುದು ?

## GST ಪರಿಹಾರದ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) :–**

೫೪೬ (೫೫೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ ಬರಬೇಕಾಗಿರುವ GST ಪರಿಹಾರದ ಮೊತ್ತವೆಷ್ಟು ;

(ಆ) ಸರಕು ಮತ್ತು ಸೇವಾ ತೆರಿಗೆ (GST) ನಷ್ಟ ಪರಿಹಾರದ ಅಲಭ್ಯತೆಯಿಂದಾಗಿ ಉಂಟಾಗಿರುವ ಆದಾಯ ಕೊರತೆ ಎಷ್ಟು ;

(ಇ) GST ಸೆಸ್ ಹಾಗೂ ವಿಶೇಷ ರೂಪದ ಸಾಲ ಪಡೆಯುವ ಬಗ್ಗೆ ಸರ್ಕಾರ ಯಾವ ವಿಧಾನವನ್ನು ಆಯ್ಕೆ ಮಾಡಿಕೊಂಡಿದೆ ; ಇದರಲ್ಲಿ ಎಷ್ಟು ಸಾಲ ಪಡೆಯುವ ಉದ್ದೇಶ ಹೊಂದಿದೆ ; ಇದಕ್ಕೆ ಪಾವತಿಸಬೇಕಾದ ಬಡ್ಡಿದರ ಎಷ್ಟು ಇದನ್ನು ಸರ್ಕಾರ ಯಾವ ಉದ್ದೇಶಕ್ಕೆ ಬಳಸಿಕೊಳ್ಳಲು ತೀರ್ಮಾನಿಸಲಾಗಿದೆ ; ಹಾಗೂ ಇದರಿಂದಾಗುವ ಅನುಕೂಲಗಳೇನು ;

(ಈ) ಸಾಲ ಪಡೆದಲ್ಲಿ, ಈ ಸಾಲದ ಮೇಲಿನ ಬಡ್ಡಿಯನ್ನು ಸರ್ಕಾರ ಯಾವ ಸಂಪನ್ಮೂಲದಿಂದ ಪಾವತಿಸಬೇಕಾಗುತ್ತದೆ ; (ವಿವರ ನೀಡುವುದು)

(ಉ) ರಾಜ್ಯ ಸರ್ಕಾರದ ಋಣಭಾರ ಎಷ್ಟು ಲಕ್ಷ ಕೋಟಿಗೆ ಏರಿಕೆಯಾಗಿದೆ ; ಹಾಗೂ ಈಗ ಹಾಲಿ ಇರುವ ಋಣಭಾರ ಎಷ್ಟು ?

## ಮಾದಕ ವಸ್ತುಗಳಿಗೆ ಸಂಬಂಧಿಸಿದ ಪ್ರಕರಣಗಳ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) :–**

೫೪೭ (೫೧೬) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೫ ವರ್ಷಗಳಲ್ಲಿ ಕರ್ನಾಟಕ ರಾಜ್ಯದಲ್ಲಿ ಮಾದಕ ವಸ್ತುಗಳಿಗೆ ಸಂಬಂಧಿಸಿದಂತೆ ಎಷ್ಟು ಕ್ರಿಮಿನಲ್ ಪ್ರಕರಣಗಳು ದಾಖಲಾಗಿವೆ ; ಹಾಗೂ ಎಷ್ಟು ಜನರನ್ನು ಈ ಪ್ರಕರಣಗಳಲ್ಲಿ ಬಂಧಿಸಲಾಗಿದೆ ;

(ಆ) ಸದರಿ ಪ್ರಕರಣಗಳಿಗೆ ಸಂಬಂಧಿಸಿದಂತೆ ಮಾದಕ ವಸ್ತುಗಳ ಮೂಲವನ್ನು ಅಂದರೆ ಅವುಗಳನ್ನು ಬೆಳೆಯುವ/ತಯಾರಿಸುವ ಉತ್ಪಾದಿಸುವ ಸ್ಥಗಳನ್ನು ಪತ್ತೆ ಹಚ್ಚಲಾಗಿದೆಯೇ ; (ವಿವರಗಳನ್ನು ನೀಡುವುದು)

(ಇ) ಮಾದಕ ವಸ್ತುಗಳಿಗೆ ಸಂಬಂಧಿಸಿದ ಪ್ರಕರಣಗಳಲ್ಲಿ ಭಾಗಿಯಾದ ಆರೋಪಿತರ ಆಸ್ತಿಯನ್ನು ಸರ್ಕಾರ ಮುಟ್ಟುಗೋಲು ಹಾಕಿಕೊಳ್ಳುವ ಬಗ್ಗೆ ಏನಾದರೂ ಕ್ರಮ ಕೈಗೊಂಡಿದೆಯೇ ; (ವಿವರ ನೀಡುವುದು)

(ಈ) ಕಳೆದ ೫ ವರ್ಷಗಳಲ್ಲಿ NDPS Act ಅಡಿಯಲ್ಲಿ ಎಷ್ಟು ಪ್ರಕರಣಗಳನ್ನು ದಾಖಲಿಸಲಾಗಿದೆ ; (ಠಾಣಾವಾರು ಪ್ರಕರಣಗಳ ಮಾಹಿತಿಯನ್ನು ನೀಡುವುದು)

(ಉ) ಇದುವರೆವಿಗೂ ಎಷ್ಟು ಕೆಜಿ ಮಾದಕ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ ; ಕಳೆದ ೫ ವರ್ಷಗಳಲ್ಲಿ ವರದಿಯಾದ ಪ್ರಕರಣಗಳಲ್ಲಿ ಎಷ್ಟು ಜನ ಆರೋಪಿಗಳಿಗೆ ಶಿಕ್ಷೆಯಾಗಿದೆ ?

(ಊ) ಡ್ರಗ್ಸ್ ಬಳಕೆಯನ್ನು ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳಾವುವು ;

(ಋ) ಉನ್ನತ ಮಟ್ಟದ ತನಿಖೆಗೆ ಆದೇಶಿಸಲಾಗಿದೆ ; ಈ ಬಗ್ಗೆ ಉನ್ನತ ಮಟ್ಟದ ಸಭೆ ನಡೆಸಲಾಗಿದೆಯೇ ; ಸಭೆ ನಡೆಸಿದಲ್ಲಿ ಯಾವ ಯಾವ ದಿನಾಂಕಗಳಂದು ನಡೆಸಲಾಗಿದೆ ; (ವಿವರ ನೀಡುವುದು)

(ಎ) ರಾಜ್ಯದಲ್ಲಿನ ಡ್ರಗ್ಸ್ ನಿಯಂತ್ರಕ್ಕೆ ಎಷ್ಟು ಚೆಕ್ ಪೋಸ್ಟ್‌ಗಳನ್ನು ತೆರೆಯಲಾಗಿದೆ ; ಯಾವ ಯಾವ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲಾಗಿದೆ ?

## ಬಂಧಿಖಾನೆಗಳ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) :–**

೫೪೮ (೫೧೫) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಒಟ್ಟು ಬಂಧಿಖಾನೆಗಳೆಷ್ಟು ; ಅವುಗಳು ಯಾವುವು ; (ಖೈದಿಗಳ ಸಾಮರ್ಥ್ಯವಾರು ವಿವರ ನೀಡುವುದು)

(ಆ) ಕಳೆದ ವರ್ಷ ಯಾವ ಯಾವ ಜೈಲುಗಳಲ್ಲಿ ಸಾಮರ್ಥ್ಯಕ್ಕಿಂತ ಅಧಿಕ ಖೈದಿಗಳು ಇದ್ದರು ; ಅವುಗಳು ಯಾವುವು ;

(ಇ) ಹೆಚ್ಚು ಖೈದಿಗಳು ಇದ್ದಲ್ಲಿ ಅವರನ್ನು ಇರಿಸಲು ಯಾವ ಸೂಕ್ತ ಕ್ರಮಗಳನ್ನು ಕೈಗೊಳ್ಳಲಾಗಿತ್ತು ;

(ಈ) ಜೈಲುಗಳಲ್ಲಿರುವ ಪುರುಷ ಮತ್ತು ಮಹಿಳಾ ಖೈದಿಗಳ ಸಂಖ್ಯೆ ಎಷ್ಟು ;

(ಉ) ಜೈಲಿನಲ್ಲಿ ಅಗತ್ಯವಿರುವ ಸಿಬ್ಬಂದಿ ಎಷ್ಟು ; ಇದರಲ್ಲಿ ಮಂಜೂರಾಗಿರುವ ಹುದ್ದೆಗಳು ಹಾಗೂ ಖಾಲಿ ಇರುವ ಹುದ್ದೆಗಳು ಎಷ್ಟು ;

(ಊ) ಕೊರತೆ ಇದ್ದಲ್ಲಿ, ಯಾವ ಕಾರಣಕ್ಕಾಗಿ ಕೊರತೆ ಇದೆ ; ಇದಕ್ಕೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ;

(ಋ) ಜೈಲುಗಳಲ್ಲಿ ಖೈದಿಗಳ ಆರೋಗ್ಯ ತಪಾಸಣೆಗೆ ಅಗತ್ಯವಿರುವ ವೈದ್ಯಕೀಯ ಸಿಬ್ಬಂದಿಗಳ ಸಂಖ್ಯೆ ಎಷ್ಟು ; ಇದರಲ್ಲಿ ಮಂಜೂರಾತಿ ಎಷ್ಟು ; ಕೊರತೆ ಎಷ್ಟು ; ಇದಕ್ಕೆ ಯಾವ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ;

(ಎ) ಖೈದಿಗಳ ತಪಾಸಣೆಗಾಗಿ ೨೦೧೯ರ ಡಿಸೆಂಬರ್ ಅಂತ್ಯಕ್ಕೆ ಇದ್ದ ವೈದ್ಯಕೀಯ ಸಿಬ್ಬಂದಿ ಎಷ್ಟು ? (ಅಂಕಿ ಅಂಶಗಳ ಮಾಹಿತಿ ನೀಡುವುದು)

## ರೈತರ ಕೃಷಿ ಚಟುವಟಿಕೆಗೆ ಸಮರ್ಪಕ ವಿದ್ಯುತ್ ಪೂರೈಸುವ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ):–**

೫೪೯ (೫೭೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ರೈತರ ಕೃಷಿ ಪಂಪ್ ಸೆಟ್‌ಗಳಿಗೆ ವಿದ್ಯುತ್ ಸಂಪರ್ಕವನ್ನು ಒದಗಿಸಲು ಸೂಕ್ತವಾದಂತಹ ಸಮಯವನ್ನು ಸರ್ಕಾರ ನಿಗಧಿ ಮಾಡಿದೆಯೇ;

(ಆ) ಪ್ರಸ್ತುತ ಕೃಷಿ ಚಟುವಟಿಕೆಗೆ ಎಷ್ಟು ಸಮಯ ೩ ಫೇಸ್ ವಿದ್ಯುತ್ ನೀಡಲಾಗುತ್ತಿದೆ;

(ಇ) ಇನ್ನು ಹೆಚ್ಚಿನ ಅವಧಿ ೩ ಫೇಸ್ ವಿದ್ಯುತ್ ನೀಡಿ ರೈತರಿಗೆ ಅನುಕೂಲ ಮಾಡಿಕೊಡಲು ಸರ್ಕಾರ ಆಲೋಚಿಸಿದೆಯೇ;

(ಈ) ರೈತರಿಗೆ ಟ್ರಾನ್ಸ್‌ಫಾರ್ಮರ್ (T.C) ಗಳನ್ನು ಸಮರ್ಪಕವಾಗಿ ಒದಗಿಸುವ ನಿಟ್ಟಿನಲ್ಲಿ ಅಧಿಕಾರಿಗಳಿಂದ ವಿಳಂಬ ಧೋರಣೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಬಂದಿದ್ದಲ್ಲಿ, ಶೀಘ್ರವಾಗಿ ರೈತರಿಗೆ (T.C) ಗಳನ್ನು ವಿತರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ಮಹಿಳೆಯರು, ಹೆಣ್ಣು ಮಕ್ಕಳ ನಾಪತ್ತೆ ಮತ್ತು ಕಳ್ಳ ಸಾಗಾಣಿಕೆ ಪ್ರಕರಣಗಳ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ):–**

೫೫೦ (೫೭೧) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ಐದು ವರ್ಷಗಳಿಂದ ಎಷ್ಟು ಜನ ಮಹಿಳೆಯರು ಮತ್ತು ಹೆಣ್ಣು ಮಕ್ಕಳ ನಾಪತ್ತೆ ಮತ್ತು ಕಳ್ಳ ಸಾಗಾಣಿಕೆ ಪ್ರಕರಣಗಳು ದಾಖಲಾಗಿವೆ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಇದರಲ್ಲಿ ಪತ್ತೆಯಾದ ಪ್ರಕರಣಗಳು ಎಷ್ಟು; ಹಾಗೂ ಪತ್ತೆಯಾಗದ ಪ್ರಕರಣಗಳೆಷ್ಟು; (ವಿವರ ನೀಡುವುದು)

(ಇ) ಪತ್ತೆಯಾಗದ ಪ್ರಕರಣಗಳನ್ನು ಪತ್ತೆ ಹಚ್ಚಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಮಹಿಳೆಯರು ಹಾಗೂ ಹೆಣ್ಣು ಮಕ್ಕಳ ರಕ್ಷಣೆಗೆ ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ಕೆರೆಗಳ ಸಂರಕ್ಷಣೆ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ):–**

೫೫೧ (೫೭೨) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸಣ್ಣ ನೀರಾವರಿ ಇಲಾಖಾ ವ್ಯಾಪ್ತಿಗೆ ಬರುವ ಕೆರೆಗಳ ಸಂಖ್ಯೆ ಎಷ್ಟು ;

(ಆ) ಆ ಕೆರೆಗಳ ಪೈಕಿ ಎಷ್ಟು ಒತ್ತುವರಿಯಾಗಿವೆ; ಒತ್ತುವರಿ ತೆರವಿಗೆ ಸರ್ಕಾರ ಕೈಗೊಂಡ ಕ್ರಮಗಳೇನು;

(ಇ) ಕೆರೆಗಳ ಪುನಃಶ್ಚೇತನಕ್ಕೆ ಯಾವ ಕ್ರಮ ಕೈಗೊಳ್ಳಲಾಗಿದೆ; (ವಿವರ ನೀಡುವುದು)

(ಈ) ಕೆರೆಗಳ ಸಂರಕ್ಷಣೆ ಬಗ್ಗೆ ಇತ್ತೀಚೆಗೆ ಹೈಕೋರ್ಟ್ ಸರ್ಕಾರದಿಂದ ಸಮಗ್ರ ವಿವರವನ್ನು ಸಲ್ಲಿಸಲು ನಿರ್ದೇಶನ ನೀಡಿರುವುದು ನಿಜವೇ;

(ಉ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## N.P.S. ಪಿಂಚಣಿಯ ಸಾಧಕ – ಭಾದಕಗಳ ಪರಿಶೀಲನೆಗೆ ರಚಿಸಿರುವ ಸಮಿತಿ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೫೫೨ (೫೬೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕೆಲಸ ನಿರ್ವಹಿಸುತ್ತಿರುವ ಸರ್ಕಾರಿ ನೌಕರರ ಸಂಖ್ಯೆ ಎಷ್ಟು ;

(ಆ) ಇದರಲ್ಲಿ N.P.S. ಪಿಂಚಣಿ ವ್ಯವಸ್ಥೆಗೆ ಒಳಪಟ್ಟ ನೌಕರರ ಸಂಖ್ಯೆ ಎಷ್ಟು ;

(ಇ) N.P.S. ನ ಸಾಧಕ–ಭಾದಕ ಬಗ್ಗೆ ಪರಿಶೀಲಿಸಿ ವರದಿ ನೀಡಲು ಯಾವಾಗ ಸಮಿತಿಯನ್ನು ರಚಿಸಲಾಯಿತು ; (ಮಾಹಿತಿ ನೀಡುವುದು)

(ಈ) ಈ ಸಮಿತಿಗೆ ಸರ್ಕಾರ ನಿಗದಿಪಡಿಸಿದ ಕಾಲಮಿತಿ ಎಷ್ಟು; ಈ ಸಮಿತಿಯು ಎಷ್ಟು ಸಭೆಗಳನ್ನು ನಡೆಸಿದೆ ;

(ಉ) ಈ ಸಮಿತಿಯು ಸರ್ಕಾರಕ್ಕೆ ವರದಿಯನ್ನು ಸಲ್ಲಿಸಿದೆಯೇ ;

(ಊ) ಇಲ್ಲವಾದಲ್ಲಿ, ಈ ಸಮಿತಿಯ ಬಗ್ಗೆ ಸರ್ಕಾರದ ಸ್ಪಷ್ಟ ನಿಲುವೇನು ;

(ಋ) N.P.S. ರದ್ದು ಪಡಿಸಿ O.P.S ಯೋಜನೆಯನ್ನು ಜಾರಿಗೆ ತರುವಲ್ಲಿ ಸರ್ಕಾರದ ನಿಲುವೇನು ? (ವಿವರ ನೀಡುವುದು)

## ಕೊಡಗು ಜಿಲ್ಲೆಯಲ್ಲಿ ಸಣ್ಣ ಕೈಗಾರಿಕೆಗಳನ್ನು ಆರಂಭಿಸುವ ಬಗ್ಗೆ

**ಶ್ರೀ ಎಂ.ಪಿ. ಸುನೀಲ್ ಸುಬ್ರಮಣಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೫೩ (೫೯೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡಗು ಜಿಲ್ಲೆಯಲ್ಲಿ ಸಣ್ಣ ಕೈಗಾರಿಕೆ ಅಭಿವೃದ್ಧಿಗಾಗಿ ಮತ್ತು ಅದರ ಆಕರ್ಷಣೆಗಾಗಿ ಯಾವುದಾದರೂ ಯೋಜನೆಗಳನ್ನು ಸರ್ಕಾರ ರೂಪಿಸಿದೆಯೇ ; ಹಾಗಿದ್ದಲ್ಲಿ, ಯೋಜನೆಗಳು ಯಾವುವು ; (ವಿವರ ನೀಡುವುದು)

(ಆ) ಕೊಡಗು ಜಿಲ್ಲೆಗೆ ಪೂರಕವಾಗುವಂತೆ ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸಲು ಮತ್ತು ಪೂರಕ ವಾತಾವರಣವನ್ನು ನಿರ್ಮಿಸಲು ಸರ್ಕಾರದ ಕ್ರಮಗಳೇನು ? (ಮಾಹಿತಿ ನೀಡುವುದು)

## ಹಾರಂಗಿ ಜಲಾಶಯದಲ್ಲಿ ಹೂಳು ತುಂಬಿರುವ ಬಗ್ಗೆ

**ಶ್ರೀ ಎಂ.ಪಿ. ಸುನೀಲ್ ಸುಬ್ರಮಣಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೫೪ (೫೯೭) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡಗು ಜಿಲ್ಲೆಯಲ್ಲಿ ಹಾರಂಗಿ ಜಲಾಶಯವನ್ನು ನಿರ್ಮಾಣ ಮಾಡಿದ ವರ್ಷ ಯಾವುದು ; ಮತ್ತು ಇದರ ಒಟ್ಟು ವಿಸ್ತೀರ್ಣ

ಎಷ್ಟು ; ಈ ಜಲಾಶಯದಲ್ಲಿ ಸಂಗ್ರಹಿಸಬಹುದಾದ ನೀರಿನ ಪ್ರಮಾಣ ಎಷ್ಟು ;

(ಆ) ಈ ಜಲಾಶಯಕ್ಕೆ ಪ್ರತಿ ವರ್ಷ ಸೇರುವ ಹೂಳಿನ ಪ್ರಮಾಣವನ್ನು ಅಂದಾಜಿಸಲಾಗಿದೆಯೇ ; ಇದ್ದಲ್ಲಿ ಅದರ ಪ್ರಮಾಣ ಎಷ್ಟು ;

(ಇ) ಈ ಜಲಾಶಯದ ಹೂಳನ್ನು ತೆಗೆಯಲು ಸರ್ಕಾರದ ಮುಂದೆ ಪ್ರಸ್ತಾವನೆಗಳು ಇವೆಯೇ ; ಇದ್ದಲ್ಲಿ ವಿವರ / ಸರ್ಕಾರಿ ಆದೇಶಗಳನ್ನು ನೀಡುವುದು ;

(ಈ) ಈ ಹೂಳು ತೆಗೆಯುವ ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಗುವುದು ? (ವಿವರ ನೀಡುವುದು)

## ಸಚಿವಾಲಯದ ನೌಕರರನ್ನು ಇತರೆ ಇಲಾಖೆಗಳಿಗೆ ಕಳುಹಿಸದಿರುವಂತೆ ನಿಯಮ ಮಾಡುವ ಬಗ್ಗೆ

**ಶ್ರೀ ಎಂ.ಪಿ. ಸುನೀಲ್ ಸುಬ್ರಮಣಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

*೫೫೫* (೬೪೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸಚಿವಾಲಯವು ರಾಜ್ಯದ ರಾಜಧಾನಿಯಲ್ಲಿದ್ದು ಸರ್ಕಾರದ ಮೂಲ ಆದೇಶ ಮತ್ತು ನಿಯಮಗಳನ್ನು ಮಾಡುವ ಮೂಲ ಕೇಂದ್ರವಾಗಿದ್ದು ಇಲ್ಲಿನ ಅಧಿಕಾರಿ/ಸಿಬ್ಬಂದಿಗಳನ್ನು ಬೇರೆ ನಿಗಮ/ ಇಲಾಖೆಗಳಿಗೆ ನಿಯೋಜನೆ ಮೇರೆಗೆ ಕಳುಹಿಸಿದ್ದಲ್ಲಿ ಸಚಿವಾಲಯದ ಕೆಲಸ ಕಾರ್ಯಗಳಿಗೆ ತೊಂದರೆಯಾಗುವುದಿಲ್ಲವೆ; (ವಿವರ ನೀಡುವುದು)

(ಆ) ಸಚಿವಾಲಯದ ಅಧಿಕಾರಿಗಳನ್ನು ಬೇರೆ ಬೇರೆ ಇಲಾಖೆಯ ಮುಖ್ಯಸ್ಥರುಗಳನ್ನಾಗಿ ನೇಮಕ ಮಾಡುತ್ತಿದ್ದು ಇದರಿಂದಾಗಿ ಆಯಾ

ಮಾತ್ರ ಇಲಾಖೆಯ ಸಿಬ್ಬಂದಿ ಮತ್ತು ಅಧಿಕಾರಿಗಳು ಬಡ್ತಿಯಿಂದ ವಂಚಿತರಾಗುವುದಿಲ್ಲವೆ;

(ಇ) ಸಚಿವಾಲಯದ ಸಿಬ್ಬಂದಿ/ಅಧಿಕಾರಿಗಳನ್ನು ನಿಯೋಜನೆ ಮೇರೆಗೆ ಬೇರೆ ಬೇರೆ ಇಲಾಖೆಗಳಿಗೆ ಕಳುಹಿಸದಿರಲು ಸರ್ಕಾರದ ಕಠಿಣ ಕ್ರಮಗಳೇನು; (ಮಾಹಿತಿ ನೀಡುವುದು)

(ಈ) ಈ ಹಿಂದೆ ಬೇರೆ ಇಲಾಖೆಗಳಿಗೆ ನಿಯೋಜನೆ ಮೇಲೆ ತೆರಳಿದ ಅಧಿಕಾರಿಗಳು ಮತ್ತು ಸಚಿವಾಲಯದ ಸೇವೆಗೆ ಹಿಂದಿರುಗಿದಾಗ ಇಲ್ಲಿನ ಜೇಷ್ಠತೆಯಲ್ಲಿ ಕನಿಷ್ಟ ಸ್ಥಾನಕ್ಕೆ ನೀಡಲು ನಿಯಮಗಳನ್ನು ಮಾಡಲು ಸರ್ಕಾರದ ನಿಲುವೇನು ? (ವಿವರ ನೀಡುವುದು)

## ಸಚಿವಾಲಯ ನೌಕರರಿಗೆ ಒಂದೇ ಇಲಾಖೆಯಲ್ಲಿ ಗರಿಷ್ಠ ಸೇವೆಯನ್ನು ನಿಗಧಿ ಪಡಿಸುವ ಬಗ್ಗೆ

**ಶ್ರೀ ಎಂ.ಪಿ. ಸುನೀಲ್ ಸುಬ್ರಮಣಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೫೬ (೬೪೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಿಂದ ಒಂದೇ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಚಿವಾಲಯದ ನೌಕರರುಗಳ ಸಂಖ್ಯೆ ಎಷ್ಟು; ಒಂದೇ ಇಲಾಖೆಯಲ್ಲಿ ಕಾರ್ಯನಿರ್ವಹಿಸುವುದಕ್ಕೆ ಕಾರಣಗಳೇನು; (ವಿವರ ನೀಡುವುದು)

(ಆ) 'ಡಿ' ಗ್ರೂಪ್, ಕಿರಿಯ ಸಹಾಯಕ ಮತ್ತು ಮೇಲ್ಪಟ್ಟ ಹುದ್ದೆಗಳಿಂದ ಬಡ್ತಿ ಪಡೆದ ನಂತರವು ಅದೇ ಇಲಾಖೆಯಲ್ಲಿ ಮುಂದುವರೆಯುತ್ತಿರುವ ನೌಕರರ ಸಂಖ್ಯೆ ಎಷ್ಟು; ಇದಕ್ಕೆ ಕಾರಣಗಳೇನು; (ವಿವರ ನೀಡುವುದು)

(ಇ) ಸಚಿವಾಲಯದ ನೌಕರರುಗಳಿಗೆ ಗರಿಷ್ಠ ಮೂರು ವರ್ಷ ತುಂಬಿದ ನಂತರ ಆಯಾ ಇಲಾಖೆಯಿಂದ ಬೇರೆ ಇಲಾಖೆಗೆ ಕಡ್ಡಾಯ ವರ್ಗಾವಣೆ ಮಾಡಲು ಇರುವ ತೊಡಕುಗಳೇನು? (ವಿವರ ನೀಡುವುದು)

## ಸಚಿವಾಲಯದ ನೌಕರರು ಒಂದೇ ಇಲಾಖೆಯಲ್ಲಿ ದೀರ್ಘಕಾಲದಿಂದ ಇರುವ ಬಗ್ಗೆ

**ಶ್ರೀ ಎಂ.ಪಿ. ಸುನೀಲ್ ಸುಬ್ರಮಣಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೫೭ (೬೪೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸಚಿವಾಲಯದ ನೌಕರರುಗಳಿಗೆ ಒಂದು ಇಲಾಖೆಯಲ್ಲಿ ಗರಿಷ್ಠ ಮೂರು ವರ್ಷಗಳ ಮೇಲ್ಪಟ್ಟು ಮುಂದುವರೆಯುಲು ಯಾವುದಾದರೂ ನಿಯಮಗಳು ಇವೆಯೇ ;

(ಆ) ನೌಕರರುಗಳಿಗೆ ಮೂರು ವರ್ಷಗಳ ನಂತರ ಒಂದು ಇಲಾಖೆಯಿಂದ ಬೇರೊಂದು ಇಲಾಖೆಗೆ ವರ್ಗಾಯಿಸಲು ಇರುವ ತೊಡಕುಗಳೇನು; (ವಿವರ ನೀಡುವುದು)

(ಇ) ಸಚಿವಾಲಯದ ನೌಕರರುಗಳಿಗೆ ಇರುವ ನೀತಿ/ನಿಯಮಗಳ ಕೈಪಿಡಿಯನ್ನು ಒದಗಿಸುವುದು?

## ಕೆರೆಗಳ ದುರಸ್ತಿಗಾಗಿ ಒದಗಿಸಲಾದ ಅನುದಾನ

**ಶ್ರೀ ಸುನೀಲ ವಲ್ಯಾಪುರ್ (ವಿಧಾನ ಸಭೆಯಿಂದ ಚುನಾಯಿತರಾದವರು):–**

೫೫೮ (೫೧೭) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ, ಯಾದಗಿರಿ, ಬೀದರ್ ಜಿಲ್ಲೆಗಳಲ್ಲಿರುವ ಒಟ್ಟು ಕೆರೆಗಳ ಸಂಖ್ಯೆ ಎಷ್ಟು ;

(ಆ) ಅವುಗಳಲ್ಲಿ ದುರಸ್ತಿಯಲ್ಲಿರುವ ಕೆರೆಗಳ ಸಂಖ್ಯೆ ಎಷ್ಟು ;

(ಇ) ೨೦೧೨ ರಿಂದ ೨೦೨೦ನೇ ಸಾಲಿನಲ್ಲಿ ಸಣ್ಣ ನೀರಾವರಿ ಇಲಾಖೆಗೆ ಕೆರೆ ದುರಸ್ತಿಗಾಗಿ ಒದಗಿಸಲಾದ ಅನುದಾನ ಎಷ್ಟು;

(ಈ) ಅನುದಾನ ಸ್ವೀಕೃತವಾಗಿದ್ದರೂ ಕೆರೆ ದುರಸ್ತಿ ಕಾರ್ಯ ಕೈಗೊಳ್ಳದಿರುವುದಕ್ಕೆ ಕಾರಣಗಳೇನು;

(ಉ) ಕೆರೆ ದುರಸ್ತಿಗಾಗಿ ಅನುದಾನ ಸ್ವೀಕೃತವಾಗದೇ ಇದ್ದಲ್ಲಿ, ಅನುದಾನ ಬಿಡುಗಡೆಗೊಳಿಸದಿರಲು ಕಾರಣಗಳೇನು ?

## ವಿಜಯಪುರದಲ್ಲಿ ವಿಮಾನ ನಿಲ್ದಾಣ ನಿರ್ಮಾಣ ಮಾಡುವ ಕುರಿತು

**ಶ್ರೀ ಸುನೀಲ್ ಗೌಡ ಬಸನಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

*೫೪* (೬೦೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಜಯಪುರ ನಗರದಲ್ಲಿ ನಿರ್ಮಾಣ ಮಾಡುತ್ತಿರುವ ವಿಮಾನ ನಿಲ್ದಾಣ ಯೋಜನೆಗೆ ಇದುವರೆಗೆ ಬಿಡುಗಡೆಯಾದ ಅನುದಾನ ಎಷ್ಟು ; (ವಿವರ ನೀಡುವುದು)

(ಆ) ಸದರಿ ಕಾಮಗಾರಿಯು ವಿಳಂಬವಾಗಲು ಕಾರಣವೇನು ; ಅನುದಾನದ ಕೊರತೆ ಏನಾದರೂ ಇದೆಯೇ ; (ವಿವರ ನೀಡುವುದು)

(ಇ) ಸದರಿ ಯೋಜನೆಯ ಕಾಮಗಾರಿಯು ಯಾವ ಹಂತದಲ್ಲಿದೆ ; (ಸಮಗ್ರ ಮಾಹಿತಿಯನ್ನು ನೀಡುವುದು)

(ಈ) ಯಾವ ಕಾಲಮಿತಿಯೊಳಗೆ ವಿಮಾನ ನಿಲ್ದಾಣ ಮಾಡಲಾಗುವುದು ? (ವಿವರ ನೀಡುವುದು)

## ವಿವಿಧ ಇಲಾಖೆಗಳಿಗೆ ಬಿಡುಗಡೆ ಮಾಡಲಾದ ಅನುದಾನದ ಬಗ್ಗೆ

**ಶ್ರೀ ಸುನೀಲ್ ಗೌಡ ಬಸನಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೬೦ (೬೪೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಸಕ್ತ ಸಾಲಿನಲ್ಲಿ ರಾಜ್ಯ ಸರ್ಕಾರವು ವಿವಿಧ ಇಲಾಖೆಗಳಿಗೆ ಬಿಡುಗಡೆ ಮಾಡಿದ ಅನುದಾನ ಎಷ್ಟು ;

(ಆ) ಬಿಡುಗಡೆ ಮಾಡಿದ ಅನುದಾನದಲ್ಲಿ ಇದುವರೆಗೆ ಖರ್ಚು ಮಾಡಿದ ಅನುದಾನ ಎಷ್ಟು ;

(ಇ) ಯಾವ ಯಾವ ಉದ್ದೇಶಗಳಿಗಾಗಿ ಹಣ ಬಿಡುಗಡೆ ಮಾಡಲಾಗಿದೆ ;

(ಈ) ಯಾವ ಯಾವ ಇಲಾಖೆಗಳು ಯಾವ ಯಾವ ಉದ್ದೇಶಕ್ಕಾಗಿ ಎಷ್ಟು ಹಣವನ್ನು ಖರ್ಚು ಮಾಡಿವೆ ;

(ಉ) ಬಯಲು ಸೀಮೆ ಅಭಿವೃದ್ಧಿ ಮಂಡಳಿಗೆ ೨೦೧೮–೧೯ ರಿಂದ ೨೦೨೦–೨೧ನೇ ಸಾಲಿನಲ್ಲಿ ಬಿಡುಗಡೆಯಾದ ಅನುದಾನ ಎಷ್ಟು ;

(ಊ) ಬಯಲು ಸೀಮೆ ಅಭಿವೃದ್ಧಿ ಮಂಡಳಿಗೆ ಹಣ ಬಿಡುಗಡೆ ಮಾಡದಿರಲು ಕಾರಣವೇನು ;

(ಋ) ಬಯಲು ಸೀಮೆ ಅಭಿವೃದ್ಧಿ ಮಂಡಳಿಯಿಂದ ವಿಜಯಪುರ–ಬಾಗಲಕೋಟೆ ಜಿಲ್ಲೆಗಳಿಗೆ ಬಿಡುಗಡೆಯಾದ ಅನುದಾನ ಎಷ್ಟು ; (ವಿವರಗಳನ್ನು ನೀಡುವುದು)

(ಎ) ಬಂಯುಲು ಸೀಮೆ ಅಭಿವೃದ್ಧಿ ಮಂಡಳಿಗೆ ಪ್ರಸ್ತುತ ಬಿಡುಗಡೆಯಾಗಬೇಕಿರುವ ಅನುದಾನ ಎಷ್ಟು ; ಸದರಿ ಅನುದಾನವನ್ನು ಯಾವ ಕಾಲಮಿತಿಯೊಳಗೆ ಬಿಡುಗಡೆ ಮಾಡಲಾಗುವುದು ?

## ರಾಜ್ಯದಲ್ಲಿ ಹೆಚ್ಚುತ್ತಿರುವ ಅಪರಾದ ಪ್ರಕರಣಗಳ ಬಗ್ಗೆ

**ಶ್ರೀ ಸುನೀಲ್ ಗೌಡ ಬಸನಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೬೧ (೬೩೭) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಆಗಸ್ಟ್ ೧, ೨೦೧೯ ರಿಂದ ಪ್ರಸ್ತುತ ದಿನಾಂಕದವರೆಗೆ ರಾಜ್ಯದಲ್ಲಿ ದಾಖಲಾದ ವಿವಿಧ ಅಪರಾಧ ಪ್ರಕರಣಗಳ ಸಂಖ್ಯೆ ಎಷ್ಟು ; (ಪ್ರಕರಣವಾರು ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿ ಅಪರಾದ ಪ್ರಕರಣಗಳು ಹೆಚ್ಚುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅವುಗಳನ್ನು ತಡೆಗಟ್ಟಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ; (ವಿವರ ನೀಡುವುದು)

(ಇ) C.C.I.S. (Crime Criminal Information System) ನಲ್ಲಿ ಯಾವ ವರ್ಷದಿಂದ ಮಾಹಿತಿಯನ್ನು ದಾಖಲು ಮಾಡಲಾಗುತ್ತಿದೆ ಮತ್ತು ಇಲ್ಲಿಯವರೆಗೆ, ಯಾವ ವರ್ಷದವರೆಗೆ ದಾಖಲೆಗಳನ್ನು ದಾಖಲು ಮಾಡಲಾಗಿದೆ ? (ಜಿಲ್ಲಾವಾರು, ಠಾಣೆವಾರು ಮಾಹಿತಿ ನೀಡುವುದು)

## ವಿದ್ಯುತ್ ಉತ್ಪಾದನೆ ಬಗ್ಗೆ

**ಶ್ರೀ ಸುನೀಲ್ ಗೌಡ ಬಸನಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೬೨ (೬೩೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸರ್ಕಾರ ಮತ್ತು ಸರ್ಕಾರೇತರ ಸಂಸ್ಥೆಗಳಿಂದ ಉತ್ಪಾದನೆ ಮಾಡುತ್ತಿರುವ ಒಟ್ಟು ವಿದ್ಯುತ್ ಉತ್ಪಾದನೆ ಎಷ್ಟು ;

(ಆ) ನವೀಕರಿಸಬಹುದಾದ ವಿವಿಧ ಇಂಧನ ಮೂಲಗಳಾದ ಪವನ ವಿದ್ಯುತ್ ಯೋಜನೆ ಸೌರ ವಿದ್ಯುತ್ ಯೋಜನೆ ಜಲ ವಿದ್ಯುತ್ ಯೋಜನೆಗಳು ರಾಜ್ಯದ ಯಾವ ಯಾವ ಭಾಗಗಳಲ್ಲಿ ಪ್ರಸ್ತುತ ಚಾಲ್ತಿಯಲ್ಲಿವೆ ;

(ಇ) ಈ ಯೋಜನೆಗಳಿಂದ ಎಷ್ಟು ಪ್ರಮಾಣದ ವಿದ್ಯುತ್ ಉತ್ಪಾದನೆ ಮಾಡಲಾಗುತ್ತಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಉತ್ಪಾದನೆಯಾದ ವಿದ್ಯುತ್‌ಚ್ಛಕ್ತಿಯನ್ನು ಯಾವ ಬೆಲೆಯಲ್ಲಿ ಮಾರಾಟ ಮಾಡಲಾಗುತ್ತಿದೆ ; ಕಳೆದ ೦೩ ವರ್ಷಗಳಿಂದ ಈ ಉತ್ಪಾದನೆಯಿಂದ ಸರ್ಕಾರಕ್ಕೆ ಎಷ್ಟು ಪ್ರಮಾಣದ ಆದಾಯ ಬಂದಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಉ) ಸೌರ ವಿದ್ಯುತ್ ಯೋಜನೆಯ ಸಂಪೂರ್ಣ ಮಾಹಿತಿ ನೀಡುವುದು ?

## ಕೃಷ್ಣಾ ಮೇಲ್ದಂಡೆ ಯೋಜನೆಯ ಕುರಿತು

**ಶ್ರೀ ಸುನೀಲ್ ಗೌಡ ಬಸನಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೬೩ (೬೩೫) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉತ್ತರ ಕರ್ನಾಟಕದ ಮಹತ್ವದ ಕೃಷ್ಣಾ ಮೇಲ್ದಂಡೆ ಯೋಜನೆಯ ಮೂರನೆಯ ಹಂತದ ಯೋಜನೆಯು ವಿಳಂಭವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ತ್ವರಿತವಾಗಿ ಈ ಯೋಜನೆಯನ್ನು ಜಾರಿಗೆ ತರಲು ಸರ್ಕಾರ ಕೈಗೊಂಡ ಕ್ರಮಗಳೇನು ; ಮತ್ತು ಕೈಗೊಳ್ಳುತ್ತಿರುವ ಕ್ರಮಗಳೇನು ;

(ಇ) ಸದರಿ ಯೋಜನೆಗೆ ಬಜೆಟ್‌ನಲ್ಲಿ ಮೀಸಲಿಟ್ಟ ಅನುದಾನವೆಷ್ಟು ;

(ಈ) ಮಹದಾಯಿ ಯೋಜನೆಯಂತೆ, ಕೃಷ್ಣಾ ಮೇಲ್ದಂಡೆ ಮೂರನೇ ಹಂತದ ಯೋಜನೆಯ ಗೆಜೆಟ್ ನೋಟಿಫಿಕೇಷನ್ ಪ್ರಕಟಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ ; ಇದ್ದಲ್ಲಿ, ಕೈಗೊಂಡ ಕ್ರಮಗಳೇನು ;

(ಉ) ಇಲ್ಲವಾದಲ್ಲಿ, ಮಹದಾಯಿ ಯೋಜನೆಗೆ ಗೆಜೆಟ್ ನೋಟಿಫಿಕೇಷನ್ ಪ್ರಕಟಸಿದಂತೆ ಇದನ್ನು ಪ್ರಕಟಿಸಲು ಕ್ರಮ ಕೈಗೊಳ್ಳಲಾಗುವುದೇ ?

## ಮುಂಬಡ್ತಿ ಆದೇಶಗಳಲ್ಲಿನ ಗೊಂದಲಗಳು

**ಶ್ರೀ ಆರ್.ಬಿ. ತಿಮ್ಮಾಪೂರ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೫೬೪ (೪೯೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮುಂಬಡ್ತಿಯಲ್ಲಿ ಮೀಸಲಾತಿ ಸಂಬಂಧ ಪವಿತ್ರ ಪ್ರಕರಣಕ್ಕೂ ಮೊದಲು ಮತ್ತು ಸರ್ವೋಚ್ಛ ನ್ಯಾಯಾಲಯದ ಆದೇಶದ ನಂತರ ಹೊರಡಿಸದಲಾದ ಆದೇಶಗಳು ಯಾವುವು ; (ಆದೇಶದ ಪ್ರತಿಗಳನ್ನು ಲಗತ್ತಿಸುವುದು)

(ಆ) ದಿನಾಂಕ : ೧೩-೦೪-೧೯೯೭ರ ಆದೇಶದಲ್ಲಿ ಪ್ರಾತಿನಿಧ್ಯ ಪ್ರಮಾಣವನ್ನು ಅನುಸರಿಸುವಂತೆ ತಿಳಿಸಿದ್ದು, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ ಅಭಿಪ್ರಾಯ ನೀಡುವಾಗ ಬಡ್ತಿ ಬಿಂದುಗಳನ್ನೇ ಅನುಸರಿಸಬೇಕೆಂಬ ಗೊಂದಲ ಮೂಡಿಸುತ್ತಿರುವುದು ಸೂಕ್ತವೇ ;

(ಇ) ಪ್ರಾತಿನಿಧ್ಯ ಪ್ರಮಾಣದನ್ವಯ ಪವಿತ್ರ ಪ್ರಕರಣಕ್ಕೂ ಮೊದಲೇ ಮುಂಬಡ್ತಿ ಹೊಂದಿದ್ದು, ಪವಿತ್ರ ಪ್ರಕರಣದ ನಂತರ ಮುಂಬಡ್ತಿ ಅಂದರೆ, ಸರ್ವೋಚ್ಚ ನ್ಯಾಯಾಲಯದ ಆದೇಶದ ನಂತರ ಜ್ಯೇಷ್ಠತೆಯ ಯಥಾಸ್ಥಿತಿಯನ್ನು ಕಾಪಾಡಿ, ಮುಂದಿನ ಹುದ್ದೆಗೆ ಮುಂಬಡ್ತಿ ನೀಡದೆ, ಹಿಂದಿನ ಜ್ಯೇಷ್ಠತೆಯಿಂದ ಕೆಳಗೆ ಇಳಿಸಿ ಸಾಮಾನ್ಯ ವರ್ಗದವರನ್ನು ಮುಂಬಡ್ತಿಗೆ ಪರಿಗಣಿಸಿರುವುದು ಸರಿಯೇ ;

(ಈ) ಯಾವುದೇ ಒಂದು ವೃಂದದಲ್ಲಿ ಅರ್ಹತೆ ಇದ್ದರೂ ಮುಂಬಡ್ತಿಯಲ್ಲಿ ಪರಿಶಿಷ್ಟ ಜಾತಿಯವರ ಶೇಕಡಾ ೧೫ರ ಪ್ರಾತಿನಿಧ್ಯ ಉಳಿಸಿಕೊಳ್ಳದೆ, ರೋಸ್ಟರ್‌ನ ಎಲ್ಲಾ ಬಿಂದುಗಳಿಗೂ ಸಾಮಾನ್ಯ ವರ್ಗದವರಿಗೆ ಮುಂಬಡ್ತಿಗಳನ್ನು ನೀಡುತ್ತಾ ಹೋಗಬಹುದೇ ; ಇದರಿಂದ ಪರಿಶಿಷ್ಟ ಜನಾಂಗದ ನೌಕರರಿಗೆ ಅನ್ಯಾಯವಾಗುವುದಿಲ್ಲವೇ ?

## ಇಂಧನ ಇಲಾಖೆಗೆ ಒದಗಿಸಲಾದ ಅನುದಾನ

**ಶ್ರೀ ಆರ್.ಬಿ. ತಿಮ್ಮಾಪೂರ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೫೬೫ (೪೯೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಇಂಧನ ಇಲಾಖೆಗೆ ಯಾವ ಶೀರ್ಷಿಕೆಯಡಿ ೨೦೧೩ ರಿಂದ ೨೦೨೦ರವರೆಗೆ ಎಷ್ಟು ಅನುದಾನವನ್ನು ಒದಗಿಸಲಾಗಿದೆ ; ಇದರಲ್ಲಿ ವಿವಿಧ ಯೋಜನೆಗಳಿಗೆ ಖರ್ಚು ಮಾಡಲಾದ ಹಣವೆಷ್ಟು ; (ವರ್ಷವಾರು, ಜಿಲ್ಲಾವಾರು ಮಾಹಿತಿಯನ್ನು ಒದಗಿಸುವುದು)

(ಆ) ಇಂಧನ ಇಲಾಖೆಯ ಗುತ್ತಿಗೆಗಳಲ್ಲಿ ಮೀಸಲಾತಿ ನಿಯಮಗಳನ್ನು ಪಾಲಿಸಲಾಗಿದೆಯೇ ; ಇದರನ್ವಯ ಯಾವ ಯಾವ ಜಿಲ್ಲೆಗಳಲ್ಲಿ ಯಾವ ಯಾವ ಕಾಮಗಾರಿಗಳನ್ನು ಗುತ್ತಿಗೆ ನೀಡಲಾಗಿದೆ ?

## ನೀರಾವರಿ ಯೋಜನೆಗಳು

**ಶ್ರೀ ಆರ್.ಬಿ. ತಿಮ್ಮಾಪೂರ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೬೬೬ (೪೯೭) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೩ ರಿಂದ ೨೦೨೦ರವರೆಗೆ ರಾಜ್ಯದಲ್ಲಿ ನೀರಾವರಿ ಯೋಜನೆಗಳಿಗಾಗಿ ಯಾವ ಶೀರ್ಷಿಕೆಯಡಿ ಎಷ್ಟು ಹಣವನ್ನು ಬಿಡುಗಡೆ ಮಾಡಲಾಗಿದೆ ; ಈ ಪೈಕಿ ಖರ್ಚಾಗದೇ ಉಳಿದ ಹಣವೆಷ್ಟು ; (ವರ್ಷವಾರು ಯೋಜನಾವಾರು, ಜಿಲ್ಲಾವಾರು ಮಾಹಿತಿಗಳನ್ನು ಒದಗಿಸುವುದು)

(ಆ) ಯಾವ ಯಾವ ಯೋಜನೆಗಳಲ್ಲಿ ದುರಸ್ಥಿ ಕಾರ್ಯಗಳಿಗಾಗಿ ಹಣ ಬಳಕೆ ಮಾಡಲಾಗಿದೆ ? (ಮಾಹಿತಿ ಒದಗಿಸುವುದು)

## ಗುತ್ತಿಗೆ ಆಧಾರದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಆಪ್ತ ಸಹಾಯಕರಿಗೆ ವೇತನ ಪಾವತಿಯಾಗದಿರುವ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೬೭ (೫೧೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಶಾಸಕರು, ವಿಧಾನ ಪರಿಷತ್ ಸದಸ್ಯರ ಆಪ್ತ ಸಹಾಯಕರಾಗಿ ಜಿಲ್ಲಾಧಿಕಾರಿಗಳ ಕಛೇರಿ ಮೂಲಕ ನೇಮಕಗೊಂಡು, ಗುತ್ತಿಗೆ ಆಧಾರದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವವರಿಗೆ ಆಗಸ್ಟ್–೨೦೨೦ರ ಮಾಹೆವರೆಗಿನ ವೇತನ ಪಾವತಿ ಆಗಿದೆಯೇ ;

(ಆ) ಆಗದಿದ್ದಲ್ಲಿ, ಎಷ್ಟು ತಿಂಗಳ ವೇತನ ಬಾಕಿಯಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಈ ರೀತಿ ಸಕಾಲದಲ್ಲಿ ವೇತನ ಪಾವತಿಯಾಗದೆ, ಅನಗತ್ಯ ವಿಳಂಬವಾಗಲು ಕಾರಣಗಳೇನು ;

(ಈ) ಬಾಕಿ ಇರುವ ಸಂಪೂರ್ಣ ವೇತನವನ್ನು ಯಾವ ಕಾಲಮಿತಿಯೊಳಗೆ ಇವರಿಗೆ ಪಾವತಿಸಲಾಗುವುದು ?

## ಕೊಡಗು ಜಿಲ್ಲೆಯಲ್ಲಿನ ನದಿಗಳಲ್ಲಿ ತುಂಬಿರುವ ಹೂಳು ತೆಗೆಯುವ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೬೮ (೫೧೩) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ಕೊಡಗು ಜಿಲ್ಲೆಯಲ್ಲಿ ಸುರಿದ ಧಾರಾಕಾರ ಮಳೆ ಹಾಗೂ ಭೂಕುಸಿತದಿಂದಾಗಿ, ನದಿಗಳಲ್ಲಿ ಸಾಕಷ್ಟು ಹೂಳು

ತುಂಬಿ ಅವುಗಳ ಸರಾಗ ಹರಿವಿಗೆ ಧಕ್ಕೆಗಾಗಿ, ಅಕ್ಕಪಕ್ಕದ ಸಾಗುವಳಿ ಜಮೀನು ಕೊಚ್ಚಿಕೊಂಡು ಹೋಗುವ ಮೂಲಕ ರೈತರು ಸಂಕಷ್ಟಕೀಡಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸದರಿ ನದಿಗಳಲ್ಲಿನ ಹೂಳನ್ನು ಇನ್ನೂ ತೆಗೆಯದಿರಲು ಕಾರಣಗಳೇನು ;

(ಇ) ಪ್ರಸಕ್ತ ಆರ್ಥಿಕ ವರ್ಷದಲ್ಲಿ ಈ ಕಾಮಗಾರಿಗೆ ಅನುದಾನವನ್ನು ಒದಗಿಸಲಾಗಿದೆಯೇ ; ಒದಗಿಸಿದ್ದಲ್ಲಿ, ಮಂಜೂರಾದ ಹಾಗೂ ಬಿಡುಗಡೆಯಾಗಿರುವ ಅನುದಾನದ ಸಂಪೂರ್ಣ ವಿವರಗಳನ್ನು ನೀಡುವುದು ;

(ಈ) ಜಿಲ್ಲೆಯಲ್ಲಿ, ನದಿಗಳಲ್ಲಿನ ಹೂಳು ತೆಗೆಯುವ ಕಾಮಗಾರಿಯನ್ನು ಪ್ರಸಕ್ತ ವರ್ಷದಲ್ಲೇ ಅನುಷ್ಠಾನಗೊಳಿಸಲಾಗುವುದೇ ?

## ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೬೯ (೫೧೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯ ಹಲವಾರು ಕಂತುಗಳ ಅನುದಾನ ಬಿಡುಗಡೆಯಾಗದಿರುವುದರಿಂದ ಪ್ರಗತಿ ಕುಂಠಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸದರಿ ಅನುದಾನವನ್ನು ಸಕಾಲದಲ್ಲಿ ಬಿಡುಗಡೆ ಮಾಡದಿರಲು ಕಾರಣಗಳೇನು ;

(ಇ) ೨೦೧೮–೧೯, ೨೦೧೯–೨೦ ಮತ್ತು ೨೦೨೦–೨೧ನೇ ಸಾಲಿನಲ್ಲಿ ಪ್ರತಿಯೊಬ್ಬ ಶಾಸಕರಿಗೆ ಬಿಡುಗಡೆಯಾಗಿರುವ ಅನುದಾನದ ವಿವರಗಳನ್ನು ವರ್ಷವಾರು ನೀಡುವುದು ;

(ಈ) ಬಾಕಿ ಇರುವ ಅನುದಾನವನ್ನು ಬಿಡುಗಡೆಗೊಳಿಸಲಾಗುವುದೇ ; ಇದ್ದಲ್ಲಿ, ಯಾವ ಕಾಲಮಿತಿಯೊಳಗೆ ಬಿಡುಗಡೆ ಗೊಳಿಸಲಾಗುವುದು ?

## ರಾಜ್ಯದಲ್ಲಿ ಡ್ರಗ್ಸ್ ಮಾರಾಟ ದಂಧೆಗೆ ಕಡಿವಾಣ ಹಾಕುವ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೭೦ (೫೧೧) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಡ್ರಗ್ಸ್ ಮಾರಾಟ ದಂಧೆ ಅವ್ಯಾಹತವಾಗಿ ನಡೆಯುತ್ತಿರುವುದು ಹಾಗೂ ಇದರಿಂದಾಗಿ ಹಲವಾರು ಬಾರಿ ಕಾನೂನು ಸುವ್ಯವಸ್ಥೆಗೆ ಭಂಗ ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಡ್ರಗ್ಸ್ ಮಾರಾಟ ದಂಧೆ ಜಾಲವನ್ನು ಬೇಧಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ರಾಜ್ಯದಲ್ಲಿ ೨೦೧೮–೧೯, ೨೦೧೯–೨೦ ಮತ್ತು ೨೦೨೦–೨೧ನೇ ಸಾಲಿನಲ್ಲಿ ಡ್ರಗ್ಸ್ ಮಾರಾಟ ದಂಧೆಯ ಎಷ್ಟು ಪ್ರಕರಣಗಳು ವರದಿಯಾಗಿವೆ ;

(ಈ) ಕಳೆದ ೩ ವರ್ಷಗಳಲ್ಲಿ ಡ್ರಗ್ಸ್ ಮಾರಾಟ ದಂಧೆಯಲ್ಲಿ ಭಾಗಿಯಾಗಿರುವ ಎಷ್ಟು ವಿದೇಶಿಯರ ವಿರುದ್ಧ ಪ್ರಕರಣಗಳು ದಾಖಲಾಗಿವೆ ; ಹಾಗೂ ಅಂಥವರ ವಿರುದ್ಧ ಕೈಗೊಂಡಿರುವ ಕ್ರಮಗಳೇನು ?

## ಕೊಡಗು ಜಿಲ್ಲೆಯಲ್ಲಿ ಸಣ್ಣ ನೀರಾವರಿ ಇಲಾಖೆಯ ಕಾಮಗಾರಿಗಳ ಅನುಷ್ಠಾನ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೭೧ (೫೧೦) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡಗು ಜಿಲ್ಲೆಯಲ್ಲಿ ಕಳೆದ ೩ ವರ್ಷಗಳಲ್ಲಿ ಸಣ್ಣ ನೀರಾವರಿ ಇಲಾಖೆಗೆ ಮಂಜೂರಾದ, ಬಿಡುಗಡೆಯಾಗಿರುವ ಮತ್ತು ಖರ್ಚಾದ ಅನುದಾನವೆಷ್ಟು ; (ವರ್ಷವಾರು ಹಾಗೂ ಕಾಮಗಾರಿವಾರು ಮಾಹಿತಿ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ಎಷ್ಟು ಕಾಮಗಾರಿಗಳನ್ನು ಅನುಷ್ಠಾನಗೊಳಿಸಲಾಗಿದೆ ; ಹಾಗೂ ಪ್ರತಿ ಕಾಮಗಾರಿಗೆ ವ್ಯಯಿಸಿರುವ ಅನುದಾನವೆಷ್ಟು ? (ವಿವರಗಳನ್ನು ಕಾಮಗಾರಿವಾರು ನೀಡುವುದು)

## ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆ ಕುರಿತು

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೭೨ (೫೩೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೮–೧೯, ೨೦೧೯–೨೦ನೇ ಸಾಲಿನಲ್ಲಿ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆ ಅಡಿ ಎಷ್ಟು ಅನುದಾನವನ್ನು ಬಿಡುಗಡೆ ಮಾಡಲಾಗಿದೆ ; (ವಿವರ ನೀಡುವುದು)

(ಆ) ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆ ಅಡಿ ಅನುದಾನವನ್ನು ಬಿಡುಗಡೆ ಮಾಡದಿರಲು ಕಾರಣವೇನು ; ಇದರಿಂದ ಅಭಿವೃದ್ಧಿ ಕಾಮಗಾರಿಗಳು ಕುಂಠಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಅನುದಾನ ಬಿಡುಗಡೆ ಮಾಡಲು ಸರ್ಕಾರ ಯಾವ ಕ್ರಮವನ್ನು ಕೈಗೊಂಡಿದೆ ?

## ಬೀದರ್ ಜಿಲ್ಲೆಯಲ್ಲಿ ಕೆರೆಗಳ ಹೂಳೆತ್ತುವ ಕುರಿತು

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೭೩ (೫೩೨) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ಕೆರೆಗಳ ಹೂಳೆತ್ತುವ ಕಾಮಗಾರಿಗಳಿಗೆ ಕಳೆದ ನಾಲ್ಕು ವರ್ಷಗಳಲ್ಲಿ ಬಿಡುಗಡೆಯಾದ ಅನುದಾನ ಎಷ್ಟು ; ಎಷ್ಟು ಕೆರೆಗಳ ಹೂಳೆತ್ತುವ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗಿದೆ ;

(ಆ) ಬೀದರ್ ಜಿಲ್ಲೆಯ ಎಷ್ಟು ಕೆರೆಗಳ ಹೂಳೆತ್ತುವ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗಿದೆ ; ಉದ್ಯೋಗ ಖಾತ್ರಿ ಅನುದಾನ ಬಿಟ್ಟು ಪ್ರತ್ಯೇಕವಾಗಿ ಎಷ್ಟು ಅನುದಾನ ಖರ್ಚು ಮಾಡಲಾಗಿದೆ ; (ಪ್ರತಿ ಕೆರೆಯ ಪ್ರತ್ಯೇಕ ಮಾಹಿತಿ ನೀಡುವುದು)

(ಇ) ಕೆರೆಗಳ ಹೂಳೆತ್ತುವ ಕಾಮಗಾರಿಗಳಲ್ಲಿ ಉದ್ಯೋಗ ಖಾತ್ರಿ ಯೋಜನೆಯಿಂದಲೂ ಹಣ ಪಾವತಿಸಲಾಗಿದೆಯೇ ; ಹಾಗಿದ್ದಲ್ಲಿ, ಪ್ರತಿ ಕೆರೆಗೆ ಖರ್ಚಾದ ಅನುದಾನ ಎಷ್ಟು ? (ಪ್ರತಿ ಕೆರೆಯ ಮಾಹಿತಿ ನೀಡುವುದು)

## ಬೀದರ್ ಜಿಲ್ಲೆಯಲ್ಲಿ ಕೊಳವೆ ಬಾವಿ ಕೊರೆಯಲು ನಿಷೇಧ ಮಾಡಿರುವ ಕುರಿತು

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೭೪ (೫೩೩) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಎರಡು ವರ್ಷಗಳಿಂದ ಬೀದರ್ ಜಿಲ್ಲೆಯಲ್ಲಿ ಕೊಳವೆ ಬಾವಿ ಕೊರೆಯಲು ನಿಷೇಧ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಯಾವ ಆಧಾರದ ಮೇಲೆ ಈ ನಿಷೇಧವನ್ನು ಮಾಡಲಾಗಿದೆ ; ಇದರಿಂದ ಜನ ಸಾಮಾನ್ಯರಿಗೆ ಹಾಗೂ ರೈತರಿಗೆ ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರದ ನಿಲುವೇನು ?

## ಬೀದರ್ ಜಿಲ್ಲೆಯ ಕಾರಂಜಾ ಜಲಾಶಯ ಕುರಿತು

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೭೫ (೫೩೪) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯ ಕಾರಂಜಾ ಜಲಾಶಯದಲ್ಲಿ ಸಂಗ್ರಹವಾಗಿರುವ ನೀರಿನ ಪ್ರಮಾಣ ಎಷ್ಟು ; ಕಳೆದ ಹತ್ತು ವರ್ಷಗಳಲ್ಲಿ ಕಾರಂಜಾ ಜಲಾಶಯದ ನೀರಿನ ಬಳಕೆಯೆಷ್ಟು ; (ಕುಡಿಯುವ ನೀರು ಹಾಗೂ ಕೃಷಿ ಬಳಕೆಯ ನೀರಿನ ವಿವರ ನೀಡುವುದು)

(ಆ) ಬೀದರ್ ಜಿಲ್ಲೆಯ ಕಾರಂಜಾ ಜಲಾಶಯದಲ್ಲಿ ನೀರು ಸಂಗ್ರಹಣೆ ಕುಂಠಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಕಾರಂಜಾ ಜಲಾಶಯಕ್ಕೆ ಕೃಷ್ಣ ಅಥವಾ ಗೋದಾವರಿ ನದಿಯ ನೀರನ್ನು ಹರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಇ) ಬೀದರ್ ಜಿಲ್ಲೆಯ ಕಾರಂಜಾ ಜಲಾಶಯದ ನಿರ್ವಹಣೆಗೆ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ; ಇದರಲ್ಲಿ ಖರ್ಚಾದ ಅನುದಾನ ಎಷ್ಟು ? (ವಿವರ ನೀಡುವುದು)

## ಸರ್ಕಾರದ ವಿವಿಧ ಇಲಾಖೆಗಳಲ್ಲಿನ ಸರ್ಕಾರಿ ನೌಕರರ ಬಗ್ಗೆ

**ಶ್ರೀ ಯು.ಬಿ. ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು) :–**

೫೭೬ (೧೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ಸರ್ಕಾರದ ವಿವಿಧ ಇಲಾಖೆಗಳಲ್ಲಿನ ಒಟ್ಟು ಸರ್ಕಾರಿ ಅಧಿಕಾರಿ/ನೌಕರರ ಸಂಖ್ಯೆ ಎಷ್ಟು ; (ಎ.ಬಿ.ಸಿ.ಡಿ ದರ್ಜೆಯ ಹುದ್ದೆಗಳ ವಿವರಗಳನ್ನು ಪ್ರತ್ಯೇಕವಾಗಿ ನೀಡುವುದು)

(ಆ) ಸದರಿ ಹುದ್ದೆಗಳಲ್ಲಿ ಭರ್ತಿಯಾಗಿರುವ ಹುದ್ದೆಗಳು ಹಾಗೂ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; ಎಂದಿನಿಂದ ಖಾಲಿ ಉಳಿದಿವೆ;

(ಇ) ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡದೇ ಇರುವುದರಿಂದ ಸಾರ್ವಜನಿಕರಿಗೆ ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ನಿಗದಿತ ಕಾಲಾವಧಿಯಲ್ಲಿ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದೇ ?

## 'ಜಿ' ಕೆಟಗರಿ ನಿವೇಶನಗಳ ನೋಂದಣಿ ಕುರಿತು

**ಶ್ರೀ ಯು.ಬಿ. ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು) :–**

೫೭೭ (೧೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) 'ಜಿ' ಕೆಟಗರಿ ನಿವೇಶನಗಳನ್ನು ಕಾನೂನು ಬಾಹಿರವಾಗಿ ನೋಂದಣಿ ಮಾಡಿಕೊಟ್ಟಿರುವ ಆರೋಪದ ಹಿನ್ನೆಲೆಯಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಎಷ್ಟು ಅಧಿಕಾರಿಗಳ ವಿರುದ್ಧ ಶಿಸ್ತುಕ್ರಮ ಕೈಗೊಂಡಿದೆ ;

(ಆ) ಕೈಗೊಂಡಿದ್ದಲ್ಲಿ, ಕಳೆದ ಮೂರು ವರ್ಷಗಳಲ್ಲಿ ಶಿಸ್ತುಕ್ರಮಕ್ಕೆ ಒಳಗಾಗಿರುವ ಅಧಿಕಾರಿಗಳ ಹೆಸರು ಮತ್ತು ಆರೋಪದ ವಿವರಗಳನ್ನು ನೀಡುವುದು ?

## ಬೆಂಗಳೂರು ನಗರದಲ್ಲಿ ವಸತಿ ಉದ್ದೇಶದ ಬಡಾವಣೆಗಳ ಕುರಿತು

**ಶ್ರೀ ಯು.ಬಿ. ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು) :–**

೫೭೮ (೧೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರದಲ್ಲಿ ವಸತಿ ಉದ್ದೇಶಕ್ಕೆ ನಿರ್ಮಾಣಗೊಂಡ ಬಡಾವಣೆಗಳು ವಸತಿಯೇತರ ಬಡಾವಣೆಗಾಗಿ ಪರಿವರ್ತನೆಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಆ ಬಡಾವಣೆಗಳು ಯಾವುವು ;

(ಆ) ಈ ರೀತಿ ವಸತಿಯಿಂದ ವಸತಿಯೇತರಕ್ಕೆ ಪರಿವರ್ತನೆಗೊಂಡ ಸಂದರ್ಭದಲ್ಲಿ ಸರ್ಕಾರಕ್ಕೆ ಪಾವತಿಸಬೇಕಾದ ತೆರಿಗೆಯನ್ನು

ವಂಚಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಪ್ರಕರಣಗಳ ಸಂಖ್ಯೆ ಎಷ್ಟು ;

(ಇ) ಇದರಿಂದ ಸರ್ಕಾರದ ಬೊಕ್ಕಸಕ್ಕೆ ಆಗಿರುವ ಹಾನಿ ಎಷ್ಟು ಮತ್ತು ಸರ್ಕಾರ ಕೈಗೊಂಡ ಕ್ರಮಗಳೇನು ?

## ಕೊರೋನಾ ವೈರಸ್ ಸೋಂಕಿಗೆ ಒಳಗಾದ ಪೊಲೀಸರ ಸಂಖ್ಯೆ ಕುರಿತು

**ಶ್ರೀ ಯು.ಬಿ. ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು) :–**

೫೭೭ (೧೪) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯದಲ್ಲಿ ಕೊರೋನಾ ವೈರಸ್ ಸೋಂಕಿಗೆ ಒಳಗಾದ ಮತ್ತು ಸಾವಿಗೀಡಾದ ಪೊಲೀಸರ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸರ್ಕಾರದಿಂದ ಪೊಲೀಸರಿಗೆ ಒದಗಿಸಲಾದ ಸುರಕ್ಷಾ ಸಾಮಗ್ರಿಗಳಾವುವು; ಸಾವಿಗೀಡಾದ ಪೊಲೀಸರ ಕುಟುಂಬಸ್ಥರಿಗೆ ಸರ್ಕಾರದಿಂದ ಒದಗಿಸಿರುವ ವಿವಿಧ ಸೌಲಭ್ಯಗಳಾವುವು ?

## ದೂರದರ್ಶನದಲ್ಲಿ ಮಕ್ಕಳ ಕಲಿಕೆಗೆ ಅನುಕೂಲ ಮಾಡಿಕೊಡುವ ಬಗ್ಗೆ

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–**

೫೮೦ (೬೬೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ದೂರದರ್ಶನದಲ್ಲಿ ಮಕ್ಕಳ ಕಲಿಕೆಗೆ ಸಂಬಂಧಪಟ್ಟಂತೆ ಸರ್ಕಾರ ತೆಗೆದುಕೊಂಡ ನಿಲುವೇನು ;

(ಆ) ವಿಶೇಷವಾಗಿ ಕೆಲವು ಶಾಲಾ ತರಗತಿಗಳನ್ನು ದೂರದರ್ಶನದಲ್ಲಿ ನಡೆಸುವ ಕುರಿತು ಸರ್ಕಾರದ ಚಿಂತನೆಗಳೇನು ;

(ಇ) ಹಾಗಿದ್ದಲ್ಲಿ, ಯಾವಾಗಿನಿಂದ ಈ ಯೋಜನೆಯನ್ನು ಆರಂಭಿಸುವ ಚಿಂತನೆ ಸರ್ಕಾರಕ್ಕಿದೆ ಮತ್ತು ಯಾವ ರೀತಿಯಲ್ಲಿ ಕಾರ್ಯರೂಪಕ್ಕೆ ತರಲಾಗುವುದು ?

## ಸ್ಟೈಫೆಂಡರಿ ಪದವೀಧರರ ಸೇವೆಯನ್ನು ನಿವೃತ್ತಿ ಪಿಂಚಣಿಗೆ ಪರಿಗಣಿಸುವುದು

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–**

೫೮೧ (೫೦೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ನಿರುದ್ಯೋಗಿ ಪದವೀಧರರನ್ನು ಸ್ಟೈಫೆಂಡರಿ ಮೂಲಕ ವಿವಿಧ ಇಲಾಖೆಗಳಲ್ಲಿ ೧೯೭೮ ರಲ್ಲಿ ನೇಮಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ೧೯೮೮ ರಲ್ಲಿ ಸ್ಟೈಫೆಂಡರಿ ಪದವೀಧರರಿಗೆ ೫೦% ಮೀಸಲಾತಿ ಕೊಡುವುದಕ್ಕೆ ತೀರ್ಮಾನಿಸಿ ಇಲಾಖೆಗೆ ನೇಮಿಸಕೊಂಡಿರುವುದು ಸರ್ಕಾರದ ಗಮನದಲ್ಲಿದೆಯೇ ;

(ಇ) ಸ್ಟೈಫೆಂಡರಿ ಪದವೀಧರರು ಸುಮಾರು ೧೨, ೧೩ ವರ್ಷಗಳು ಮಿತ ವೇತನ ಪದವೀಧರರಾಗಿ ಸೇವೆ ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಈ) ಸ್ಟೈಫೆಂಡರಿ ಪದವೀಧರರು ಹಾಗೂ ದಿನಗೂಲಿ ನೌಕರರು ಅರ್ಹ ಸೇವೆಯನ್ನು ನಿವೃತ್ತಿ ಪಿಂಚಣಿಗೆ ಪರಿಗಣಿಸುವ ಸಂಬಂಧ ಮಾನ್ಯ ಸರ್ವೋಚ್ಛ ನ್ಯಾಯಾಲಯದಲ್ಲಿ ದಿನಾಂಕ : ೦೨–೦೯–೨೦೧೯ರಂದು ತೀರ್ಪು ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಬಂದಿದ್ದಲ್ಲಿ, ತೀರ್ಪಿನಲ್ಲಿ ಯಾವ ರೀತಿಯಲ್ಲಿ ನಿವೃತ್ತಿ ನೌಕರರ ಅರ್ಹ ಸೇವೆಯನ್ನು ಪರಿಗಣಿಸಿ ಪಿಂಚಣಿ ನೀಡಬೇಕೆಂದು ಆದೇಶಿಸಿರುತ್ತದೆ ; (ವಿವರ ಒದಗಿಸುವುದು)

(ಊ) ಮಿತ ವೇತನದಲ್ಲಿ ನಿರ್ವಹಿಸಿರುವ ಸೇವೆಯನ್ನು ಪರಿಗಣಿಸಿ, ಪಿಂಚಣಿ ಸೌಲಭ್ಯ ನೀಡುವಂತೆ ಆದೇಶದಲ್ಲಿ ತಿಳಿಸಿದ್ದರೂ ಸಹ ಸರ್ಕಾರದಿಂದ ಯಾವುದೇ ಕ್ರಮ ಆಗದಿರುವುದಕ್ಕೆ ಕಾರಣವೇನು;

(ಋ) ಪ್ರಸ್ತುತ ಯಾವ ರೀತಿ ಅರ್ಹ ಸೇವೆಯನ್ನು ಪರಿಗಣಿಸಲಾಗಿದೆ; (ವಿವರ ಒದಗಿಸುವುದು)

(ಎ) ಮಾನ್ಯ ಸರ್ವೋಚ್ಚ ನ್ಯಾಯಾಲಯದ ತೀರ್ಪಿನಂತೆ ಯಾವ ಕಾಲಮಿತಿಯೊಳಗೆ ಈ ನಿವೃತಿ ನೌಕರರಿಗೆ ನ್ಯಾಯ ದೊರಕಿಸಲಾಗುವುದು?

## ಬೆಂಗಳೂರು ನಗರ ಹಾಗೂ ಇನ್ನಿತರೆಡೆ ನಡೆಯುವ ಗಲಭೆ ನಿಯಂತ್ರಿಸುವ ಬಗ್ಗೆ

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–**

೫೮೨ (೫೦೭) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರ ಸೇರಿದಂತೆ ಹಲವಾರು ಕಡೆ ಪೊಲೀಸ್ ಠಾಣೆಗಳ ಮೇಲೆ ಹಾಗೂ ಸಾರ್ವಜನಿಕ ಆಸ್ತಿಗಳ ಮೇಲೆ ದಾಳಿಯಾಗಿ ನಷ್ಟ ಸಂಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಇದನ್ನು ಕಡಿವಾಣ ಹಾಕಲು ಸರ್ಕಾರದ ದಿಟ್ಟ ಕ್ರಮಗಳೇನು ; ಸಾರ್ವಜನಿಕರು ತಮ್ಮ ಆಸ್ತಿಯ ನಷ್ಟ ಪರಿಹಾರಕ್ಕೆ ಕಛೇರಿಯಿಂದ ಮತ್ತೊಂದು ಕಛೇರಿಗೆ ಅಲೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಇಂತಹ ದಾಳಿ ಬಗ್ಗೆ ಸರ್ಕಾರವು ಚುರುಕುತನದಿಂದ ಕೆಲಸ ಮಾಡಲು ಸರ್ಕಾರದ ಹಂತದಲ್ಲಿ ಏನಾದರೂ ಸಮಸ್ಯೆಗಳಿವೆಯೇ; ಸರ್ಕಾರ ಇದನ್ನು ತಡೆಗಟ್ಟುವಲ್ಲಿ ವಿಫಲವಾಗಿದ್ದು, ಈ ಬಗ್ಗೆ ಸರ್ಕಾರದ ಮುಂದಿನ ನಿಲುವುಗಳೇನು ;

(ಈ) ರಾಜ್ಯದಲ್ಲಿ ಇತ್ತೀಚೆಗೆ ಅಪರಾಧ ಚಟುವಟಿಕೆಗಳು ಹೆಚ್ಚಾಗಿದ್ದು, ಎಲ್ಲೆಂದರಲ್ಲಿ ಕಳ್ಳತನ, ಕೊಲೆ, ಹಲ್ಲೆಗಳು ಎಗ್ಗಿಲ್ಲದೆ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಇದರ ಬಗ್ಗೆ ಗುಪ್ತಚರ ಇಲಾಖೆಗೆ ಮಾಹಿತಿ ಇಲ್ಲವೇ ಅಥವಾ ಗೊತ್ತಿದ್ದು ಕಣ್ಣುಮುಚ್ಚಿ ಕುಳಿತುಕೊಂಡಿದೆಯೇ ;

(ಊ) ಹಾಗಿದ್ದಲ್ಲಿ, ಜನರು ನಿರ್ಭಯವಾಗಿ ಓಡಾಡುವುದು ಯಾವಾಗ; ಸರ್ಕಾರವು ಈ ಬಗ್ಗೆ ಕೈಗೊಳ್ಳಲಿರುವ ಕಠಿಣ ಕ್ರಮಗಳೇನು ;

(ಋ) ಪೊಲೀಸ್ ಬೀಟ್ ಅನ್ನು ಸರ್ಕಾರವು ಹೆಚ್ಚಿಸಿಲ್ಲವೆ ; ಹೆಚ್ಚಿಸಿದ್ದಲ್ಲಿ, ಅಪರಾಧ ಚಟುವಟಿಕೆಗಳು ಹಗಲಿರುಳು ನಡೆಯುತ್ತಿರುವುದಕ್ಕೆ ಕಾರಣಗಳೇನು ?

## ಕೆರೆಗಳ ಅಭಿವೃದ್ಧಿ ಬಗ್ಗೆ

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–**

೫೮೩ (೫೦೬) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಒಟ್ಟು ಕೆರೆಗಳೆಷ್ಟು ; ಸರ್ಕಾರದಿಂದ ಇದುವರೆವಿಗೂ ದೊರಕಿದ ಅನುದಾನವೆಷ್ಟು ;

(ಆ) ಕೆರೆಗಳ ಪುನಶ್ಚೇತನ ಮತ್ತು ಅಭಿವೃದ್ಧಿಗೆ ಸರ್ಕಾರವು ಕೈಗೊಂಡಿರುವ ಕ್ರಮಗಳೇನು ;

(ಇ) ಹಲವು ಕೆರೆಗಳು ಅಭಿವೃದ್ಧಿಯನ್ನು ಕಾಣದೇ, ಹೂಳು ತುಂಬಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ರೀತಿ ಪಾಳು ಬಿದ್ದಿರುವ ಕೆರೆಗಳೆಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಈ) ಕಳೆದ ೩ ವರ್ಷಗಳಲ್ಲಿ ರಾಜ್ಯದಲ್ಲಿ ಪುನಶ್ಚೇತನ ಮತ್ತು ಅಭಿವೃದ್ಧಿಗೊಂಡಿರುವ ಕೆರೆಗಳೆಷ್ಟು ; ಬಿಡುಗಡೆಯಾದ ಅನುದಾನವೆಷ್ಟು ?

## ಸಣ್ಣ ಕೈಗಾರಿಕೆಗಳನ್ನು ಸುಧಾರಿಸಿ ಉದ್ಯೋಗ ಭದ್ರತೆ ನೀಡುವ ಬಗ್ಗೆ

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–**

೫೮೪ (೫೦೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಲಾಕ್‌ಡೌನ್ ಸಮಯದಲ್ಲಿ ಹಲವು ಜನರು ಉದ್ಯೋಗ ಕಳೆದುಕೊಂಡಿರುವುದು ಮತ್ತು ವೇತನದ ಅರ್ಧಭಾಗವನ್ನು ಮಾತ್ರ ಪಡೆಯುತ್ತಿರುವುದು ಸರ್ಕಾರದ ಗಮನದಲ್ಲಿದೆಯೇ ;

(ಆ) ಹಾಗಿದ್ದಲ್ಲಿ, ಸರ್ಕಾರವು ಈ ಬಗ್ಗೆ ಕೈಗೊಂಡ ಕ್ರಮಗಳೇನು ; ಸಣ್ಣ ಕೈಗಾರಿಕೆಗಳನ್ನು ಸುಧಾರಿಸಿ ಉದ್ಯೋಗಿಗಳನ್ನು ಹುರಿದುಂಬಿಸುವಂತೆ ಸರ್ಕಾರವು ಇಟ್ಟ ಹೆಜ್ಜೆಗಳೇನು ;

(ಇ) ರಾಜ್ಯದಲ್ಲಿ ಕಳೆದ ವರ್ಷದಿಂದ ಯಾವ ಯಾವ ಭಾಗಗಳಲ್ಲಿ ಬಂಡವಾಳ ಹೂಡಿಕೆಯಾಗಿದೆ ? (ಪೂರ್ಣ ವಿವರ ನೀಡುವುದು)

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಅಂತರ್ಜಲ ಕುಸಿಯುತ್ತಿರುವ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೮೫ (೫೫೬) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಅಂತರ್ಜಲ ಮಟ್ಟ ದಿನೇ ದಿನೇ ಕುಸಿಯುತ್ತಿದ್ದು ಅಂತರ್ಜಲ ವೃದ್ಧಿಗೆ ಸರ್ಕಾರ ಹಾಕಿಕೊಂಡಿರುವ ಯೋಜನೆಗಳೇನು ; (ಸಂಪೂರ್ಣ ವಿವರ ನೀಡುವುದು)

(ಆ) ಮೇಲ್ಕಂಡ ಜಿಲ್ಲೆಗಳಲ್ಲಿ ಅಂತರ್ಜಲ ಮಟ್ಟ ಹೆಚ್ಚಿಸುವ ಕಾರ್ಯಕ್ರಮಗಳಿಗೆ ಕಳೆದ ಮೂರು ವರ್ಷಗಳಲ್ಲಿ ಇಟ್ಟಿರುವ ಅನುದಾನವೆಷ್ಟು ; ಖರ್ಚಾದ ಹಣವೆಷ್ಟು ; (ವಿವರ ನೀಡುವುದು)

(ಇ) ಸದರಿ ಜಿಲ್ಲೆಗಳಲ್ಲಿ ಅಂತರ್ಜಲ ಮಟ್ಟ ಹೆಚ್ಚಿಸುವುದಕ್ಕೆ ವಿಶೇಷ ಯೋಜನೆಯನ್ನು ಜಾರಿಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿರುವ ಸಣ್ಣ ಕೈಗಾರಿಕೆ ಶೆಡ್‌ಗಳ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೮೬ (೫೫೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿರುವ ಸಣ್ಣ ಕೈಗಾರಿಕೆಗಳ ಶೆಡ್‌ಗಳ ಸಂಖ್ಯೆ ಎಷ್ಟು ; (ಸಂಕ್ಷಿಪ್ತ ವಿವರ ನೀಡುವುದು)

(ಆ) ಸಣ್ಣ ಕೈಗಾರಿಕೆ ಶೆಡ್‌ಗಳಿಂದ ಸರ್ಕಾರಕ್ಕೆ ಬರುತ್ತಿರುವ ಆದಾಯ ಎಷ್ಟು ; (ವಿವರ ನೀಡುವುದು)

(ಇ) ಮೇಲ್ಕಂಡ ಜಿಲ್ಲೆಗಳಲ್ಲಿ ಖಾಲಿ ಇರುವ ಸಣ್ಣ ಕೈಗಾರಿಕೆಗಳ ಶೆಡ್‌ಗಳ ಸಂಖ್ಯೆ ಎಷ್ಟು ; (ಮಾಹಿತಿ ನೀಡುವುದು)

(ಈ) ೨೦೧೭-೧೮, ೨೦೧೮-೧೯, ೨೦೧೯-೨೦ನೇ ಸಾಲಿನಲ್ಲಿ ಸಣ್ಣ ಕೈಗಾರಿಕೆಗಳ ಅಭಿವೃದ್ಧಿಗಾಗಿ ಮತ್ತು ಸಣ್ಣ ಕೈಗಾರಿಕೆಗಳ ವಲಯಗಳಲ್ಲಿ ಮೂಲ ಸೌಕರ್ಯಗಳನ್ನು ಒದಗಿಸಲು ಬಿಡುಗಡೆ ಮಾಡಿರುವ ಅನುದಾನವೆಷ್ಟು ? (ವಿವರ ನೀಡುವುದು)

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿರುವ ಕೆರೆಗಳ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫೮೭ (೫೫೭) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಎಷ್ಟು ಕೆರೆಗಳಿವೆ ;

(ಆ) ೨೦೧೬-೧೭, ೨೦೧೭-೧೮ ಮತ್ತು ೨೦೧೮-೧೯ನೇ ಸಾಲಿನಲ್ಲಿ ಮೇಲ್ಕಂಡ ಎಷ್ಟು ಕೆರೆಗಳಲ್ಲಿ ಅಭಿವೃದ್ಧಿ ಕಾರ್ಯ ಕೈಗೆತ್ತಿಕೊಳ್ಳಲಾಗಿದೆ; (ವಿವರ ನೀಡುವುದು)

(ಇ) ಈ ಕೆರೆಗಳನ್ನು ನೀರಾವರಿಗೆ ಅನುಕೂಲವಾಗುವಂತೆ ಅಭಿವೃದ್ಧಿಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ಬೃಂದಾವನ ಉದ್ಯಾನವನವನ್ನು ವಿಶ್ವದರ್ಜೆಗೆ ಏರಿಸುವ ಬಗ್ಗೆ

**ಶ್ರೀ ಎಸ್. ನಾಗರಾಜು (ಸಂದೇಶ್ ನಾಗರಾಜು)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೮೮ (೫೮೪) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸುಪ್ರಸಿದ್ಧ ಕೃಷ್ಣರಾಜಸಾಗರದ ಬೃಂದಾವನ ಉದ್ಯಾನವನವನ್ನು ವಿಶ್ವದರ್ಜೆಗೇರಿಸುವ ಬಗ್ಗೆ ಸರ್ಕಾರ ಚಿಂತನೆ ನಡೆಸುತ್ತಿದೆಯೇ ; ಈ ಬಗ್ಗೆ ಯೋಜನೆ ಹಾಗೂ ರೂಪುರೇಷೆಗಳನ್ನು ಸಿದ್ದಪಡಿಸಲಾಗಿದೆಯೇ ;

(ಆ) ಈ ಉದ್ಯಾನವನದ ಅಭಿವೃದ್ಧಿಗೆ ಸಂಬಂಧಿಸಿದಂತೆ ಪ್ರಸ್ತುತ ಯಾವ ಯಾವ ಕಾಮಗಾರಿಗಳು ಚಾಲನೆಯಲ್ಲಿವೆ ; ಬೃಂದಾವನ ಉದ್ಯಾನವನದ ವಾಹನ ನಿಲುಗಡೆ ಸ್ಥಳವನ್ನು ಅಭಿವೃದ್ಧಿಪಡಿಸಲು ಕ್ರಮ ತೆಗೆದುಕೊಳ್ಳಲಾಗುವುದೇ ;

(ಇ) ಬೃಂದಾವನ ಉದ್ಯಾನವನ ವೀಕ್ಷಣೆಗೆ ಆಗಮಿಸುವ ಹಾಗೂ ಈ ರಸ್ತೆಯಲ್ಲಿ ಮುಂದೆ ಮಂಡ್ಯ ಜಿಲ್ಲೆಯ ಪಾಂಡವಪುರ ತಾಲ್ಲೂಕಿಗೆ, ಕೃಷ್ಣರಾಜಪೇಟೆ ತಾಲ್ಲೂಕಿನ ಬೂಕಿನಕೆರೆ, ವರಾಹನಾಥ ಕಲ್ಲಹಳ್ಳಿ, ಕಡೆಗೆ ಹೋಗುವ ವಾಹನಗಳು ಕೃಷ್ಣರಾಜಸಾಗರ ಜಲಾಶಯದ ಹಿಂದೆ ಇರುವ ಸೇತುವೆಯನ್ನು ಹಾದು ಹೋಗಲು ವಾಹನ ಶುಲ್ಕವನ್ನು ಕಟ್ಟಬೇಕಾಗಿದೆಯೇ ; ನಿಗದಿಪಡಿಸಿರುವ ವಾಹನ ಶುಲ್ಕ ಎಷ್ಟು ?

## ಬನ್ನಹಳ್ಳಿ ಹುಂಡಿ ಏತ ನೀರಾವರಿ ಯೋಜನೆಯ ದುರಸ್ಥಿ ಕಾರ್ಯ

**ಶ್ರೀ ಎಸ್. ನಾಗರಾಜು (ಸಂದೇಶ್ ನಾಗರಾಜು)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೮೯ (೫೮೩) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ನಂಜನಗೂಡು ತಾಲ್ಲೂಕು ತಾಯೂರು ಸಮೀಪದ ಬನ್ನಹಳ್ಳಿ ಹುಂಡಿ ಏತ ನೀರಾವರಿ ಯೋಜನೆಯ ಅಚ್ಚುಕಟು ಪ್ರದೇಶ ಎಷ್ಟು ; (ವಿವರ ಒದಗಿಸುವುದು) ಈ ಯೋಜನೆಯು ಕಳೆದ ಐದಾರು ವರ್ಷಗಳಿಂದ ತಾಂತ್ರಿಕ ದೋಷದಿಂದ ಕೂಡಿದ್ದು, ನಾಲೆಗಳಿಗೆ ನೀರು ಹರಿಯದೇ ಅಚ್ಚುಕಟ್ಟುದಾರರು ಸಂಕಷ್ಟಕ್ಕೀಡಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈಚೆಗೆ ಈ ಬಗ್ಗೆ ಅಚ್ಚುಕಟ್ಟುದಾರರು ಪ್ರತಿಭಟನೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಯೋಜನೆಯ ತಾಂತ್ರಿಕ ದೋಷಗಳನ್ನು ಪರಿಹರಿಸಿ, ನಾಲೆಗಳಿಗೆ ನೀರು ಬಿಡುಗಡೆ ಮಾಡಿ ರೈತರ ನೆರವಿಗೆ ಬರಲು ಕ್ರಮ ಜರುಗಿಸಲಾಗುವುದೇ ?

## ಮುತ್ತಿನ ಮುಳ್ಳಸೋಗೆ ಏತ ನೀರಾವರಿ ಯೋಜನೆಯಿಂದ ಕೆರೆಗಳಿಗೆ ನೀರು ತುಂಬಿಸುವ ಬಗ್ಗೆ

**ಶ್ರೀ ಎಸ್. ನಾಗರಾಜು (ಸಂದೇಶ್ ನಾಗರಾಜು)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೯೦ (೫೮೨) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪಿರಿಯಾಪಟ್ಟಣ ತಾಲ್ಲೂಕು, ಮುತ್ತಿನ ಮುಳ್ಳಸೋಗೆ ಬಳಿ, ಕಾವೇರಿ ನದಿಯಿಂದ ಏತ ನೀರಾವರಿ ಯೋಜನೆ ಮೂಲಕ ಎಷ್ಟು ಕೆರೆ ಕಟ್ಟೆಗಳಿಗೆ ನೀರು ತುಂಬಿಸಲು ಯೋಜನೆಯನ್ನು ಸಿದ್ದಪಡಿಸಲಾಗಿದೆ;

(ಆ) ಈ ಯೋಜನೆಯ ಅಂದಾಜು ವೆಚ್ಚ ಎಷ್ಟು ; ಈಗ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ ; ಯಾವ ಯಾವ ಕಾಮಗಾರಿಗಳು ಪೂರ್ಣಗೊಂಡಿವೆ ; ಉಳಿದ ಕಾಮಗಾರಿಗಳು ಯಾವ ಹಂತದಲ್ಲಿದೆ ; ಎಷ್ಟು ಕೆರೆಗಳಿಗೆ ನೀರು ತುಂಬಿಸಲಾಗಿದೆ ; ನಿಧಾನಗತಿಯಿಂದ ಸಾಗಿರುವ ಈ ಯೋಜನೆಯನ್ನು ಬೇಗ ಪೂರ್ಣಗೊಳಿಸಲು ಕ್ರಮ ಜರುಗಿಸಲಾಗುವುದೇ ?

**ಕೆ. ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. 047/450 ಪ್ರತಿಗಳು/18–09–2020